Volume : 9 | Issue : 150 | August : 29 : 2026 : Saturday
ಸಂಪುಟ : 9 | ಸಂಚಿಕೆ : 150 | ಆಗಸ್ಟ್ : 29 : 2026 : ಶನಿವಾರ

www.VIKRAMAVAHINI.com

— ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ —



# ವಿಕ್ರಮ ವಾಹಿನಿ

ಪುಟ 4 ₹2 || ಕನ್ನಡ ದಿನಪತ್ರಿಕೆ ||

VIKRAMA VAHINI
PRGI NO: KARKAN/2018/78481



ಭಾರತರತ್ನ ಎಂ.ಎಸ್. ಸುಬ್ಬುಲಕ್ಷ್ಮಿ ಬಯೋಪಿಕ್‌ನಲ್ಲಿ ರಶ್ಮಿಕಾ ಮಂದಣ್ಣ; ಗೌತಮ್ ತಿನ್ನನುರಿ ನಿರ್ದೇಶನದ ಚಿತ್ರಕ್ಕೆ ಸೆ.16ರಂದು ಅಧಿಕೃತ ಘೋಷಣೆ ಮಾಡಲಿದ್ದಾರಂ

ಸರ್ಕಾರಿ ನೌಕರರ ಎಲ್ಲಾ ಬೇಡಿಕೆಗಳ ಈಡೇರಿಕೆಗಾಗಿ ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಲಾಗುವುದು: ಮುನಿಯಪ್ಪ । ಪುಟ 2

‘ವಾಲ್ಮೀಕಿ ನಿಗಮದ ರೂ 185 ಕೋಟಿ ಸಂಪೂರ್ಣ ವಾಪಸ್ ಬರಬೇಕು’ । ಪುಟ 4



■ ಸುದ್ದಿ ಚುಟುಕು

## ಜಮೀನು ಕಳೆದುಕೊಳ್ಳುವ ರೈತರಿಗೆ ಭಾವನಾತ್ಮಕ ಪರಿಹಾರ: ಹೈಕೋರ್ಟ್

● ವಿಕ್ರಮ ವಾಹಿನಿ । ಬೆಂಗಳೂರು

ಅಭಿವೃದ್ಧಿ ಕಾಮಗಾರಿಗಳಿಗಾಗಿ ರಾಷ್ಟ್ರೀಯ ಹೆದ್ದಾರಿ ಯೋಜನೆಗೆ ಜಮೀನು ಕಳೆದುಕೊಳ್ಳುವ ರೈತರು ಮಾರುಕಟ್ಟೆ ಮೌಲ್ಯದ ಪರಿಹಾರದ ಜತೆಗೆ ಮಾನಸಿಕ ನಷ್ಟಕ್ಕೆ (ಸೊಲಾಟಿಯಂ) ಪರಿಹಾರ ಹಾಗೂ ಬಡ್ಡಿ ಪಡೆಯಲು ಕಾನೂನುಬದ್ಧ ಹಕ್ಕು ಹೊಂದಿದ್ದಾರೆ ಎಂದು ಕರ್ನಾಟಕ ಹೈಕೋರ್ಟ್ ಸ್ಪಷ್ಟಪಡಿಸಿದೆ.

ಬಳ್ಳಾರಿ ಜಿಲ್ಲೆಯ ಹೊಸಪೇಟೆ ತಾಲೂಕಿನ ಅಮರಾವತಿ ಗ್ರಾಮದ ಜಿ. ಸಿದ್ದರಾಮಯ್ಯ ಅವರ ವಾರಸುದಾರರು ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ಧಾರವಾಡ ಪೀಠದ ನ್ಯಾಯಮೂರ್ತಿ ಸಿ.ಎಂ. ಪೂಣಚ್ಚ ಅವರು ಈ ಮಹತ್ವದ ಆದೇಶ ನೀಡಿದ್ದಾರೆ.

ರಾಷ್ಟ್ರೀಯ ಹೆದ್ದಾರಿ ಕಾಯ್ದೆಯಡಿ ಭೂಸ್ವಾಧೀನಗೊಂಡವರಿಗೂ ಭೂಸ್ವಾಧೀನ ಕಾಯ್ದೆಯ ಸೆಕ್ಷನ್ 23(2)ರಡಿ ಸೊಲಾಟಿಯಂ ಹಾಗೂ ಸೆಕ್ಷನ್ 28ರಡಿ ಬಡ್ಡಿ ಪಡೆಯುವ ಹಕ್ಕು ಇದೆ ಎಂದು ನ್ಯಾಯಪೀಠ ತಿಳಿಸಿದೆ. ಈ ಸೌಲಭ್ಯಗಳನ್ನು ನಿರಾಕರಿಸುವುದು ಸಂವಿಧಾನದ 14 ಮತ್ತು 300–ಎ ವಿಧಿಗಳ ಆಶಯಕ್ಕೆ ವಿರುದ್ಧವಾಗುತ್ತದೆ ಎಂದು ಅಭಿಪ್ರಾಯಪಟ್ಟಿದೆ.

ಹೀಗಾಗಿ ಅರ್ಜಿದಾರರಿಗೆ ಕಾನೂನು ಬದ್ಧವಾಗಿ ದೊರೆಯಬೇಕಾದ ಸೊಲಾಟಿಯಂ ಮತ್ತು ಬಡ್ಡಿಯನ್ನು ಲೆಕ್ಕಹಾಕಿ ಸೂಕ್ತ ಪರಿಹಾರ ನೀಡುವಂತೆ ವಿಶೇಷ ಭೂಸ್ವಾಧೀನ ಅಧಿಕಾರಿಗೆ ನ್ಯಾಯಾಲಯ ನಿರ್ದೇಶಿಸಿದೆ. ಈ ಸಂಬಂಧ ಸೆಪ್ಟೆಂಬರ್ 10ರಂದು ಮಧ್ಯಾಹ್ನ 3 ಗಂಟೆಗೆ ಅಧಿಕಾರಿಯ ಮುಂದೆ ಹಾಜರಾಗುವಂತೆ ಉಭಯ ಪಕ್ಷಗಳಿಗೆ ಸೂಚಿಸಿದೆ.

ರಾಷ್ಟ್ರೀಯ ಹೆದ್ದಾರಿ ವಿಸ್ತರಣೆಗಾಗಿ ಸಿದ್ದರಾಮಯ್ಯ ಅವರ ಜಮೀನನ್ನು 2009ರಲ್ಲಿ ಸ್ವಾಧೀನಪಡಿಸಿಕೊಳ್ಳಲಾಗಿತ್ತು. ಪರಿಹಾರಕ್ಕೆ ಸಂಬಂಧಿಸಿದ ವಿವಾದದ ನಡುವೆಯೇ ಅವರು ಮೃತಪಟ್ಟಿದ್ದು, ಅವರ ವಾರಸುದಾರರು ನ್ಯಾಯಾಂಗ ಹೋರಾಟ ಮುಂದುವರಿಸಿದ್ದರು. ಅರ್ಜಿದಾರರ ಪರ ವಕೀಲ ಸಂಕೇತ್ ಶಂಕರಪ್ಪ ಅಂಬಲಿ ವಾದ ಮಂಡಿಸಿದ್ದರು.

## ರೇಣುಕಾಸ್ವಾಮಿ ಪ್ರಕರಣ: ಪ್ರದೋಷ್‌ಗೆ ಕೋರ್ಟ್ ಸಮನ್ಸ್

● ವಿಕ್ರಮ ವಾಹಿನಿ । ಬೆಂಗಳೂರು

ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ 14ನೇ ಆರೋಪಿಯಾಗಿರುವ ಪ್ರದೋಷ್ ಅವರನ್ನು ಮಾಫಿ ಸಾಕ್ಷಿಯಾಗಿ ಪರಿಗಣಿಸಿರುವ ನ್ಯಾಯಾಲಯ, ಸೆಪ್ಟೆಂಬರ್ 2ರಂದು ನ್ಯಾಯಾಲಯಕ್ಕೆ ಹಾಜರಾಗಿ ಸಾಕ್ಷ್ಯ ದಾಖಲಿಸುವಂತೆ ಸಮನ್ಸ್ ಜಾರಿ ಮಾಡಿದೆ.

ಮಾಫಿ ಸಾಕ್ಷಿಯಾಗಲು ಪ್ರದೋಷ್ ಸಲ್ಲಿಸಿದ್ದ ಅರ್ಜಿಯನ್ನು ಬೆಂಗಳೂರಿನ 59ನೇ ಸಿಸಿಹೆಚ್ ನ್ಯಾಯಾಲಯ ಆಗಸ್ಟ್ 25ರಂದು ಅಂಗೀಕರಿಸಿತ್ತು. ಇದರಂತೆ ಸೆಪ್ಟೆಂಬರ್ 2ರಂದು ನ್ಯಾಯಾಲಯದ ಮುಂದೆ ಹಾಜರಾಗಿ ಪ್ರಕರಣಕ್ಕೆ ಸಂಬಂಧಿಸಿದಂತೆ ಹೇಳಿಕೆ ದಾಖಲಿಸುವಂತೆ ಜೈಲಧಿಕಾರಿಗಳ ಮೂಲಕ ಸಮನ್ಸ್ ಜಾರಿಗೊಳಿಸಲು ನ್ಯಾಯಾಧೀಶರಾದ ಸುಜಾತ ಮಡಿವಾಳಪ್ಪ ಸಾಂಬ್ರಾಣಿ ಸೂಚಿಸಿದ್ದಾರೆ.

ಸಿಆರ್‌ಪಿಸಿ ಸೆಕ್ಷನ್ 307ರಡಿ ಸಲ್ಲಿಸಿದ್ದ ಅರ್ಜಿಯನ್ನು ಪುರಸ್ಕರಿಸಿರುವ ನ್ಯಾಯಾಲಯ, ಪ್ರದೋಷ್ ಅವರು ಪ್ರಕರಣದ ಸಂಪೂರ್ಣ ಸತ್ಯವನ್ನು ತಿಳಿಸಬೇಕು ಹಾಗೂ ಇತರ ಆರೋಪಿಗಳ ಪಾತ್ರ ಸೇರಿದಂತೆ ತಮ್ಮ ಬಳಿ ಇರುವ ಎಲ್ಲ ಮಾಹಿತಿಯನ್ನು ಬಹಿರಂಗಪಡಿಸಬೇಕು ಎಂದು ಷರತ್ತು ವಿಧಿಸಿದೆ.

ಸುಳ್ಳು ಹೇಳಿಕೆ ನೀಡಿದರೆ ಮತ್ತೆ ಆರೋಪಿ: ಸಾಕ್ಷ್ಯದಲ್ಲಿ ಸುಳ್ಳು ಮಾಹಿತಿ ನೀಡಿದರೆ ಅಥವಾ ಬಳಿಕ ಹೇಳಿಕೆಯಿಂದ ಹಿಂದೆ ಸರಿದರೆ ಪ್ರದೋಷ್ ಅವರನ್ನು ಮತ್ತೆ ಆರೋಪಿಯನ್ನಾಗಿ ಪರಿಗಣಿಸಿ, ಸುಳ್ಳು ಸಾಕ್ಷ್ಯ ನೀಡಿದ ಆರೋಪದಡಿ ಪ್ರಕರಣ ದಾಖಲಿಸಬಹುದು ಎಂದು ನ್ಯಾಯಾಲಯ ಎಚ್ಚರಿಕೆ ನೀಡಿದೆ.

ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ನಟ ದರ್ಶನ್, ಪವಿತ್ರಾ ಗೌಡ ಸೇರಿದಂತೆ 17 ಮಂದಿಯನ್ನು 2024ರ ಜೂನ್‌ನಲ್ಲಿ ಕಾಮಾಕ್ಷಿಪಾಳ್ಯ ಪೊಲೀಸರು ಬಂಧಿಸಿದ್ದರು. ಜಾಮೀನು ರದ್ದಾದ ಬಳಿಕ ಪ್ರದೋಷ್ ಸೇರಿದಂತೆ ಕೆಲ ಆರೋಪಿಗಳು ಮತ್ತೆ ನ್ಯಾಯಾಂಗ ಬಂಧನದಲ್ಲಿದ್ದು, ಇದೀಗ ನ್ಯಾಯಾಲಯದ ಆದೇಶದಂತೆ ಸೆ.2ರಂದು ಪ್ರದೋಷ್ ಅವರ ಮಾಫಿ ಸಾಕ್ಷಿ ಹೇಳಿಕೆ ದಾಖಲಾಗಲಿದೆ. ಪ್ರದೋಷ್ ಅವರ ಹೇಳಿಕೆ ಪ್ರಕರಣದ ತನಿಖೆ ಹಾಗೂ ಮುಂದಿನ ನ್ಯಾಯಾಂಗ ಪ್ರಕ್ರಿಯೆಯಲ್ಲಿ ಮಹತ್ವದ ಪಾತ್ರ ವಹಿಸುವ ಸಾಧ್ಯತೆಯಿದೆ.



ನೇಪಾಳದ ನುವಾಕೋಟ್ ಜಿಲ್ಲೆಯ ತ್ರಿಶೂಲಿಯಲ್ಲಿ ಸಂಭವಿಸಿದ ಭೀಕರ ಹಠಾತ್ ಪ್ರವಾಹದ ಬಳಿಕ ರಕ್ಷಣಾ ಕಾರ್ಯಾಚರಣೆ ತೀವ್ರಗೊಂಡಿದೆ. ಪ್ರವಾಹದ ನೀರಿನಲ್ಲಿ ಸಿಲುಕಿದ್ದ ವ್ಯಕ್ತಿಯೊಬ್ಬರನ್ನು ಭಾರೀ ಯಂತ್ರೋಪಕರಣದ ನೆರವಿನಿಂದ ಸುರಕ್ಷಿತ ಸ್ಥಳಕ್ಕೆ ಸ್ಥಳಾಂತರಿಸುತ್ತಿರುವ ದೃಶ್ಯ. ಪ್ರವಾಹ ಪೀಡಿತ ಪ್ರದೇಶಗಳಲ್ಲಿ ಸಿಲುಕಿರುವವರ ರಕ್ಷಣೆ ಹಾಗೂ ಸುರಕ್ಷಿತ ಸ್ಥಳಾಂತರಕ್ಕಾಗಿ ಅಧಿಕಾರಿಗಳು ಮತ್ತು ರಕ್ಷಣಾ ಸಿಬ್ಬಂದಿ ನಿರಂತರ ಕಾರ್ಯಾಚರಣೆ ನಡೆಸುತ್ತಿದ್ದಾರೆ.

## ನಾಗೇಂದ್ರ ರಾಜೀನಾಮೆ; ಪ್ರತಿಪಕ್ಷಗಳಿಗೆ ಸವಾಲು

● ವಿಕ್ರಮ ವಾಹಿನಿ । ಬೆಂಗಳೂರು

ವಾಲ್ಮೀಕಿ ಅಭಿವೃದ್ಧಿ ನಿಗಮದ ಹಣ ಅಕ್ರಮ ವರ್ಗಾವಣೆ ಪ್ರಕರಣದ ಹಿನ್ನೆಲೆಯಲ್ಲಿ ತೀವ್ರ ರಾಜಕೀಯ ಒತ್ತಡ ಎದುರಿಸುತ್ತಿದ್ದ ಯೋಜನೆ ಮತ್ತು ಸಾಂಖ್ಯಿಕ ಸಚಿವ ಬಿ. ನಾಗೇಂದ್ರ ಅವರು ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡುವುದಾಗಿ ಶುಕ್ರವಾರ ಘೋಷಿಸಿದರು. ಪಕ್ಷಕ್ಕೆ ಮುಜುಗರ ಉಂಟಾಗಬಾರದು ಹಾಗೂ ಮುಖ್ಯಮಂತ್ರಿ ಅವರ ಅಭಿವೃದ್ಧಿ ಕಾರ್ಯಗಳಿಗೆ ಅಡ್ಡಿಯಾಗಬಾರದು ಎಂಬ ಕಾರಣಕ್ಕೆ ಸ್ವಯಂಪ್ರೇರಿತವಾಗಿ ರಾಜೀನಾಮೆ ನೀಡುತ್ತಿರುವುದಾಗಿ ಅವರು ತಿಳಿಸಿದರು.

ವಿಧಾನಸೌಧದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ನಾಗೇಂದ್ರ, ತಮ್ಮ ವಿರುದ್ಧ ಆಧಾರರಹಿತ ಆರೋಪಗಳನ್ನು ಮಾಡಲಾಗುತ್ತಿದೆ ಎಂದು ಕಣ್ಣೀರಿಟ್ಟರು. ರಾಜ್ಯಪಾಲರು ತಮ್ಮ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವ ಹಿನ್ನೆಲೆಯಲ್ಲಿ ಕಾನೂನು ಪ್ರಕ್ರಿಯೆಯನ್ನು ಗೌರವಿಸುವುದಾಗಿ ಹೇಳಿದ ಅವರು, ಪ್ರಕರಣದಲ್ಲಿ ತಮ್ಮ ಯಾವುದೇ ಪಾತ್ರವಿಲ್ಲ ಎಂದು ಸ್ಪಷ್ಟಪಡಿಸಿದರು.



**ಶಾಸಕ ಸ್ಥಾನಕ್ಕೂ ರಾಜೀನಾಮೆಗೆ ಸಿದ್ಧ**

ತಮ್ಮ ವಿರುದ್ಧದ ಆರೋಪಗಳು ಸಾಬೀತಾದರೆ ರಾಜಕೀಯವಾಗಿ ಎದುರಿಸಲು ಸಿದ್ಧವಿರುವುದಾಗಿ ಹೇಳಿದ ನಾಗೇಂದ್ರ, ಅಗತ್ಯವಿದ್ದರೆ ಶಾಸಕ ಸ್ಥಾನಕ್ಕೂ ರಾಜೀನಾಮೆ ನೀಡಿ ಚುನಾವಣೆಗೆ ಹೋಗಲು ಸಿದ್ಧ ಎಂದು ಘೋಷಿಸಿದರು. ಬಳ್ಳಾರಿಯ ಬಿಜೆಪಿ ನಾಯಕರಾದ ಬಿ. ಶ್ರೀರಾಮುಲು ಮತ್ತು ಜನಾರ್ದನ ರೆಡ್ಡಿ ಅವರಿಗೆ ನೇರ ಸವಾಲು ಹಾಕಿದ ಅವರು, "ಜನತಾ ನ್ಯಾಯಾಲಯಕ್ಕೆ ಬನ್ನಿ, ಜನರ ತೀರ್ಪು ಪಡೆಯೋಣ" ಎಂದು ಹೇಳಿದರು. 3ನೇ ಪುಟಕ್ಕೆ...

## ನೇಪಾಳ ಪ್ರವಾಹ: ಶಿವಮೊಗ್ಗದ 6 ಪ್ರವಾಸಿಗರು ಸುರಕ್ಷಿತ

● ವಿಕ್ರಮ ವಾಹಿನಿ । ಶಿವಮೊಗ್ಗ


ಭಾರಿ ಪ್ರವಾಹದಿಂದ ನೇಪಾಳದ ಹಲವು ಭಾಗಗಳಲ್ಲಿ ಆತಂಕದ ಪರಿಸ್ಥಿತಿ ನಿರ್ಮಾಣವಾಗಿರುವ ಬೆನ್ನಲ್ಲೇ, ಪ್ರವಾಸಕ್ಕೆ ತೆರಳಿದ್ದ ಶಿವಮೊಗ್ಗ ಜಿಲ್ಲೆಯ ಆರು ಮಂದಿ ಸುರಕ್ಷಿತವಾಗಿದ್ದು, ಭಾರತಕ್ಕೆ ವಾಪಸಾಗುತ್ತಿದ್ದಾರೆ.

ಶಿವಮೊಗ್ಗದ ಗುರುಶಾಂತೇಶ್ವರ ಟೂರ್ಸ್ ಆ್ಯಂಡ್ ಟ್ರಾವೆಲ್ಸ್ ಮೂಲಕ ತೆರಳಿದ್ದ ಪ್ರವಾಸಿಗರ ತಂಡದಲ್ಲಿ ಜಿಲ್ಲೆಯ ಆರು ಮಂದಿ ಇದ್ದರು. ಪ್ರವಾಹ ಪೀಡಿತ ಪ್ರದೇಶಕ್ಕೆ ತೆರಳಬೇಕಿದ್ದ ತಂಡವನ್ನು ಸುಮಾರು 5 ಕಿ.ಮೀ. ಮುನ್ನವೇ ಸ್ಥಳೀಯ ಅಧಿಕಾರಿಗಳು ತಡೆದು ವಾಪಸ್ ಕಳುಹಿಸಿದ್ದರಿಂದ ಅಪಾಯದಿಂದ ಪಾರಾಗಿದ್ದಾರೆ ಎಂದು ಪ್ರವಾಸಿಗರು ತಿಳಿಸಿದ್ದಾರೆ.

ಹೊಸನಗರದ ವಕೀಲ ಪ್ರಶಾಂತ್ ಮಾತನಾಡಿ, "ನಾವು ನೇಪಾಳದ ದಕ್ಷಿಣ ಭಾಗದಲ್ಲಿದ್ದು, ಪೋಖರಾದಿಂದ ಕಠ್ಮಂಡುವಿಗೆ ತೆರಳಬೇಕಿತ್ತು. ಆದರೆ, ಸ್ಥಳೀಯ ಸರ್ಕಾರ ನಮ್ಮನ್ನು ತಡೆದ ಹಿನ್ನೆಲೆಯಲ್ಲಿ ಪ್ರವಾಸವನ್ನು ಮೊಟಕುಗೊಳಿಸಿ ಭಾರತಕ್ಕೆ ಮರಳುತ್ತಿದ್ದೇವೆ. ಲುಂಬಿನಿಯಿಂದ ಭಾರತದ ಗಡಿ ಪ್ರವೇಶಿಸುತ್ತಿದ್ದೇವೆ. ನಮ್ಮ ತಂಡದಲ್ಲಿರುವ 54 ಮಂದಿಯೂ ಸುರಕ್ಷಿತವಾಗಿದ್ದಾರೆ" ಎಂದು ತಿಳಿಸಿದ್ದಾರೆ. 3ನೇ ಪುಟಕ್ಕೆ...

## ನೇಮಕಾತಿ ಪರೀಕ್ಷೆಗಳಿಗೆ ಕಠಿಣ ನಿಯಮ: ಸರ್ಕಾರದ ಕರಡು ಪ್ರಕಟ

● ವಿಕ್ರಮ ವಾಹಿನಿ । ಬೆಂಗಳೂರು



**ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಅಕ್ರಮ ತಡೆಗೆ ರಾಜ್ಯ ಸರ್ಕಾರ ಕಠಿಣ ನಿಯಮಗಳ ಕರಡು ಪ್ರಕಟಿಸಿದ್ದು, ಪ್ರಶ್ನೆಪತ್ರಿಕೆ ಭದ್ರತೆ, ಪರೀಕ್ಷಾ ಕೇಂದ್ರಗಳ ನಿಗಾ, ಬಯೋಮೆಟ್ರಿಕ್ ಪರಿಶೀಲನೆ, ಓಎಂಆರ್ ನಿರ್ವಹಣೆ ಹಾಗೂ ಆನ್‌ಲೈನ್ ಪರೀಕ್ಷೆಗಳ ಸುರಕ್ಷತೆಗೆ ಹಲವು ಹೊಸ ಮಾರ್ಗಸೂಚಿಗಳನ್ನು ಪ್ರಸ್ತಾಪಿಸಿದೆ.**

ಸ್ಪರ್ಧಾತ್ಮಕ ಪರೀಕ್ಷೆಗಳು ಹಾಗೂ ಸರ್ಕಾರಿ ನೇಮಕಾತಿ ಪ್ರಕ್ರಿಯೆಯಲ್ಲಿ ಅಕ್ರಮಗಳಿಗೆ ಕಡಿವಾಣ ಹಾಕಿ, ಪರೀಕ್ಷಾ ವ್ಯವಸ್ಥೆಯನ್ನು ಮತ್ತಷ್ಟು ಪಾರದರ್ಶಕ ಹಾಗೂ ಸುರಕ್ಷಿತಗೊಳಿಸಲು ರಾಜ್ಯ ಸರ್ಕಾರ ಹೊಸ ಕಠಿಣ ನಿಯಮಗಳ ಕರಡು ಅಧಿಸೂಚನೆ ಪ್ರಕಟಿಸಿದೆ. ಸಾರ್ವಜನಿಕರಿಂದ ಆಕ್ಷೇಪಣೆ ಹಾಗೂ ಸಲಹೆಗಳನ್ನು ಆಹ್ವಾನಿಸಲಾಗಿದೆ.

ಕರ್ನಾಟಕ ಸಾರ್ವಜನಿಕ ಪರೀಕ್ಷೆ (ನೇಮಕಾತಿಯಲ್ಲಿನ ಭ್ರಷ್ಟಾಚಾರ ಮತ್ತು ಅನುಚಿತ ವಿಧಾನಗಳ ಪ್ರತಿಬಂಧಕ ಕ್ರಮಗಳು) ನಿಯಮಗಳು–2026ರ ಕರಡಿನಲ್ಲಿ ಪ್ರಶ್ನೆಪತ್ರಿಕೆಗಳ ಸಿದ್ಧತೆ, ಮುದ್ರಣ, ಸಂಗ್ರಹಣೆ, ಸಾಗಣೆ, ಪರೀಕ್ಷಾ ಕೇಂದ್ರಗಳ ಭದ್ರತೆ, ಓಎಂಆರ್ ಹಾಳೆಗಳ ನಿರ್ವಹಣೆ ಹಾಗೂ ಡಿಜಿಟಲ್ ಪರೀಕ್ಷೆಗಳ ಸುರಕ್ಷತೆಗೆ ಕಟ್ಟುನಿಟ್ಟಿನ ಮಾರ್ಗಸೂಚಿಗಳನ್ನು ರೂಪಿಸಲಾಗಿದೆ.

ಪ್ರಶ್ನೆಪತ್ರಿಕೆಗಳಿಗೆ ಬಹುಹಂತದ ಭದ್ರತೆ: ಪ್ರಶ್ನೆಪತ್ರಿಕೆ ಸಿದ್ಧಪಡಿಸುವವರು, ಪರಿಶೀಲಕರು, ಅನುವಾದಕರು ಹಾಗೂ ಮರುಪರಿಶೀಲಕರ ಗುರುತುಗಳನ್ನು ಗೌಪ್ಯವಾಗಿಡಬೇಕು. ಪ್ರಶ್ನೆಪತ್ರಿಕೆಗಳ ಮುದ್ರಣವನ್ನು ಅನುಮೋದಿತ ಸುರಕ್ಷಿತ ಕೇಂದ್ರಗಳಲ್ಲೇ ನಡೆಸಬೇಕು. ಮುದ್ರಣದಿಂದ ಸಂಗ್ರಹಣೆ ಮತ್ತು ಸಾಗಣೆವರೆಗಿನ ಪ್ರತಿಯೊಂದು ಹಂತವನ್ನು ನೋಂದಣಿ ಅಥವಾ ಸುರಕ್ಷಿತ ಡಿಜಿಟಲ್ ಲಾಗ್‌ನಲ್ಲಿ ದಾಖಲಿಸುವಂತೆ ಸೂಚಿಸಲಾಗಿದೆ.

ಮುದ್ರಣದ ವೇಳೆ ಹಾಳಾದ ಅಥವಾ ಹೆಚ್ಚುವರಿ ಪ್ರತಿಗಳನ್ನು ಅಧಿಕೃತ ಅಧಿಕಾರಿಗಳ ಸಮ್ಮುಖದಲ್ಲಿ ನಾಶಪಡಿಸಿ, ಅದರ ಪ್ರಮಾಣಪತ್ರ ಸಂರಕ್ಷಿಸಬೇಕು. ಮುದ್ರಣ ಹಾಗೂ ಪ್ಯಾಕಿಂಗ್ ಪ್ರದೇಶಗಳ ಸಿಸಿಟಿವಿ ದೃಶ್ಯಾವಳಿಗಳನ್ನು ಕನಿಷ್ಠ ಆರು ತಿಂಗಳು ಅಥವಾ ಪರೀಕ್ಷಾ ಪ್ರಕ್ರಿಯೆ ಪೂರ್ಣಗೊಳ್ಳುವವರೆಗೆ ಸಂರಕ್ಷಿಸಬೇಕಾಗುತ್ತದೆ.

ಪರೀಕ್ಷಾ ಕೇಂದ್ರಗಳಲ್ಲಿ ಕಟ್ಟುನಿಟ್ಟಿನ ನಿಗಾ: ಜಿಲ್ಲಾಧಿಕಾರಿಗಳಿಗೆ ಪರೀಕ್ಷಾ ಕೇಂದ್ರಗಳ ಭದ್ರತೆ ಮತ್ತು ಮೇಲ್ವಿಚಾರಣೆಯ ಜವಾಬ್ದಾರಿ ವಹಿಸಲಾಗಿದ್ದು, ಅಗತ್ಯವಿದ್ದಲ್ಲಿ ವೀಕ್ಷಕರು, ಫ್ಲೈಯಿಂಗ್ ಸ್ಕ್ವಾಡ್, ವೀಡಿಯೋಗ್ರಫಿ ಹಾಗೂ ತಾಂತ್ರಿಕ ತಂಡಗಳನ್ನು ನಿಯೋಜಿಸಲು ಅವಕಾಶ ನೀಡಲಾಗಿದೆ. ಅಧಿಕೃತ ವ್ಯಕ್ತಿಗಳು ಮತ್ತು ಪರೀಕ್ಷಾರ್ಥಿಗಳಿಗೆ ಮಾತ್ರ ಕೇಂದ್ರದೊಳಗೆ ಪ್ರವೇಶ ಕಲ್ಪಿಸಬೇಕು.

ನಕಲು ಹಾಗೂ ಇತರ ಅಕ್ರಮಗಳನ್ನು ತಡೆಯಲು ಬಯೋಮೆಟ್ರಿಕ್ ಪರಿಶೀಲನೆ, ಮುಖ ಗುರುತಿಸುವಿಕೆ, ಛಾಯಾಚಿತ್ರ ಮತ್ತು ಸಹಿ ಹೊಂದಾಣಿಕೆಯಂತಹ ವಿಧಾನಗಳನ್ನು ಬಳಸಲು ಪರೀಕ್ಷಾ ಪ್ರಾಧಿಕಾರಕ್ಕೆ ಅವಕಾಶ ನೀಡಲಾಗಿದೆ. 2ನೇ ಪುಟಕ್ಕೆ...

# ಅಧಿಕಾರ ಅಳಿದರೂ ಆದರ್ಶ ಅಳಿಯಲಿಲ್ಲ! ಜನಮನದ ನೆನಪಿನಲ್ಲಿ ರಾಮಕೃಷ್ಣ ಹೆಗಡೆ

### ಸರಳತೆಯೇ ಶಕ್ತಿ, ಶುದ್ಧತೆಯೇ ರಾಜಕೀಯದ ಸೌಂದರ್ಯ, ಜನಸೇವೆಯೇ ಅಧಿಕಾರದ ಅರ್ಥ ಎಂದು ಬದುಕಿ ತೋರಿದ ಅಪರೂಪದ ನಾಯಕ

ಕೆಲವು ನಾಯಕರು ಅಧಿಕಾರದಲ್ಲಿದ್ದಾಗ ದೊಡ್ಡವರಾಗುತ್ತಾರೆ. ಕೆಲವರು ಅಧಿಕಾರ ಕಳೆದುಕೊಂಡ ಬಳಿಕವೂ ದೊಡ್ಡವರಾಗಿಯೇ ಉಳಿಯುತ್ತಾರೆ. ಆದರೆ, ಅಧಿಕಾರವೇ ತಮ್ಮ ವ್ಯಕ್ತಿತ್ವವನ್ನು ದೊಡ್ಡದಾಗಿಸದೆ, ತಮ್ಮ ವ್ಯಕ್ತಿತ್ವವೇ ಅಧಿಕಾರದ ಘನತೆಯನ್ನು ಹೆಚ್ಚಿಸಿದ ನಾಯಕರು ಅಪರೂಪ.

ಕರ್ನಾಟಕದ ರಾಜಕೀಯ ಇತಿಹಾಸದಲ್ಲಿ ಅಂತಹ ಅಪರೂಪದ ಹೆಸರೊಂದಿದೆ–ರಾಮಕೃಷ್ಣ ಹೆಗಡೆ. ಅವರ ಹೆಸರು ನೆನಪಾದಾಗ ಕಣ್ಣ ಮುಂದೆ ಬರುವುದು ಕೇವಲ ಮುಖ್ಯಮಂತ್ರಿ ಹುದ್ದೆಯಲ್ಲ. ಬದಲಾಗಿ, ಸರಳವಾದ ನಗು, ನೇರವಾದ ಮಾತು, ಆಡಳಿತದ ಮೇಲಿನ ಹಿಡಿತ, ಪ್ರಜಾಪ್ರಭುತ್ವದ ಮೇಲಿನ ನಂಬಿಕೆ, ಗ್ರಾಮೀಣ ಜನರ ಮೇಲಿನ ಕಾಳಜಿ ಮತ್ತು ರಾಜಕೀಯವನ್ನು ವೈಯಕ್ತಿಕ ಆಸ್ತಿಯನ್ನಾಗಿ ಮಾಡಿಕೊಳ್ಳದ ಅಪರೂಪದ ಮನೋಭಾವ.

ಇಂದಿನ ರಾಜಕೀಯದ ಗದ್ದಲದ ನಡುವೆ ಹೆಗಡೆ ಅವರನ್ನು ನೆನಪಿಸಿಕೊಳ್ಳುವುದು ಎಂದರೆ, ಒಂದು ಕಾಲದ ರಾಜಕೀಯ ಮೌಲ್ಯಗಳನ್ನು ಮತ್ತೆ ನೆನಪಿಸಿಕೊಳ್ಳುವುದು.

**ಕರ್ನಾಟಕದ ರಾಜಕೀಯಕ್ಕೆ ಹೊಸ ದಿಕ್ಕು ನೀಡಿದ ನಾಯಕ**

1926ರ ಆಗಸ್ಟ್ 29ರಂದು ಉತ್ತರ ಕನ್ನಡ ಜಿಲ್ಲೆಯ ಸಿದ್ದಾಪುರದಲ್ಲಿ ಜನಿಸಿದ ರಾಮಕೃಷ್ಣ ಹೆಗಡೆ, ಕಾನೂನು ಶಿಕ್ಷಣದ ಬಳಿಕ ಸಾರ್ವಜನಿಕ ಬದುಕಿನತ್ತ ಹೆಜ್ಜೆ ಇಟ್ಟರು. 1957ರಲ್ಲಿ ವಿಧಾನಸಭೆಗೆ ಪ್ರವೇಶಿಸಿದ ಅವರು, ಹಂತ ಹಂತವಾಗಿ ರಾಜಕೀಯದ ವಿವಿಧ ಮಜಲುಗಳನ್ನು ಏರಿದರು.

ಸಹಕಾರ, ಕೈಗಾರಿಕೆ, ಯೋಜನೆ, ಪಂಚಾಯತ್ ರಾಜ್, ಹಣಕಾಸು ಸೇರಿದಂತೆ ಹಲವು ಪ್ರಮುಖ ಖಾತೆಗಳನ್ನು ನಿರ್ವಹಿಸುವ ಮೂಲಕ ಆಡಳಿತದ ಒಳನೋಟವನ್ನು ಸಂಪಾದಿಸಿದರು. ರಾಜಕೀಯ ಅವರಿಗೆ ಕೇವಲ ಚುನಾವಣೆಯ ಆಟವಾಗಿರಲಿಲ್ಲ. ಆಡಳಿತವೆಂದರೆ ಜನರ ಬದುಕನ್ನು ಬದಲಿಸುವ ಸಾಧನ ಎಂಬ ನಂಬಿಕೆ ಅವರಲ್ಲಿತ್ತು.

1983ರಲ್ಲಿ ಕರ್ನಾಟಕದ ಮೊದಲ ಕಾಂಗ್ರೆಸ್ಸೇತರ ಮುಖ್ಯಮಂತ್ರಿಯಾಗಿ ಅವರು ಅಧಿಕಾರ ಸ್ವೀಕರಿಸಿದಾಗ, ಅದು ಕೇವಲ ಸರ್ಕಾರ ಬದಲಾವಣೆಯಾಗಿರಲಿಲ್ಲ. ಕರ್ನಾಟಕದ ರಾಜಕೀಯದಲ್ಲಿ ಹೊಸ ಪ್ರಯೋಗಕ್ಕೆ ನಾಂದಿ ಹಾಡಿದ ಕ್ಷಣವಾಗಿತ್ತು.

ಕಾಂಗ್ರೆಸ್ ಹೊರತಾದ ಸರ್ಕಾರವನ್ನು ಮುನ್ನಡೆಸುವುದು ಸುಲಭದ ಕೆಲಸವಾಗಿರಲಿಲ್ಲ. ವಿಭಿನ್ನ ವಿಚಾರಧಾರೆಗಳು, ವಿಭಿನ್ನ ಸಾಮಾಜಿಕ ಶಕ್ತಿಗಳು, ವಿಭಿನ್ನ ರಾಜಕೀಯ ನಿರೀಕ್ಷೆಗಳು–ಇವೆಲ್ಲವನ್ನೂ ಸಮನ್ವಯಗೊಳಿಸಿ ಸರ್ಕಾರ ನಡೆಸಬೇಕಾಗಿತ್ತು. ಆ ಸವಾಲನ್ನು ಹೆಗಡೆ ತಮ್ಮದೇ ಆದ ಶೈಲಿಯಲ್ಲಿ ಎದುರಿಸಿದರು.

**‘ಬೆಂಗಳೂರು’ದಿಂದ ‘ಗ್ರಾಮ’ದವರೆಗೆ ಅಧಿಕಾರದ ಪಯಣ**

ಹೆಗಡೆ ಅವರ ಆಡಳಿತದ ಅತ್ಯಂತ ದೊಡ್ಡ ಕೊಡುಗೆಗಳಲ್ಲಿ ಒಂದೆಂದರೆ ಅಧಿಕಾರದ ವಿಕೇಂದ್ರೀಕರಣ. ಸರ್ಕಾರದ ಎಲ್ಲಾ ಅಧಿಕಾರವೂ ರಾಜಧಾನಿಯಲ್ಲೇ ಕೇಂದ್ರೀಕೃತವಾಗಿರಬಾರದು. ಗ್ರಾಮದಲ್ಲಿರುವ ಸಾಮಾನ್ಯ ವ್ಯಕ್ತಿಗೂ ಆಡಳಿತದಲ್ಲಿ ತನ್ನ ಮಾತು ಇರಬೇಕು ಎಂಬ ಚಿಂತನೆ ಅವರದ್ದು.

ಪಂಚಾಯತ್ ರಾಜ್ ವ್ಯವಸ್ಥೆಯನ್ನು ಬಲಪಡಿಸುವ ಮೂಲಕ ಅಧಿಕಾರವನ್ನು ಗ್ರಾಮಮಟ್ಟಕ್ಕೆ ಕೊಂಡೊಯ್ಯುವ ಪ್ರಯತ್ನಕ್ಕೆ ಅವರು ನೀಡಿದ ಬೆಂಬಲ ಕರ್ನಾಟಕದ ಆಡಳಿತ ಇತಿಹಾಸದಲ್ಲಿ ಮಹತ್ವದ ಅಧ್ಯಾಯವಾಯಿತು.

ಒಬ್ಬ ರೈತನ ಸಮಸ್ಯೆ, ಒಬ್ಬ ಕೂಲಿ ಕಾರ್ಮಿಕನ ನೋವು, ಒಂದು ಹಳ್ಳಿಯ ಕುಡಿಯುವ ನೀರಿನ ಸಮಸ್ಯೆ ಅಥವಾ ಗ್ರಾಮ ರಸ್ತೆಯ ಬೇಡಿಕೆ, ಇವುಗಳ ಪರಿಹಾರಕ್ಕಾಗಿ ಬೆಂಗಳೂರಿನ ಬಾಗಿಲು ತಟ್ಟಬೇಕಾದ ಪರಿಸ್ಥಿತಿ ಕಡಿಮೆಯಾಗಬೇಕು ಎಂಬುದು ಅವರ ಆಶಯ. "ಜನರ ಬಳಿಗೆ ಸರ್ಕಾರ ಹೋಗಬೇಕು" ಎಂಬ ಆಲೋಚನೆ ಕೇವಲ ಘೋಷಣೆಯಾಗದೆ ಆಡಳಿತದ ಭಾಗವಾಗಬೇಕು ಎಂಬ ಪ್ರಯತ್ನ ಅವರದ್ದು. ಇಂದು ನಾವು ‘ವಿಕೇಂದ್ರೀಕರಣ’, ‘ಸ್ಥಳೀಯ ಆಡಳಿತ’, ‘ಜನರ ಪಾಲ್ಗೊಳ್ಳುವಿಕೆ’ ಎಂದು ಮಾತನಾಡುತ್ತೇವೆ. ಆದರೆ ಈ ಪರಿಕಲ್ಪನೆಗಳಿಗೆ ಹಲವು ದಶಕಗಳ ಹಿಂದೆಯೇ ಆಡಳಿತಾತ್ಮಕ ರೂಪ ನೀಡಲು ಪ್ರಯತ್ನಿಸಿದವರಲ್ಲಿ ಹೆಗಡೆ ಪ್ರಮುಖರು.

**ಭ್ರಷ್ಟಾಚಾರಕ್ಕೆ ಕಡಿವಾಣ ಹಾಕಲು ಸಂಸ್ಥೆಯ ಶಕ್ತಿ**



ರಾಜಕೀಯದಲ್ಲಿ ವ್ಯಕ್ತಿಗಳು ಬದಲಾಗುತ್ತಾರೆ. ಸರ್ಕಾರಗಳು ಬರುತ್ತವೆ, ಹೋಗುತ್ತವೆ. ಆದರೆ ಸಂಸ್ಥೆಗಳು ಉಳಿದರೆ ವ್ಯವಸ್ಥೆ ಉಳಿಯುತ್ತದೆ ಎಂಬುದನ್ನು ಹೆಗಡೆ ಅರ್ಥಮಾಡಿಕೊಂಡಿದ್ದರು. ಆಡಳಿತದ ಮೇಲೆ ಜನರ ನಿಗಾ ಇರಬೇಕು. ಅಧಿಕಾರದಲ್ಲಿರುವವರನ್ನೂ ಪ್ರಶ್ನಿಸುವ ವ್ಯವಸ್ಥೆ ಇರಬೇಕು. ಭ್ರಷ್ಟಾಚಾರಕ್ಕೆ ಬಾಗಿಲು ಮುಚ್ಚಬೇಕಾದರೆ ಕೇವಲ ಭಾಷಣ ಸಾಲದು; ಪರಿಣಾಮಕಾರಿ ಸಂಸ್ಥೆಗಳು ಬೇಕು ಎಂಬ ನಿಲುವು ಅವರದ್ದಾಗಿತ್ತು.

ಕರ್ನಾಟಕದಲ್ಲಿ ಲೋಕಾಯುಕ್ತ ವ್ಯವಸ್ಥೆಗೆ ಬಲವಾದ ಕಾನೂನುಬದ್ಧ ನೆಲೆ ಕಲ್ಪಿಸುವ ಅವರ ಸರ್ಕಾರದ ಕ್ರಮ ಈ ಹಿನ್ನೆಲೆಯಲ್ಲಿ ವಿಶೇಷವಾಗಿ ನೆನಪಿಸಿಕೊಳ್ಳಬೇಕಾದದ್ದು.

ಇದು ಕೇವಲ ಒಂದು ಸಂಸ್ಥೆಯ ಸ್ಥಾಪನೆಯಲ್ಲ. "ಅಧಿಕಾರದಲ್ಲಿದ್ದೇನೆ ಎಂದರೆ ಯಾರೂ ನನ್ನನ್ನು ಪ್ರಶ್ನಿಸಬಾರದು" ಎಂಬ ಮನೋಭಾವಕ್ಕೆ ವಿರುದ್ಧವಾಗಿ, "ಅಧಿಕಾರದಲ್ಲಿರುವವನನ್ನೂ ಪ್ರಶ್ನಿಸಬಹುದು" ಎಂಬ ಪ್ರಜಾಪ್ರಭುತ್ವದ ಆತ್ಮಕ್ಕೆ ನೀಡಿದ ಬಲ. 2ನೇ ಪುಟಕ್ಕೆ...

# ವಿಶಿಷ್ಟ

www.VIKRAMAVAHINI.com
|| ಕನ್ನಡ ದಿನಪತ್ರಿಕೆ ||
PRGI NO: KARKAN/2018/78481

ವಿಕ್ರಮ ವಾಹಿನಿ
ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ

## ಸವಿ ವಾಹಿನಿ

ಒಂದು ಸಣ್ಣ ನಗು ಸ್ನೇಹವನ್ನು ಪ್ರಾರಂಭಿಸುತ್ತದೆ... ಒಂದು ಒಳ್ಳೆಯ ಮಾತು ದ್ವೇಷವನ್ನು ಕೊನೆಗೊಳಿಸುತ್ತದೆ... ಒಳ್ಳೆಯ ಮನಸ್ಸು ಸಂಬಂಧಗಳನ್ನು ಕಾಪಾಡುತ್ತದೆ. ಒಳ್ಳೆಯ ವ್ಯಕ್ತಿತ್ವ ಜೀವನವನ್ನೇ ಬದಲಾಯಿಸುತ್ತದೆ.

## ದಿನ ಪಂಚಾಂಗ

ಆಗಸ್ಟ್, 29-2026, ಶನಿವಾರ ವರ್ಷ ಋತು, ಶ್ರಾವಣ ಮಾಸ, ಶುದ್ಧ ಪಕ್ಷ. ಪಾಡ್ಯ ತಿಥಿ ಬೆ-9:29 ಪೂರ್ವಭಾದ್ರ ನಕ್ಷತ್ರ ರಾ-4:34 ರಾಹುಕಾಲ ಬೆ-9:14-10:47 ಗಾಯತ್ರೀ ಪ್ರತಿಪತ್, ರಾಘವೇಂದ್ರಸ್ವಾಮಿ ಪೂರ್ವಾರಾಧನೆ, ಶ್ರಾವಣ ಶನಿವಾರ, ರಾಷ್ಟ್ರೀಯ ಕ್ರೀಡಾ ದಿನ, ಷೋಡಶಭಾವನ ಪರ್ವಾರಂಭ, ಯಲಬುರ್ಗಾ । ಮಾಳೇಕೊಪ್ಪ ಗೋಣಿ ಬಸವೇಶ್ವರ ಉಚ್ಚಾಯ, ಅಸೂಟಿ ಗ್ರಾಮ ಫಲಾರೇಶ್ವರಮಠ ಜಾತ್ರೆ, ಗದಗ । ನಾಗಾವಿತಾಂಡಾ ನಾಗದೇವತೆ ಜಾತ್ರೆ, ಉಣಕಲ್ಲ ದಾನಮ್ಮದೇವಿ ರಥ, ಸಿಂಧನ ಮಡು, ಶಿವಸಹಜಾನಂದ ಜಯಂತಿ.

## ಆರೋಗ್ಯ

### ಸೂರತ್‌ನಲ್ಲಿ ಗೋಮಯ ರಾಖಿಗಳಿಂದ ಪರಿಸರ ಸ್ನೇಹಿ ರಕ್ಷಾಬಂಧನ

● ವಿಕ್ರಮ ವಾಹಿನಿ । ಸೂರತ್

ರಕ್ಷಾಬಂಧನ ಹಬ್ಬವನ್ನು ಪರಿಸರ ಸ್ನೇಹಿಯಾಗಿ ಆಚರಿಸುವ ಉದ್ದೇಶದಿಂದ ಗುಜರಾತ್‌ನ ಸೂರತ್‌ನಲ್ಲಿ ಹಸುವಿನ ಸಗಣಿಯಿಂದ ತಯಾರಿಸಿದ ವಿಶೇಷ ರಾಖಿಗಳನ್ನು ಪರಿಚಯಿಸಲಾಗಿದೆ. ಪ್ಲಾಸ್ಟಿಕ್ ಹಾಗೂ ರಾಸಾಯನಿಕ ವಸ್ತುಗಳಿಂದ ತಯಾರಾಗುವ ರಾಖಿಗಳಿಗೆ ಪರ್ಯಾಯವಾಗಿ ನೈಸರ್ಗಿಕ ವಸ್ತುಗಳಿಂದ ಸಿದ್ಧಪಡಿಸಿರುವ ಈ ರಾಖಿಗಳು ಗಮನ ಸೆಳೆಯುತ್ತಿವೆ.

ಸೂರತ್‌ನ ಮಾಧವ್ ಗೋಶಾಲೆ ಸೇರಿದಂತೆ ಹಲವು ಸಂಸ್ಥೆಗಳು "ಗೌ ಮಾತಾ ಆಹ್ವಾನ್ ಅಭಿಯಾನ್" ಅಡಿಯಲ್ಲಿ ಈ ಉಪಕ್ರಮ ಕೈಗೊಂಡಿವೆ. ಪರಿಸರ ಸಂರಕ್ಷಣೆಯ ಜತೆಗೆ ಸಾಂಪ್ರದಾಯಿಕ ಹಾಗೂ ನೈಸರ್ಗಿಕ ವಸ್ತುಗಳ ಬಳಕೆಯನ್ನು ಉತ್ತೇಜಿಸುವುದು ಇದರ ಉದ್ದೇಶವಾಗಿದೆ.

**ದೇಶಿ ಹಸುವಿನ ಸಗಣಿ ಬಳಕೆ:** ಈ ರಾಖಿಗಳ ತಯಾರಿಕೆಯಲ್ಲಿ ದೇಶಿ ಹಸುವಿನ ಸಗಣಿ ಪುಡಿ, ಗೋಮೂತ್ರ, ರೇಷ್ಮೆ ದಾರ ಹಾಗೂ ಮರದಂತಹ ನೈಸರ್ಗಿಕ ವಸ್ತುಗಳನ್ನು ಬಳಸಲಾಗುತ್ತಿದೆ. ಸಗಣಿಯನ್ನು ಸೂಕ್ತವಾಗಿ ಸಂಸ್ಕರಿಸಿ ಒಣಗಿಸಿದ ಬಳಿಕ ಪುಡಿಯ ರೂಪಕ್ಕೆ ತಂದು ವಿವಿಧ ವಿನ್ಯಾಸಗಳಲ್ಲಿ ರಾಖಿಗಳನ್ನು ಸಿದ್ಧಪಡಿಸಲಾಗುತ್ತಿದೆ. ರಾಖಿಯ ಕಟ್ಟುವ ಭಾಗಕ್ಕೆ ರೇಷ್ಮೆ ದಾರ ಬಳಸಲಾಗಿದ್ದು, ಕೆಲವು ವಿನ್ಯಾಸಗಳಲ್ಲಿ ಮರದ ಅಂಶಗಳನ್ನು ಕೂಡ ಅಳವಡಿಸಲಾಗಿದೆ.



**ಪ್ಲಾಸ್ಟಿಕ್‌ಗೆ ಪರಿಸರ ಸ್ನೇಹಿ ಪರ್ಯಾಯ:** ರಕ್ಷಾಬಂಧನ ಸಂದರ್ಭದಲ್ಲಿ ಮಾರುಕಟ್ಟೆಯಲ್ಲಿ ಲಭ್ಯವಾಗುವ ಹಲವು ರಾಖಿಗಳಲ್ಲಿ ಪ್ಲಾಸ್ಟಿಕ್, ಕೃತಕ ನಾರು ಹಾಗೂ ಇತರ ರಾಸಾಯನಿಕ ಅಂಶಗಳ ಬಳಕೆಯಾಗುತ್ತದೆ. ಬಳಕೆಯ ನಂತರ ಇವು ತ್ಯಾಜ್ಯವಾಗಿ ಪರಿಸರಕ್ಕೆ ಸೇರುವ ಸಾಧ್ಯತೆ ಇರುವುದರಿಂದ ನೈಸರ್ಗಿಕ ವಸ್ತುಗಳಿಂದ ತಯಾರಿಸಲಾದ ರಾಖಿಗಳು ಪರ್ಯಾಯವಾಗಿ ಪರಿಚಯವಾಗಿವೆ. ಪ್ಲಾಸ್ಟಿಕ್ ಬಳಕೆಯನ್ನು ಕಡಿಮೆ ಮಾಡಿ, ಪರಿಸರಕ್ಕೆ ಕಡಿಮೆ ಹಾನಿ ಉಂಟುಮಾಡುವ ವಸ್ತುಗಳನ್ನು ಬಳಸುವ ಮೂಲಕ ಹಬ್ಬದ ಆಚರಣೆಯಲ್ಲಿಯೂ ಪರಿಸರ ಕಾಳಜಿ ವಹಿಸಬಹುದು ಎಂಬ ಸಂದೇಶವನ್ನು ಈ ಉಪಕ್ರಮ ನೀಡುತ್ತಿದೆ.

**ನೈಸರ್ಗಿಕ ಉತ್ಪನ್ನಗಳಿಗೆ ಉತ್ತೇಜನ:** "ಗೌ ಮಾತಾ ಆಹ್ವಾನ್ ಅಭಿಯಾನ್" ಮೂಲಕ ಗೋ ಆಧಾರಿತ ಉತ್ಪನ್ನಗಳ ಬಳಕೆಯನ್ನು ಉತ್ತೇಜಿಸಲಾಗುತ್ತಿದೆ. ಹಸುವಿನ ಸಗಣಿ ಹಾಗೂ ಗೋಮೂತ್ರವನ್ನು ವಿವಿಧ ಪರಿಸರ ಸ್ನೇಹಿ ಉತ್ಪನ್ನಗಳ ತಯಾರಿಕೆಯಲ್ಲಿ ಬಳಸುವ ಪ್ರಯತ್ನಗಳು ನಡೆಯುತ್ತಿವೆ. ಇದರಿಂದ ಸ್ಥಳೀಯ ಮಟ್ಟದಲ್ಲಿ ಸಣ್ಣ ಉದ್ಯಮಗಳು ಹಾಗೂ ಕರಕುಶಲ ಚಟುವಟಿಕೆಗಳಿಗೆ ಉತ್ತೇಜನ ದೊರೆಯುವ ನಿರೀಕ್ಷೆಯಿದೆ.

ರಕ್ಷಾಬಂಧನವು ಸಹೋದರ-ಸಹೋದರಿಯರ ನಡುವಿನ ಪ್ರೀತಿ ಮತ್ತು ಬಾಂಧವ್ಯದ ಸಂಕೇತವಾಗಿದೆ. ಈ ಹಬ್ಬದ ಸಂದರ್ಭದಲ್ಲಿ ಪರಿಸರ ಸಂರಕ್ಷಣೆಯ ಸಂದೇಶವನ್ನೂ ಜನರಿಗೆ ತಲುಪಿಸುವ ಉದ್ದೇಶದಿಂದ ಗೋಮಯ ರಾಖಿಗಳನ್ನು ಮಾರುಕಟ್ಟೆಗೆ ಪರಿಚಯಿಸಲಾಗಿದೆ. ಹಬ್ಬದ ಸಂಭ್ರಮಕ್ಕೆ ಧಕ್ಕೆಯಾಗದಂತೆ ನೈಸರ್ಗಿಕ ವಸ್ತುಗಳನ್ನು ಆಯ್ಕೆ ಮಾಡುವ ಮೂಲಕ ಸುಸ್ಥಿರ ಆಚರಣೆಗೆ ಉತ್ತೇಜನ ನೀಡಬಹುದು ಎಂದು ಸಂಘಟಕರು ತಿಳಿಸಿದ್ದಾರೆ. ಸೂರತ್‌ನಲ್ಲಿ ಆರಂಭವಾಗಿರುವ ಈ ಪ್ರಯತ್ನ ದೇಶದ ಇತರ ಭಾಗಗಳಲ್ಲಿಯೂ ಪರಿಸರ ಸ್ನೇಹಿ ಹಬ್ಬದ ಆಚರಣೆಗೆ ಪ್ರೇರಣೆಯಾಗುವ ನಿರೀಕ್ಷೆಯಿದೆ.

# ಸಿದ್ಧರಾಮೇಶ್ವರ ಹೆಸರಿನಲ್ಲಿ 10 ಭೋವಿ ಸಮುದಾಯ ಭವನ: ಮುನಿಯಪ್ಪ

● ವಿಕ್ರಮ ವಾಹಿನಿ । ಬೆಂಗಳೂರು

ಭೋವಿ ಸಮುದಾಯದ ಗುರುಗಳಾದ ಸಿದ್ಧರಾಮೇಶ್ವರ ಅವರ ಹೆಸರಿನಲ್ಲಿ ರಾಜ್ಯದಲ್ಲಿ 10 ಭೋವಿ ಸಮುದಾಯ ಭವನಗಳನ್ನು ನಿರ್ಮಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಸಮಾಜ ಕಲ್ಯಾಣ ಸಚಿವ ಕೆ.ಎಚ್. ಮುನಿಯಪ್ಪ ತಿಳಿಸಿದರು.

ವಿಕಾಸಸೌಧದಲ್ಲಿ ಶುಕ್ರವಾರ ನಡೆದ ಸಮಾಜ ಕಲ್ಯಾಣ ಇಲಾಖೆ ಹಾಗೂ ಭೋವಿ ಅಭಿವೃದ್ಧಿ ನಿಗಮದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಜಿಲ್ಲಾ ಮಟ್ಟದಲ್ಲಿ ಸರ್ಕಾರಿ ಜಮೀನು ಗುರುತಿಸಿ, ಜಿಲ್ಲಾಧಿಕಾರಿಗಳಿಂದ ನಿವೇಶನಗಳ ಪಟ್ಟಿಯನ್ನು ತುರ್ತಾಗಿ ಪಡೆದು ಸೂಕ್ತ ಸ್ಥಳಗಳಲ್ಲಿ ಸಮುದಾಯ ಭವನಗಳನ್ನು ನಿರ್ಮಿಸಲಾಗುವುದು ಎಂದರು.

ಸಭೆಯಲ್ಲಿ ಭೋವಿ ಸಮುದಾಯದ ಜಾತಿ ಪ್ರಮಾಣ ಪತ್ರಕ್ಕೆ ಸಂಬಂಧಿಸಿದ ಗೊಂದಲಗಳ ಕುರಿತು ಚರ್ಚೆ ನಡೆಯಿತು. ಈ ಸಮಸ್ಯೆಗಳನ್ನು ಶೀಘ್ರವಾಗಿ ಪರಿಹರಿಸುವಂತೆ ಅಧಿಕಾರಿಗಳಿಗೆ ಸೂಚಿಸಿದ ಸಚಿವರು, ಭೋವಿ ಸಮುದಾಯಕ್ಕೆ 'ಭೋವಿ ವಡ್ಡ' ಎಂದು ಜಾತಿ ಪ್ರಮಾಣ ಪತ್ರ ವಿತರಿಸುವ ಕುರಿತು ಅಗತ್ಯ ಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಲಾಗುವುದು ಎಂದು ಹೇಳಿದರು.




ಈಗಾಗಲೇ ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಅಂಬೇಡ್ಕರ್ ಭವನ ಹಾಗೂ ಜಗಜೀವನ ರಾಮ್ ಭವನಗಳನ್ನು ನಿರ್ಮಿಸಲಾಗುತ್ತಿದೆ.

ಇದೇ ಮಾದರಿಯಲ್ಲಿ ಭೋವಿ ಸಮುದಾಯದ ಅಭಿವೃದ್ಧಿಗೆ ಸಮುದಾಯ ಭವನಗಳನ್ನು ನಿರ್ಮಿಸಲಾಗುವುದು. ಲಂಬಾಣಿ ಸಮುದಾಯದ ಅಭಿವೃದ್ಧಿಗೂ ಬಂಜಾರ ಸಮುದಾಯ ಭವನಗಳನ್ನು ನಿರ್ಮಿಸಲು ಕ್ರಮ ವಹಿಸಲಾಗುವುದು ಎಂದು ತಿಳಿಸಿದರು.

**101 ಸಮುದಾಯಗಳ ಸರ್ವತೋಮುಖ ಅಭಿವೃದ್ಧಿ**

ಪರಿಶಿಷ್ಟ ಜಾತಿಯ 101 ಸಮುದಾಯಗಳ ಸರ್ವತೋಮುಖ ಅಭಿವೃದ್ಧಿಗೆ ಸರ್ಕಾರ ಬದ್ಧವಾಗಿದ್ದು, ಪ್ರತಿಯೊಂದು ಸಮುದಾಯದ ಅಗತ್ಯತೆಗಳಿಗೆ ಅನುಗುಣವಾಗಿ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುವುದು ಎಂದು ಮುನಿಯಪ್ಪ ಹೇಳಿದರು.

ಸಮುದಾಯ ಭವನಗಳು ಕೇವಲ ಸಭೆ-ಸಮಾರಂಭಗಳ ಸ್ಥಳವಾಗದೆ ಅಧ್ಯಯನ ಕೇಂದ್ರಗಳಾಗಬೇಕು. ಭವನಗಳಲ್ಲಿ ಗ್ರಂಥಾಲಯ ಹಾಗೂ ವಿದ್ಯಾರ್ಥಿಗಳಿಗೆ ಅಗತ್ಯ ಶೈಕ್ಷಣಿಕ ಸೌಲಭ್ಯಗಳನ್ನು ಕಲ್ಪಿಸುವ ಮೂಲಕ ಗ್ರಾಮೀಣ ಭಾಗದ ಶಿಕ್ಷಣದ ಗುಣಮಟ್ಟ ಹೆಚ್ಚಿಸಲು ಕ್ರಮ ಕೈಗೊಳ್ಳಲಾಗುವುದು ಎಂದರು.

ಭೋವಿ ಸಮುದಾಯಕ್ಕೆ ಸಂಬಂಧಿಸಿದ ವಿವಿಧ ಸಮಸ್ಯೆಗಳನ್ನು ಒಂದು ವಾರದೊಳಗೆ ಪರಿಹರಿಸುವಂತೆ ಅಧಿಕಾರಿಗಳಿಗೆ ಸಚಿವರು ಕಟ್ಟುನಿಟ್ಟಿನ ಸೂಚನೆ ನೀಡಿದರು.

ಸಭೆಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವ ಶಿವರಾಜ್ ತಂಗಡಗಿ, ಭೋವಿ ಅಭಿವೃದ್ಧಿ ನಿಗಮದ ಅಧ್ಯಕ್ಷ ರಾಮಪ್ಪ, ಸರ್ಕಾರದ ಕಾರ್ಯದರ್ಶಿ ಮೋಹನ್ ರಾಜ್ ಕೆ.ಪಿ., ಆಯುಕ್ತ ರಾಕೇಶ್ ಕುಮಾರ್, ಎಸ್ಸಿ-ಎಸ್ಟಿ ನೋಡಲ್ ಏಜೆನ್ಸಿ ಸಲಹೆಗಾರ ಈ. ವೆಂಕಟಯ್ಯ ಸೇರಿದಂತೆ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

## ನೇಮಕಾತಿ ಪರೀಕ್ಷೆಗಳಿಗೆ ಕಠಿಣ ನಿಯಮ: ಸರ್ಕಾರದ ಕರಡು ಪ್ರಕಟ

1ನೇ ಪುಟದಿಂದ

ನಕಲು ಶಂಕಿತ ಪ್ರಕರಣಗಳಲ್ಲಿ ತಕ್ಷಣ ಪೊಲೀಸರಿಗೆ ಮಾಹಿತಿ ನೀಡಿ, ಸಂಬಂಧಿತ ದಾಖಲೆಗಳು ಹಾಗೂ ಸಿಸಿಟಿವಿ ದೃಶ್ಯಾವಳಿಗಳನ್ನು ಸಂರಕ್ಷಿಸಬೇಕು ಎಂದು ಕರಡು ನಿಯಮದಲ್ಲಿ ತಿಳಿಸಲಾಗಿದೆ.

ಓಎಂಆರ್ ಹಾಳೆಗಳಿಗೂ ಪ್ರತ್ಯೇಕ ಲೆಕ್ಕ: ಪರೀಕ್ಷೆಯ ಮೊದಲು ಸ್ವೀಕರಿಸಿದ, ವಿತರಿಸಿದ, ಬಳಸಿದ, ಬಳಕೆಯಾಗದೆ ಉಳಿದ, ಹಾನಿಗೊಳಗಾದ ಹಾಗೂ ಕಾಣೆಯಾದ ಉತ್ತರ ಪತ್ರಿಕೆ ಮತ್ತು ಓಎಂಆರ್ ಹಾಳೆಗಳ ಸಂಪೂರ್ಣ ಲೆಕ್ಕ ದಾಖಲಿಸಬೇಕು. ಪರೀಕ್ಷೆಯ ಬಳಿಕ ಅವುಗಳನ್ನು ನಿಗದಿತ ಭದ್ರತಾ ಕ್ರಮಗಳೊಂದಿಗೆ ಸೀಲ್ ಮಾಡಿ ರವಾನಿಸಬೇಕು.

ಆನ್‌ಲೈನ್ ಪರೀಕ್ಷೆಗಳಿಗೂ ಭದ್ರತೆ: ಕಂಪ್ಯೂಟರ್ ಆಧಾರಿತ ಪರೀಕ್ಷೆಗಳಲ್ಲಿ ಪ್ರಶ್ನೆಪತ್ರಿಕೆ ಎನ್‌ಕ್ರಿಪ್ಶನ್, ಸುರಕ್ಷಿತ ಲಾಗಿನ್, ಆಡಿಟ್ ಲಾಗ್, ಅನಧಿಕೃತ ಪ್ರವೇಶ ತಡೆ ಹಾಗೂ ಬ್ಯಾಕಪ್ ವ್ಯವಸ್ಥೆ ಕಡ್ಡಾಯಗೊಳಿಸುವ ಪ್ರಸ್ತಾವವಿದೆ. ಪರೀಕ್ಷಾ ವ್ಯವಸ್ಥೆಯಲ್ಲಿನ ಡಿಜಿಟಲ್ ದಾಖಲೆಗಳು, ಲಾಗಿನ್ ಮಾಹಿತಿ, ನೆಟ್‌ವರ್ಕ್ ಲಾಗ್‌ಗಳು ಮತ್ತು ಸಿಸಿಟಿವಿ ದೃಶ್ಯಾವಳಿಗಳನ್ನು ನಿಗದಿತ ಅವಧಿವರೆಗೆ ಸಂರಕ್ಷಿಸುವಂತೆ ಕರಡು ನಿಯಮದಲ್ಲಿ ಸೂಚಿಸಲಾಗಿದೆ.

# ಎಸ್ಸಿ-ಎಸ್ಟಿ ನೌಕರರ 24 ಸಾವಿರ ಬ್ಯಾಕ್‌ಲಾಗ್ ಹುದ್ದೆ ಭರ್ತಿಗೆ ಕ್ರಮ: ಮುನಿಯಪ್ಪ

● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯದ ವಿವಿಧ ಇಲಾಖೆಗಳಲ್ಲಿರುವ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ನೌಕರರ 24 ಸಾವಿರ ಬಾಕಿ (ಬ್ಯಾಕ್‌ಲಾಗ್) ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು ಎಂದು ಸಮಾಜ ಕಲ್ಯಾಣ ಸಚಿವ ಕೆ.ಎಚ್. ಮುನಿಯಪ್ಪ ಭರವಸೆ ನೀಡಿದರು.

ಎಸ್ಸಿ-ಎಸ್ಟಿ ನೌಕರರ ಸಮನ್ವಯ ಸಮಿತಿ ವತಿಯಿಂದ ಆಯೋಜಿಸಿದ್ದ ರಾಜ್ಯಮಟ್ಟದ ಐಕ್ಯತಾ ಸಮಾವೇಶದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಎಸ್ಸಿ-ಎಸ್ಟಿ ನೌಕರರ ವಿವಿಧ ಬೇಡಿಕೆಗಳ ಕುರಿತು ಉಪಮುಖ್ಯಮಂತ್ರಿ ಜಿ. ಪರಮೇಶ್ವರ್ ಹಾಗೂ ಮುಖ್ಯಮಂತ್ರಿ ಅವರೊಂದಿಗೆ ಚರ್ಚಿಸಿ, ಸಾಧ್ಯವಾದಷ್ಟು ಬೇಗ ಪರಿಹಾರ ಕಂಡುಕೊಳ್ಳಲು ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಎಂದರು.

ನೌಕರರ ಹಿತಾಸಕ್ತಿ ರಕ್ಷಣೆ: ಎಸ್ಸಿ-ಎಸ್ಟಿ ನೌಕರರ ಹಕ್ಕುಗಳು ಹಾಗೂ ಹಿತಾಸಕ್ತಿಯನ್ನು ಕಾಪಾಡಲು ಸರ್ಕಾರ ಬದ್ಧವಾಗಿದೆ. ಅವರ ನ್ಯಾಯಯುತ ಬೇಡಿಕೆಗಳನ್ನು ಈಡೇರಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಮುನಿಯಪ್ಪ ತಿಳಿಸಿದರು.



ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿವಿಧ ಅಭಿವೃದ್ಧಿ ನಿಗಮಗಳಿಗೆ ಹೆಚ್ಚಿನ ಅನುದಾನ ಒದಗಿಸುವ ಮೂಲಕ ಸಮುದಾಯದ ಸಾಮಾಜಿಕ ಹಾಗೂ ಆರ್ಥಿಕ ಅಭಿವೃದ್ಧಿಗೆ ಒತ್ತು ನೀಡಲಾಗುವುದು ಎಂದರು.

ವಸತಿ ಶಾಲೆಗಳಿಂದ ಗುಣಮಟ್ಟದ ಶಿಕ್ಷಣ: ಮಾಜಿ ಸಚಿವ ಎಚ್. ಆಂಜನೇಯ ಅವರು ಸಮಾಜ ಕಲ್ಯಾಣ ಸಚಿವರಾಗಿದ್ದ ಸಂದರ್ಭದಲ್ಲಿ ಹೋಬಳಿಗೊಂದು ವಸತಿ ಶಾಲೆ ನಿರ್ಮಿಸುವ ಯೋಜನೆ ಜಾರಿಗೊಳಿಸಿದ್ದು, ಇದರಿಂದ ಗ್ರಾಮೀಣ ಭಾಗದ ಮಕ್ಕಳಿಗೆ ಉತ್ತಮ ಗುಣಮಟ್ಟದ ಶಿಕ್ಷಣ ಪಡೆಯಲು ಅನುಕೂಲವಾಗಿದೆ ಎಂದು ಮುನಿಯಪ್ಪ ಹೇಳಿದರು. ತಾವು ಕೋಲಾರ ಸಂಸದರಾಗಿದ್ದಾಗಲೂ ಹೋಬಳಿಗೊಂದು ವಸತಿ ಶಾಲೆ ನಿರ್ಮಿಸಲು ಕ್ರಮ ಕೈಗೊಂಡಿದ್ದಾಗಿ ಅವರು ತಿಳಿಸಿದರು.

ಸಮಾವೇಶದಲ್ಲಿ ಕೊಳ್ಳೇಗಾಲದ ಚೇತನವನ ವಿಹಾರದ ಬೌದ್ಧ ಭಿಕ್ಷು ಪೂಜ್ಯ ಮನೋರಕ್ಷಿತ ಭಂತೇಜಿ, ಕೊಳ್ಳೇಗಾಲ ಶಾಸಕ ಎ.ಆರ್. ಕೃಷ್ಣಮೂರ್ತಿ, ಮಾಜಿ ಸಚಿವ ಎಚ್. ಆಂಜನೇಯ, ಡಾ. ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದ ಅಧ್ಯಕ್ಷ ಸಿ. ನರೇಂದ್ರ, ಕರ್ನಾಟಕ ರಾಜ್ಯ ಸರ್ಕಾರಿ ಎಸ್‌ಸಿ-ಎಸ್‌ಟಿ ನೌಕರರ ಸಮನ್ವಯ ಸಮಿತಿ ಅಧ್ಯಕ್ಷ ಡಿ. ಶಿವಶಂಕರ್ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

# ಒಳಮೀಸಲಾತಿ ಜಾರಿಗೆ ಸಿದ್ದರಾಮಯ್ಯಗೆ ಬದ್ಧತೆಯಿಲ್ಲ: ಗೋವಿಂದ ಕಾರಜೋಳ

● ವಿಕ್ರಮ ವಾಹಿನಿ । ಬೆಂಗಳೂರು

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಧಿಕಾರದಲ್ಲಿದ್ದಾಗ ಒಳಮೀಸಲಾತಿ ಜಾರಿಗೆ ಅಗತ್ಯ ಕ್ರಮ ಕೈಗೊಳ್ಳದೆ, ಅಧಿಕಾರ ಕಳೆದುಕೊಂಡ ಬಳಿಕ ಹಿಂದುಳಿದವರು ಹಾಗೂ ದೀನದಲಿತರ ಬಗ್ಗೆ ಮೊಸಳೆ ಕಣ್ಣೀರು ಸುರಿಸುತ್ತಿದ್ದಾರೆ ಎಂದು ಮಾಜಿ ಉಪಮುಖ್ಯಮಂತ್ರಿ ಹಾಗೂ ಬಿಜೆಪಿ ಸಂಸದ ಗೋವಿಂದ ಕಾರಜೋಳ ಆರೋಪಿಸಿದರು.

ಮಲ್ಲೇಶ್ವರದ ಬಿಜೆಪಿ ಕಚೇರಿ ಜಗನ್ನಾಥ ಭವನದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಒಳಮೀಸಲಾತಿ ಜಾರಿಗೆ ಸಂಬಂಧಿಸಿದಂತೆ ಸಿದ್ದರಾಮಯ್ಯ ಅವರ ನಿಲುವನ್ನು ಪ್ರಶ್ನಿಸಿದರು.

ಎರಡು ಬಾರಿ ಮುಖ್ಯಮಂತ್ರಿಯಾಗಿದ್ದಾಗ ಕ್ರಮ ಕೈಗೊಳ್ಳದ ಅವರು, ಇದೀಗ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರೊಂದಿಗೆ ಚರ್ಚಿಸಿ ಒಳಮೀಸಲಾತಿ ಜಾರಿಗೊಳಿಸುವುದಾಗಿ ಹೇಳುತ್ತಿರುವುದು ರಾಜಕೀಯ ಉದ್ದೇಶದಿಂದ ಕೂಡಿದೆ ಎಂದು ದೂರಿದರು.

ಬೆಳಗಾವಿ ಅಧಿವೇಶನದಲ್ಲಿ ಮೀಸಲಾತಿ ಪ್ರಮಾಣವನ್ನು ಶೇ.56ಕ್ಕೆ ಹೆಚ್ಚಿಸುವ ಮಸೂದೆ ಅಂಗೀಕರಿಸಿ ರಾಜ್ಯಪಾಲರಿಗೆ ಕಳುಹಿಸಲಾಗಿತ್ತು. ಆದರೆ, ಅದನ್ನು ಜಾರಿಗೆ ತರಲು ಸರ್ಕಾರ ವಿಫಲವಾಗಿದೆ. ವಿವಿಧ ಆಯೋಗಗಳ ವರದಿಗಳನ್ನೂ ಕಡೆಗಣಿಸಲಾಗಿದೆ ಎಂದು ಕಾರಜೋಳ ಆರೋಪಿಸಿದರು.

2026ರ ಫೆಬ್ರವರಿ 26ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ಒಳಮೀಸಲಾತಿ ಇಲ್ಲದೆ ನೇಮಕಾತಿ ನಡೆಸುವ ನಿರ್ಧಾರ ಕೈಗೊಂಡು, ಮರುದಿನವೇ ಆದೇಶ ಹೊರಡಿಸಲಾಗಿತ್ತು.

ಅಹಿಂದ ವರ್ಗದ ಪರ ಮಾತನಾಡುವ ಸಿದ್ದರಾಮಯ್ಯ ಅವರ ಸರ್ಕಾರ ಇಂತಹ ನಿರ್ಧಾರ ಕೈಗೊಂಡಿರುವುದು ಸರಿಯೇ ಎಂದು ಪ್ರಶ್ನಿಸಿದರು.

**ವಾಲ್ಮೀಕಿ ನಿಗಮದ ವಿಚಾರದಲ್ಲೂ ಟೀಕೆ**

ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣಕ್ಕೆ ಸಂಬಂಧಿಸಿದಂತೆ ಕೇವಲ ಮಾಜಿ ಸಚಿವ ನಾಗೇಂದ್ರ ಅವರ ರಾಜೀನಾಮೆ ಸಾಕಾಗುವುದಿಲ್ಲ. ಅಕ್ರಮ ಹಣ ರಾಜ್ಯದ ಖಜಾನೆಯಿಂದ ಬಿಡುಗಡೆಯಾಗಿರುವುದರಿಂದ ಸರ್ಕಾರವೇ ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡಬೇಕಿತ್ತು ಎಂದು ಕಾರಜೋಳ ಹೇಳಿದರು. ವಿಧಾನ ಪರಿಷತ್ ವಿರೋಧ ಪಕ್ಷದ ಮುಖ್ಯ ಸಚೇತಕ ಎನ್. ರವಿಕುಮಾರ್, ಬಿಜೆಪಿ ರಾಜ್ಯ ವಕ್ತಾರ ಎಚ್. ವೆಂಕಟೇಶ್ ದೊಡ್ಡೇರಿ, ನಿವೃತ್ತ ಐಎಎಸ್ ಅಧಿಕಾರಿ ಲಕ್ಷ್ಮೀನಾರಾಯಣ್ ಹಾಗೂ ಬೆಳಗಾವಿ ಗ್ರಾಮಾಂತರ ಜಿಲ್ಲಾಧ್ಯಕ್ಷ ಸುಭಾಷ್ ಪಾಟೀಲ್ ಉಪಸ್ಥಿತರಿದ್ದರು.

## ಅನಿವಾರ್ಯವಾಗಿದ್ದ ನಾಗೇಂದ್ರ ರಾಜೀನಾಮೆ: ಎನ್.ರವಿಕುಮಾರ್

● ವಿಕ್ರಮ ವಾಹಿನಿ । ಬೆಂಗಳೂರು

ಸಚಿವ ನಾಗೇಂದ್ರರ ರಾಜೀನಾಮೆ ಅನಿವಾರ್ಯವಾಗಿತ್ತು ಎಂದು ವಿಧಾನ ಪರಿಷತ್ತಿನ ವಿಪಕ್ಷ ಮುಖ್ಯ ಸಚೇತಕ ಎನ್.ರವಿಕುಮಾರ್ ಅವರು ತಿಳಿಸಿದ್ದಾರೆ.

ಮಲ್ಲೇಶ್ವರದ ರಾಜ್ಯ ಬಿಜೆಪಿ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಇಂದು ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಅವರ ರಾಜೀನಾಮೆಯನ್ನು ಬಿಜೆಪಿ ಸ್ವಾಗತಿಸುತ್ತದೆ. ಅವರು ರಾಜೀನಾಮೆ ಕೊಟ್ಟದ್ದೇಕೆ ಎಂಬ ಬಗ್ಗೆ ಸರಕಾರ ಬಾಯಿ ಬಿಡಬೇಕು ಎಂದು ಆಗ್ರಹಿಸಿದರು. ರಾಜೀನಾಮೆ ಕೊಡುವ ಪ್ರಸಂಗ ಯಾಕೆ ಬಂತು ಎಂದು ಪ್ರಶ್ನಿಸಿದರು.

ಬಿಜೆಪಿ-ಜೆಡಿಎಸ್ ಸದನದಲ್ಲಿ ಹೋರಾಟ ಮಾಡಿದ್ದವು. ಬಿಜೆಪಿ ತಾಲ್ಲೂಕು, ಜಿಲ್ಲೆಗಳಲ್ಲಿ ರಾಜ್ಯಾದ್ಯಂತ ಹೋರಾಟ ನಡೆಸಿತ್ತು. 187 ಕೋಟಿ ಮೊತ್ತವನ್ನು ಎಂಜಿ ರಸ್ತೆಯ ಯೂನಿಯನ್ ಬ್ಯಾಂಕಿನಿಂದ ಅಕ್ರಮವಾಗಿ 600 ಖಾತೆಗಳಿಗೆ ಕಳಿಸಿದ್ದರೆಂದು ಒಪ್ಪಿಕೊಂಡಿದ್ದೀರಿ. ಅನೇಕ ಅಧಿಕಾರಿಗಳನ್ನು ಬಂಧಿಸಿದ್ದರು. ಚಂದ್ರಶೇಖರ್ ಅವರು ಆತ್ಮಹತ್ಯೆ ಮಾಡಿಕೊಂಡಿದ್ದರು ಎಂದು ಗಮನ ಸೆಳೆದರು.

ವಿದ್ಯಾರ್ಥಿಗಳ ಸ್ಕಾಲರ್‌ಶಿಪ್, ಸಣ್ಣಪುಟ್ಟ ವ್ಯಾಪಾರಕ್ಕೆ ಸಾಲದ ನೆರವು, ರೈತರಿಗೆ ಕೊಳವೆಬಾವಿ ಮಂಜೂರು ಮಾಡುವುದನ್ನು ತಪ್ಪಿಸಿ ತೆಲಂಗಾಣ ಚುನಾವಣೆ, ಬಳ್ಳಾರಿ ಚುನಾವಣೆಗೆ, ಲ್ಯಾಂಬೋರ್ಗಿನಿ ಕಾರು, ಚಿನ್ನ, ಬೆಳ್ಳಿ ಖರೀದಿಗೆ ಹಣ ಉಪಯೋಗಿಸಿದ್ದರು. ಇದು ಪತ್ರಿಕೆಗಳು, ದೃಶ್ಯ ಮಾಧ್ಯಮಗಳಲ್ಲಿ ಓಡಾಡುತ್ತಿದೆ. ಇದೆಲ್ಲದರ ಪರಿಣಾಮವಾಗಿ ಸರಕಾರಕ್ಕೆ ಅತ್ಯಂತ ದೊಡ್ಡ ಮುಜುಗರ ಆಗಿತ್ತು ಎಂದು ಗಮನ ಸೆಳೆದರು. ಈ ಸಾರಿ ಸದನ ನಡೆದಿರಲಿಲ್ಲ ಎಂದರು.



ನಾಗೇಂದ್ರ ರಾಜೀನಾಮೆ ಕೊಡಲೇಬೇಕು. ಇಲ್ಲವಾದರೆ ಬಿಜೆಪಿ ಹಾಗೂ ಜೆಡಿಎಸ್ ಇನ್ನಷ್ಟು ಪ್ರಭಾವಿ ಹೋರಾಟವನ್ನು ಮುಂದುವರಿಸಲಿವೆ ಎಂದು ಎಚ್ಚರಿಕೆ ನೀಡಿದರು.

ಡಿ.ಕೆ.ಶಿವಕುಮಾರ್ ಅವರ ಈಗಿನ ಹಾಗೂ ಸಿದ್ದರಾಮಯ್ಯರ ಹಿಂದಿನ ಸರಕಾರವು ಸಾಮಾಜಿಕ ನ್ಯಾಯವಿರೋಧಿ ಸರಕಾರ ಎಂದು ಆಕ್ಷೇಪಿಸಿದರು. ಒಬಿಸಿ ಸಮುದಾಯದ ಮಂಕಾಳು ವೈದ್ಯರನ್ನು ಸಚಿವರನ್ನಾಗಿ ಮಾಡಲು ಅವರ ಹೆಸರು ಪಟ್ಟಿಯಲ್ಲಿತ್ತು. ಅವರನ್ನು ಕೈಬಿಟ್ಟು ಹಿಂದುಳಿದವರಿಗೆ ಅನ್ಯಾಯ ಮಾಡಿದ್ದಾರೆ ಎಂದು ಟೀಕಿಸಿದರು. ಹಿಂದುಳಿದ ಸಮುದಾಯದ ಮಹಿಳೆ ಗಾಯತ್ರಿ ಶಾಂತನಗೌಡರ ಅವಕಾಶವನ್ನೂ ತಪ್ಪಿಸಿದ್ದಾರೆ ಎಂದು ದೂರಿದರು. ಶಿವಣ್ಣನವರ ಅವರನ್ನು ಸಚಿವರನ್ನಾಗಿ ಮಾಡಬೇಕಿತ್ತು. ಇನ್ನು ಮಾಡುವರೇ ಇಲ್ಲವೇ ಗೊತ್ತಿಲ್ಲ ಎಂದು ತಿಳಿಸಿದರು. ಉಪ ಮುಖ್ಯಮಂತ್ರಿ ವಿಚಾರದಲ್ಲಿ ಸತೀಶ್, ಎಂ.ಬಿ.ಪಾಟೀಲ, ಕೆ.ಎಚ್.ಮುನಿಯಪ್ಪ, ಜಮೀರ್ ಅವರಿಗೂ ಸಿದ್ದರಾಮಯ್ಯನವರು ಅನ್ಯಾಯ ಮಾಡಿದ್ದಾಗಿ ಆಕ್ಷೇಪಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ತಮ್ಮ ಮಗನನ್ನೇ ಸಚಿವರನ್ನಾಗಿ ಮಾಡಿದರು. ಯತೀಂದ್ರರನ್ನು ತಪ್ಪಿಸಿ ಶಿವಣ್ಣನವರ ಅವರನ್ನು ಸಚಿವರನ್ನಾಗಿ ಮಾಡಿದ್ದರೆ ಅವರು ಸಮಾಜವಾದದಿಂದ ಬಂದವರೆಂದು ಒಪ್ಪಬಹುದಿತ್ತು ಎಂದು ನುಡಿದರು.

ಬರ ಅಧ್ಯಯನ ಸರಿಯಿಲ್ಲ; ಇದು ರೈತರಿಗೆ ಮಾಡಿದ ಘೋರ ಅನ್ಯಾಯ. ರೈತರಿಗೆ ಒಂದು ಪೈಸೆಯೂ ಕೊಟ್ಟಿಲ್ಲ ಎಂದು ಆಕ್ಷೇಪ ವ್ಯಕ್ತಪಡಿಸಿದರು. ಯಡಿಯೂರಪ್ಪ ಅವರು ಸಿಎಂ ಆಗಿದ್ದಾಗ ಒಂದು ನೀರಾವರಿಯೇತರ ಜಮೀನಿಗೆ ಹೆಕ್ಟೇರಿಗೆ 27 ಸಾವಿರ ರೂ. ಪರಿಹಾರ ಕೊಟ್ಟಿದ್ದರು ಎಂದು ಗಮನ ಸೆಳೆದರು. ನೀರಾವರಿ ಜಮೀನಿಗೆ 34,600 ರಷ್ಟು ಕೊಟ್ಟಿದ್ದರು ಎಂದರು.

# ಅಧಿಕಾರ ಅಳಿದರೂ ಆದರ್ಶ ಅಳಿಯಲಿಲ್ಲ!

1ನೇ ಪುಟದಿಂದ

**ಜಾತಿಯ ಗೋಡೆಗಳಾಚೆಗಿನ ಸ್ನೇಹ:** ಕರ್ನಾಟಕದ ರಾಜಕೀಯವನ್ನು ಜಾತಿ ಸಮೀಕರಣಗಳಿಂದ ಬೇರ್ಪಡಿಸಿ ನೋಡುವುದು ಕಷ್ಟ. ಪ್ರತಿಯೊಂದು ಸಮುದಾಯಕ್ಕೂ ತನ್ನದೇ ಆದ ಸಾಮಾಜಿಕ ಮತ್ತು ರಾಜಕೀಯ ಹಿನ್ನೆಲೆ ಇದೆ. ಆದರೆ ಹೆಗಡೆ ತಮ್ಮನ್ನು ಒಂದು ಜಾತಿಯ ನಾಯಕನಾಗಿ ಸೀಮಿತಗೊಳಿಸಿಕೊಳ್ಳಲಿಲ್ಲ.

ಬ್ರಾಹ್ಮಣ, ಲಿಂಗಾಯತ, ಒಕ್ಕಲಿಗ, ದಲಿತ, ಹಿಂದುಳಿದ ವರ್ಗ, ಅಲ್ಪಸಂಖ್ಯಾತ-ಯಾವ ಸಮುದಾಯದವರೇ ಆಗಲಿ, ಅವರೊಂದಿಗೆ ಸಂವಾದ ನಡೆಸುವ, ಅವರ ಮಾತು ಕೇಳುವ ಮನೋಭಾವ ಅವರಲ್ಲಿತ್ತು. ವ್ಯಕ್ತಿಯನ್ನು ಮೊದಲು ಮನುಷ್ಯನಾಗಿ ನೋಡುವ ಗುಣ ಅವರ ರಾಜಕೀಯದ ದೊಡ್ಡ ಬಲವಾಗಿತ್ತು. ಅವರ ಸುತ್ತಲಿದ್ದ ರಾಜಕೀಯ ವಲಯದಲ್ಲಿ ವಿವಿಧ ಜಾತಿ, ಧರ್ಮ ಮತ್ತು ಸಾಮಾಜಿಕ ಹಿನ್ನೆಲೆಯ ನಾಯಕರು ಇದ್ದರು. ಭಿನ್ನಾಭಿಪ್ರಾಯ ಹೊಂದಿದವರೊಂದಿಗೂ ಅವರು ಮಾತನಾಡುತ್ತಿದ್ದರು. ಅವರಿಗೆ ರಾಜಕೀಯ ವಿರೋಧಿ ಎಂದರೆ ವೈಯಕ್ತಿಕ ಶತ್ರು ಎಂದಲ್ಲ. ಇದು ಇಂದು ಬಹಳ ಅಗತ್ಯವಾದ ಪಾಠ.

ವಿಚಾರದಲ್ಲಿ ಭಿನ್ನತೆ ಇರಬಹುದು. ಪಕ್ಷಗಳು ಬೇರೆ ಇರಬಹುದು. ರಾಜಕೀಯ ಗುರಿಗಳು ಬೇರೆ ಇರಬಹುದು. ಆದರೆ ಮನುಷ್ಯನನ್ನು ಮನುಷ್ಯನಾಗಿ ಗೌರವಿಸುವ ಸಂಸ್ಕೃತಿ ಕಳೆದುಹೋಗಬಾರದು. ಹೆಗಡೆ ಅವರ ರಾಜಕೀಯ ಬದುಕಿನ ಈ ಮಾನವೀಯ ಮುಖವೇ ಅವರನ್ನು ಇಂದಿಗೂ ಹಲವರ ಮನಸ್ಸಿನಲ್ಲಿ ಜೀವಂತವಾಗಿರಿಸಿದೆ.

**ಅಧಿಕಾರದ ವೈಭವಕ್ಕಿಂತ ಸರಳತೆಯ ಸೌಂದರ್ಯ:** ಮುಖ್ಯಮಂತ್ರಿಯ ಕುರ್ಚಿ ಎಂದರೆ ಸಾಮಾನ್ಯವಾಗಿ ಅಧಿಕಾರ, ಭದ್ರತೆ, ವೈಭವ ಮತ್ತು ಸೌಲಭ್ಯಗಳ ಸಂಕೇತ. ಆದರೆ ಹೆಗಡೆ ಅವರಿಗೆ ಮುಖ್ಯಮಂತ್ರಿ ಸ್ಥಾನವು ಇವೆಲ್ಲಕ್ಕಿಂತ ಮೊದಲು ಒಂದು ಹೊಣೆಗಾರಿಕೆ. ಅಧಿಕಾರದ ಸ್ಥಾನದಲ್ಲಿದ್ದರೂ ವೈಯಕ್ತಿಕ ಬದುಕಿನಲ್ಲಿ ಸರಳತೆಯನ್ನು ಕಾಪಾಡಿಕೊಂಡರು. ಸರ್ಕಾರಿ ಸೌಲಭ್ಯಗಳನ್ನು ವೈಯಕ್ತಿಕ ಸ್ವತ್ತಿನಂತೆ ಬಳಸಿಕೊಳ್ಳದ ಶಿಸ್ತು ಅವರ ವ್ಯಕ್ತಿತ್ವದ ಭಾಗವಾಗಿತ್ತು. ಇದು ಇಂದು ಕೇಳಲು ಸಾಮಾನ್ಯ ಮಾತಿನಂತೆ ಕಾಣಬಹುದು. ಆದರೆ ರಾಜಕೀಯ ಅಧಿಕಾರದೊಂದಿಗೆ ವೈಯಕ್ತಿಕ ಆಸೆ-ಆಕಾಂಕ್ಷೆಗಳನ್ನು ಬೆರೆಸಿಕೊಳ್ಳುವುದು ಸಹಜವಾಗಿದ್ದ ಕಾಲದಲ್ಲೂ, ಅಧಿಕಾರದ ಮಿತಿಯನ್ನು ಅರಿತು ಬದುಕುವುದು ಸುಲಭವಾಗಿರಲಿಲ್ಲ.

ಹೆಗಡೆ ಅವರ ಸರಳತೆ ಅವರ ದೌರ್ಬಲ್ಯವಾಗಿರಲಿಲ್ಲ, ಅದೇ ಅವರ ಶಕ್ತಿ. ಕುಟುಂಬಕ್ಕಿಂತ ಸಾರ್ವಜನಿಕ ಜೀವನ ದೊಡ್ಡದು ರಾಜಕೀಯ ಅಧಿಕಾರವನ್ನು ಕುಟುಂಬದ ಭವಿಷ್ಯ ಕಟ್ಟುವ ಸಾಧನವನ್ನಾಗಿ ಮಾಡದಿರುವುದು ಹೆಗಡೆ ಅವರ ಬದುಕಿನ ಮತ್ತೊಂದು ಗಮನಾರ್ಹ ಅಂಶ. ಹೆಗಡೆ ಅವರ ಆಡಳಿತದಲ್ಲಿ ಈ ದೃಷ್ಟಿಕೋನ ಸ್ಪಷ್ಟವಾಗಿತ್ತು.

**ಕಾಲ ಬದಲಾಗಿದೆ, ನೆನಪು ಮಾತ್ರ ಬದಲಾಗಿಲ್ಲ**

2004ರ ಜನವರಿ 12ರಂದು ರಾಮಕೃಷ್ಣ ಹೆಗಡೆ ನಿಧನರಾದರು.

ಅವರ ದೈಹಿಕ ಅಸ್ತಿತ್ವ ಇಲ್ಲವಾಗಿ ಎರಡು ದಶಕಗಳಿಗೂ ಹೆಚ್ಚು ಕಾಲ ಕಳೆದಿದೆ. ಆದರೆ ಕೆಲವು ವ್ಯಕ್ತಿಗಳು ಸತ್ತರೂ ಅವರ ಕಾಲ ಸಾಯುವುದಿಲ್ಲ.

ಅವರ ಮಾತುಗಳು ಮರೆಯಾಗಬಹುದು. ಅವರ ಚಿತ್ರಗಳು ಹಳೆಯದಾಗಬಹುದು. ಅವರ ರಾಜಕೀಯ ಪಕ್ಷಗಳು ಅಸ್ತಿತ್ವ ಕಳೆದುಕೊಳ್ಳಬಹುದು. ಆದರೆ ಅವರು ಬಿಟ್ಟುಹೋದ ಮೌಲ್ಯಗಳು ಬದುಕಿದ್ದರೆ, ಅವರ ನೆನಪು ಕೂಡ ಬದುಕಿರುತ್ತದೆ. ಇಂದು ರಾಜಕೀಯ ಹೆಚ್ಚು ವೇಗವಾಗಿದೆ. ಸಾಮಾಜಿಕ ಜಾಲತಾಣಗಳು ಕ್ಷಣಾರ್ಧದಲ್ಲಿ ನಾಯಕರನ್ನು ಹುಟ್ಟುಹಾಕುತ್ತವೆ; ಅದೇ ವೇಗದಲ್ಲಿ ವಿವಾದಗಳನ್ನೂ ಹುಟ್ಟುಹಾಕುತ್ತವೆ.

ರಾಜಕೀಯದಲ್ಲಿ ಆರೋಪ-ಪ್ರತ್ಯಾರೋಪಗಳು ಹೆಚ್ಚಾಗಿವೆ. ವೈಯಕ್ತಿಕ ಟೀಕೆಗಳು ಸಾಮಾನ್ಯವಾಗಿವೆ. ಅಧಿಕಾರ ಮತ್ತು ಕುಟುಂಬ, ರಾಜಕೀಯ ಮತ್ತು ವೈಯಕ್ತಿಕ ಹಿತಾಸಕ್ತಿ, ಇವುಗಳ ನಡುವಿನ ಗಡಿ ಕೆಲವೊಮ್ಮೆ ಮಸುಕಾಗುತ್ತಿದೆ. ಇಂತಹ ಸಂದರ್ಭದಲ್ಲಿ ಹೆಗಡೆ ಅವರ ನೆನಪು ಒಂದು ಪ್ರಶ್ನೆಯನ್ನು ನಮ್ಮ ಮುಂದೆ ಇಡುತ್ತದೆ: "ರಾಜಕೀಯದಲ್ಲಿ ಗೆಲ್ಲುವುದೇ ಮುಖ್ಯವೇ? ಅಥವಾ ರಾಜಕೀಯದಲ್ಲಿ ಉಳಿಸಿಕೊಳ್ಳುವ ಮೌಲ್ಯಗಳೇ ಮುಖ್ಯವೇ?"

ಹೆಗಡೆ ಎಂದರೆ ಒಂದು ನೆನಪು ಮಾತ್ರವಲ್ಲ; ಒಂದು ಪ್ರಶ್ನೆ

ರಾಮಕೃಷ್ಣ ಹೆಗಡೆ ಅವರನ್ನು ಕೇವಲ ಮಾಜಿ ಮುಖ್ಯಮಂತ್ರಿ ಎಂದು ನೆನಪಿಸಿಕೊಳ್ಳುವುದು ಅವರ ವ್ಯಕ್ತಿತ್ವವನ್ನು ಸಣ್ಣದಾಗಿಸಿದಂತಾಗುತ್ತದೆ.

**ಅವರು ಕರ್ನಾಟಕದ ರಾಜಕೀಯದಲ್ಲಿ ಒಂದು ಪ್ರಯೋಗ:** ಒಂದು ಚಿಂತನೆ, ಒಂದು ಆಡಳಿತದ ದೃಷ್ಟಿಕೋನ, ಒಂದು ಸರಳ ಬದುಕಿನ ಮಾದರಿ, ಒಂದು ಪ್ರಜಾಪ್ರಭುತ್ವದ ಸಂಸ್ಕೃತಿ, ಅವರ ಬದುಕಿನ ಪ್ರತಿಯೊಂದು ಹೆಜ್ಜೆಯನ್ನೂ ಸಂಪೂರ್ಣ ದೋಷರಹಿತವೆಂದು ಹೇಳುವುದು ಇತಿಹಾಸವನ್ನು ಸರಳೀಕರಿಸಿದಂತಾಗುತ್ತದೆ. ಯಾವುದೇ ಸಾರ್ವಜನಿಕ ವ್ಯಕ್ತಿಯಂತೆ ಅವರ ರಾಜಕೀಯ ಜೀವನದಲ್ಲೂ ವಿವಾದಗಳು, ಟೀಕೆಗಳು ಮತ್ತು ಭಿನ್ನಾಭಿಪ್ರಾಯಗಳು ಇದ್ದವು.

ಆದರೆ ಇತಿಹಾಸದ ನ್ಯಾಯವೆಂದರೆ ವ್ಯಕ್ತಿಯ ದೋಷಗಳನ್ನು ಮಾತ್ರ ಎಣಿಸುವುದಲ್ಲ; ಅವರು ಸಮಾಜಕ್ಕೆ ಬಿಟ್ಟುಹೋದ ಶಾಶ್ವತ ಮೌಲ್ಯಗಳನ್ನೂ ಗುರುತಿಸುವುದು.ಮ ಆ ದೃಷ್ಟಿಯಿಂದ ನೋಡಿದಾಗ ಹೆಗಡೆ ಅವರ ಪರಂಪರೆ ದೊಡ್ಡದು.

**ಇಂದು ಹೆಗಡೆ ಏಕೆ ಬೇಕು?:** ಇಂದು ನಮಗೆ ಮತ್ತೊಬ್ಬ ರಾಮಕೃಷ್ಣ ಹೆಗಡೆ ಬೇಕು ಎಂದರೆ, ಅದೇ ವ್ಯಕ್ತಿ ಬೇಕೆಂದಲ್ಲ. ಅವರು ಪ್ರತಿಪಾದಿಸಿದ ಮೌಲ್ಯಗಳು ಬೇಕು, ರಾಜಕೀಯದಲ್ಲಿ ಸರಳತೆ ಬೇಕು, ಆಡಳಿತದಲ್ಲಿ ಪಾರದರ್ಶಕತೆ ಬೇಕು, ಅಧಿಕಾರದಲ್ಲಿ ಹೊಣೆಗಾರಿಕೆ ಬೇಕು, ಸಮಾಜದಲ್ಲಿ ಸಾಮರಸ್ಯ ಬೇಕು, ಭಿನ್ನಾಭಿಪ್ರಾಯದಲ್ಲಿ ಗೌರವ ಬೇಕು, ಕುಟುಂಬಕ್ಕಿಂತ ಸಂಸ್ಥೆ ದೊಡ್ಡದು ಎಂಬ ಅರಿವು ಬೇಕು, ಮತ್ತು ಮುಖ್ಯವಾಗಿ ಅಧಿಕಾರಕ್ಕಿಂತ ಜನರ ವಿಶ್ವಾಸ ದೊಡ್ಡದು ಎಂಬ ನಂಬಿಕೆ ಬೇಕು.

**ಅದೇ ರಾಮಕೃಷ್ಣ ಹೆಗಡೆ ಅವರ ನಿಜವಾದ ಸ್ಮಾರಕ:** ಅವರ ಪ್ರತಿಮೆ ಎಷ್ಟೇ ಎತ್ತರವಾಗಿದ್ದರೂ, ಅವರು ನಂಬಿದ ಮೌಲ್ಯಗಳು ನಮ್ಮ ಸಾರ್ವಜನಿಕ ಜೀವನದಲ್ಲಿ ಕಾಣಿಸದಿದ್ದರೆ ಆ ಪ್ರತಿಮೆ ಕೇವಲ ಕಲ್ಲು.

ಆದರೆ ಒಬ್ಬ ಜನಪ್ರತಿನಿಧಿ ಅಧಿಕಾರವನ್ನು ಸೇವೆಯಾಗಿ ನೋಡಿದಾಗ, ಒಬ್ಬ ಸಚಿವ ಸಾರ್ವಜನಿಕ ಸಂಪತ್ತನ್ನು ಪವಿತ್ರವೆಂದು ಭಾವಿಸಿದಾಗ, ಒಬ್ಬ ನಾಯಕ ವಿರೋಧಿಯನ್ನೂ ಗೌರವಿಸಿದಾಗ, ಒಬ್ಬ ರಾಜಕಾರಣಿ ತನ್ನ ಕುಟುಂಬಕ್ಕಿಂತ ಸಂಸ್ಥೆಗೆ ಆದ್ಯತೆ ನೀಡಿದಾಗ ಅಲ್ಲಿ ಹೆಗಡೆ ಮತ್ತೆ ಜೀವಂತವಾಗುತ್ತಾರೆ.

ಅಧಿಕಾರ ಬಂದಿತು ಹೋಯಿತು, ಪದವಿ ಬಂತು ಕಳೆದುಹೋಯಿತು.

ರಾಜಕೀಯ ಬದಲಾಯಿತು ಕಾಲ ಬದಲಾಯಿತು. ಆದರೆ ಸರಳತೆ, ಪ್ರಾಮಾಣಿಕತೆ, ಜನಪರತೆ ಮತ್ತು ಮೌಲ್ಯಾಧಾರಿತ ರಾಜಕಾರಣದ ನೆನಪು ಮಾತ್ರ ಅಳಿಯಲಿಲ್ಲ. ಅದೇ ರಾಮಕೃಷ್ಣ ಹೆಗಡೆ. ಅಧಿಕಾರ ಅಳಿದರೂ ಆದರ್ಶ ಅಳಿಯದ ನಾಯಕ.

ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ
ವಿಕ್ರಮ ವಾಹಿನಿ
ಆಗಸ್ಟ್, 29- 2026
ಶನಿವಾರ

www.VIKRAMAVAHINI.com
ಕನ್ನಡ ದಿನಪತ್ರಿಕೆ
PRGI NO: KARKAN/2018/78481


## ನೇಪಾಳ ಪ್ರವಾಹ: ಶಿವಮೊಗ್ಗದ 6 ಪ್ರವಾಸಿಗರು ಸುರಕ್ಷಿತ

1ನೇ ಪುಟದಿಂದ

ಶಿವಮೊಗ್ಗದ ಪ್ರವಾಸಿಗರು ಬೆಂಗಳೂರಿನಿಂದ ವಿಮಾನದ ಮೂಲಕ ಉತ್ತರ ಪ್ರದೇಶದ ಗೋರಖ್‌ಪುರಕ್ಕೆ ತೆರಳಿ, ಅಲ್ಲಿಂದ ಬಸ್ ಮೂಲಕ ನೇಪಾಳ ಪ್ರವೇಶಿಸಿದ್ದರು. ಲುಂಬಿನಿ ಸೇರಿದಂತೆ ವಿವಿಧ ಪ್ರವಾಸಿ ತಾಣಗಳಿಗೆ ಭೇಟಿ ನೀಡಲು ಯೋಜಿಸಿದ್ದರು. ಆರು ಮಂದಿಯ ಪೈಕಿ ಹೊಸನಗರದ ಇಬ್ಬರು, ಭದ್ರಾವತಿಯ ಇಬ್ಬರು ಹಾಗೂ ಶಿವಮೊಗ್ಗದ ಇಬ್ಬರು ಸೇರಿದ್ದಾರೆ.

**ಧಾರವಾಡದ ವ್ಯಕ್ತಿ ಸಂಪರ್ಕಕ್ಕೆ ಸಿಗದೆ ಆತಂಕ**

ಇದೇ ವೇಳೆ, ನೇಪಾಳ ಪ್ರವಾಹ ಪೀಡಿತ ಪ್ರದೇಶಕ್ಕೆ ಪ್ರವಾಸ ತೆರಳಿದ್ದ ಧಾರವಾಡದ ರಾಕೇಶ್ ನಾಯಕ್ (45) ಕಳೆದ ಎರಡು ದಿನಗಳಿಂದ ಕುಟುಂಬಸ್ಥರ ಸಂಪರ್ಕಕ್ಕೆ ಸಿಗದೆ ಆತಂಕ ಮೂಡಿಸಿದೆ. ಧಾರವಾಡದ ಸಿಬಿ ನಗರದ ನಿವಾಸಿಯಾಗಿರುವ ರಾಕೇಶ್, ಕಳೆದ 10 ವರ್ಷಗಳಿಂದ ಆಸ್ಟ್ರೇಲಿಯಾದ ಮೆಲ್ಬೋರ್ನ್‌ನಲ್ಲಿ ಸಾಫ್ಟ್‌ವೇರ್ ಎಂಜಿನಿಯರ್ ಆಗಿ ಕೆಲಸ ಮಾಡುತ್ತಿದ್ದಾರೆ.

ಆಗಸ್ಟ್ 10ರಂದು ಮೆಲ್ಬೋರ್ನ್‌ನಿಂದ ನೇಪಾಳಕ್ಕೆ ತೆರಳಿದ್ದ ಅವರು, ಈಶಾ ಫೌಂಡೇಶನ್ ಆಯೋಜಿಸಿದ್ದ ಮಾನಸ ಸರೋವರ ಯಾತ್ರೆಯಲ್ಲಿ 71 ಮಂದಿಯ ತಂಡದೊಂದಿಗೆ ಪ್ರಯಾಣಿಸಿದ್ದರು. ಅವರೊಂದಿಗೆ ಸಂಪರ್ಕ ಸಾಧಿಸಲು ಕುಟುಂಬಸ್ಥರು ಪ್ರಯತ್ನಿಸುತ್ತಿದ್ದಾರೆ.

ಸಂತ್ರಸ್ತರು ಹಾಗೂ ಅವರ ಕುಟುಂಬಸ್ಥರು ಪ್ರವಾಸಿಗರ ಸ್ಥಳ, ಸಂಪರ್ಕ ವಿವರ ಸೇರಿದಂತೆ ಅಗತ್ಯ ಮಾಹಿತಿಯನ್ನು ರಾಜ್ಯ ತುರ್ತು ಕಾರ್ಯಾಚರಣೆ ಕೇಂದ್ರಕ್ಕೆ ನೀಡುವಂತೆ ಸರ್ಕಾರ ಮನವಿ ಮಾಡಿದೆ. ನೇಪಾಳದಲ್ಲಿರುವ ಕನ್ನಡಿಗರ ಸುರಕ್ಷತೆ ಹಾಗೂ ಸ್ಥಳಾಂತರಕ್ಕೆ ಕೇಂದ್ರ ಸರ್ಕಾರ ಮತ್ತು ಭಾರತೀಯ ರಾಯಭಾರ ಕಚೇರಿಗಳೊಂದಿಗೆ ರಾಜ್ಯ ಸರ್ಕಾರ ನಿರಂತರ ಸಮನ್ವಯ ಸಾಧಿಸುತ್ತಿದೆ.

## ಮಧ್ಯಪ್ರದೇಶ ಅಪಘಾತ: ಬೆಂಗಳೂರು ಪೊಲೀಸ್ ಅಧಿಕಾರಿ ಸೇರಿ ನಾಲ್ವರು ಸಾವು

● ವಿಕ್ರಮ ವಾಹಿನಿ । ರಾಜ್‌ಗಢ (ಮಧ್ಯಪ್ರದೇಶ)

ಆರೋಪಿಯೊಬ್ಬನ ಬಂಧನಕ್ಕೆ ತೆರಳಿದ್ದ ಬೆಂಗಳೂರಿನ ಪೊಲೀಸ್ ತಂಡ ಪ್ರಯಾಣಿಸುತ್ತಿದ್ದ ಬಸ್ ಮಧ್ಯಪ್ರದೇಶದ ರಾಜ್‌ಗಢ ಜಿಲ್ಲೆಯ ಬಿಯೋರಾ ಬಳಿ ಸೇತುವೆಯ ಗೋಡೆಗೆ ಡಿಕ್ಕಿ ಹೊಡೆದು ಸಂಭವಿಸಿದ ಭೀಕರ ಅಪಘಾತದಲ್ಲಿ ಬೆಂಗಳೂರಿನ ಪೊಲೀಸ್ ಅಧಿಕಾರಿ ಸೇರಿದಂತೆ ನಾಲ್ವರು ಮೃತಪಟ್ಟಿದ್ದಾರೆ. ಘಟನೆಯಲ್ಲಿ 11 ಮಂದಿ ಗಾಯಗೊಂಡಿದ್ದು, ನಾಲ್ವರ ಸ್ಥಿತಿ ಗಂಭೀರವಾಗಿದೆ.

ಬೆಂಗಳೂರಿನ ಆಗ್ನೇಯ ಸೈಬರ್ ಕ್ರೈಂ ಠಾಣೆಯ ಇನ್ಸ್‌ಪೆಕ್ಟರ್ ರವಿ ಕೆ.ಬಿ. ಮೃತಪಟ್ಟ ಪೊಲೀಸ್ ಅಧಿಕಾರಿಯಾಗಿದ್ದಾರೆ. ಅವರೊಂದಿಗೆ ತೆರಳಿದ್ದ ಪೊಲೀಸ್ ಸಿಬ್ಬಂದಿ ವಿಶ್ವನಾಥ್ ಮತ್ತು ರಮೇಶ್ ಗಾಯಗೊಂಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ನಿಯಂತ್ರಣ ತಪ್ಪಿದ ಬಸ್: ಕಾನ್ಪುರದಿಂದ ಇಂದೋರ್‌ಗೆ ತೆರಳುತ್ತಿದ್ದ ಬಸ್ ಶುಕ್ರವಾರ ಮುಂಜಾನೆ ಬಿಯೋರಾ–ಭೋಪಾಲ್ ಬೈಪಾಸ್‌ನ ಸೇತುವೆಯ ತಿರುವಿನಲ್ಲಿ ನಿಯಂತ್ರಣ ಕಳೆದುಕೊಂಡು ಗೋಡೆಗೆ ಡಿಕ್ಕಿ ಹೊಡೆದಿದೆ. ಅಪಘಾತದ ರಭಸಕ್ಕೆ ಮೇಲಿನ ಡೆಕ್‌ನಲ್ಲಿ ಪ್ರಯಾಣಿಸುತ್ತಿದ್ದ ಕೆಲವರು ಕೆಳಗೆ ಬಿದ್ದ ಪರಿಣಾಮ ನಾಲ್ವರು ಮೃತಪಟ್ಟಿದ್ದಾರೆ.

ಗಾಯಗೊಂಡ 11 ಮಂದಿಯನ್ನು ಬಿಯೋರಾ ಆಸ್ಪತ್ರೆಗೆ ದಾಖಲಿಸಲಾಗಿದ್ದು, ನಾಲ್ವರ ಸ್ಥಿತಿ ಗಂಭೀರವಾಗಿದೆ. ಸ್ಥಳೀಯರು ಹಾಗೂ ಪೊಲೀಸರು ತಕ್ಷಣ ರಕ್ಷಣಾ ಕಾರ್ಯಾಚರಣೆ ನಡೆಸಿ ಗಾಯಾಳುಗಳನ್ನು ಆಸ್ಪತ್ರೆಗೆ ಸಾಗಿಸಿದರು.

ಅತಿವೇಗವೇ ಕಾರಣ?: ಪ್ರಾಥಮಿಕ ತನಿಖೆಯಲ್ಲಿ ಬಸ್ ಅತಿವೇಗದಿಂದ ಚಲಿಸುತ್ತಿದ್ದುದೇ ಅಪಘಾತಕ್ಕೆ ಕಾರಣವಾಗಿರಬಹುದು ಎಂದು ರಾಜ್‌ಗಢ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಮಿತ್ ಟೋಲಾನಿ ತಿಳಿಸಿದ್ದಾರೆ. ಸೇತುವೆಯ ತಿರುವಿನಲ್ಲೇ ಬಸ್ ನಿಯಂತ್ರಣ ಕಳೆದುಕೊಂಡಿದ್ದು, ಘಟನೆಯ ಕುರಿತು ತನಿಖೆ ಮುಂದುವರಿದಿದೆ.



ವಿಧಾನಸಭೆ ಪ್ರತಿಪಕ್ಷದ ನಾಯಕರಾದ ಆರ್ ಅಶೋಕ್ ಶುಕ್ರವಾರ ಪಕ್ಷದ ರಾಷ್ಟ್ರೀಯ ಅಧ್ಯಕ್ಷರಾದ ನಿತಿನ್ ನಬಿನ್‌ರನ್ನು ಭೇಟಿ ಮಾಡಿ ಪ್ರಸಕ್ತ ರಾಜಕೀಯ ವಿದ್ಯಮಾನಗಳ ಬಗ್ಗೆ ಸಮಾಲೋಚನೆ ನಡೆಸಿದರು.

## ನವರಂಗ್-ರಾಜಾಜಿನಗರ ರಸ್ತೆ ವೈಟ್‌ಟಾಪಿಂಗ್‌ಗೆ ಚಾಲನೆ

● ವಿಕ್ರಮ ವಾಹಿನಿ । ಬೆಂಗಳೂರು

ರಾಜಾಜಿನಗರ ವಿಧಾನಸಭಾ ಕ್ಷೇತ್ರದ, ನವರಂಗ್ ವೃತ್ತದಿಂದ ರಾಜಾಜಿನಗರ ಪ್ರವೇಶ ದ್ವಾರದವರೆಗೂ 1.8ಕಿಲೋ ಮೀಟರ್ ವೈಟ್ ಟಾಪಿಂಗ್ ರಸ್ತೆ ಲೋಕಾರ್ಪಣೆ ಕಾರ್ಯಕ್ರಮ.

ಮಾಜಿ ಸಚಿವರು, ಶಾಸಕರಾದ ಎಸ್.ಸುರೇಶ್ ಕುಮಾರ್ ರವರು, ಕುಣಿಗಲ್ ಡಿಪೋ ಬಸ್ ಚಾಲಕನ ಜೊತೆಯಲ್ಲಿ ಉದ್ಘಾಟನೆ ಮಾಡಿದರು.

ಕಾರ್ಯಪಾಲಕ ಅಭಿಯಂತರಾದ ಬಾಲಾಜಿ, ಸಹಾಯಕ ಕಾರ್ಯಪಾಲಕ ಅಭಿಯಂತರುಗಳಾದ ಮಂಜುನಾಥ್, ಶೈಲಾ ರವರು, ಬಿ.ಸ್ಮೈಲ್ ಅಧಿಕಾರಿಗಳು ಉಪಸ್ಥಿತಿರಿದ್ದರು. ಇದೇ ಸಂದರ್ಭದಲ್ಲಿ ಎಸ್.ಸುರೇಶ್ ಕುಮಾರ್ ರವರು ಮಾತನಾಡಿ ನವರಂಗ್ ವೃತ್ತದಿಂದ ರಾಜಾಜಿನಗರ ಪ್ರವೇಶ ದ್ವಾರದವರೆಗೂ ಸರಿಸುಮಾರು 1.8ಕಿಲೋ ಮೀಟರ್ ವೈಟ್ ಟಾಪಿಂಗ್ ರಸ್ತೆ ಶುಕ್ರವಾರದಿಂದ ಸಾರ್ವಜನಿಕರ ವಾಹನ ಓಡಾಟಕ್ಕೆ




ಲೋಕರ್ಪಣೆಯಾಗಿದೆ.

ಈ ರಸ್ತೆಯಲ್ಲಿ ರಾಜ್ಯ ರಸ್ತೆ ಸಾರಿಗೆಯ 4500ಹೆಚ್ಚು ಬಸ್ ಗಳು, ಸಾವಿರಾರು ವಾಹನಗಳು ಪ್ರತಿದಿನ ಸಂಚರಿಸಲಿದೆ. ಈ ರಸ್ತೆ ಇಂದಿನಿಂದ ಪ್ರಾರಂಭವಾಗಿರುವುದರಿಂದ ಸಂಚಾರ ದಟ್ಟಣೆ ಕಡಿಮೆಯಾಗಲಿದೆ ಮತ್ತು ವಿಶೇಷವೆಂದರೆ ಈ ರಸ್ತೆಯಲ್ಲಿ ಮಳೆ ನೀರು ಸಂಗ್ರಹಕ್ಕೆ 10ಕಡೆಗಳಲ್ಲಿ ಮಾಡಲಾಗಿದೆ. ನೀರಿನ ಮತ್ತು ಒಳಚರಂಡಿ ವ್ಯವಸ್ಥೆ ಹಾಗೂ ಓ.ಎಫ್ ಸಿ.ಕೇಬಲ್ ಡಕ್ ಗಳನ್ನು ಮತ್ತು ಸಸಿ ನೆಡಲು ಜಾಗಗಳನ್ನು ಬಿಡಲಾಗಿದೆ ಪರಿಸರ ರಕ್ಷಣೆಗೂ ಆದ್ಯತೆ ನೀಡಲಾಗಿದೆ. ವೈಟ್ ಟಾಪಿಂಗ್ ರಸ್ತೆಯನ್ನು ಓಷನ್ ಕನ್ಸ್ಟ್ರಕ್ಷನ್ ರವರು ನಿರ್ಮಾಣ ಮಾಡಿದ್ದಾರೆ ಎಂದು ಹೇಳಿದರು.

ಮಾಜಿ ಉಪಮಹಾಪೌರರಾದ ರಂಗಣ್ಣ, ಮಾಜಿ ಪಾಲಿಕೆ ಸದಸ್ಯರುಗಳಾದ ಹೆಚ್.ಆರ್.ಕೃಷ್ಣಪ್ಪ, ದೀಪಾ ನಾಗೇಶ್ ಮತ್ತು ಬಿಜೆಪಿ ಪ್ರಮುಖ ಮುಖಂಡರುಗಳು ಭಾಗವಹಿಸಿದ್ದರು. ರಸ್ತೆ ಅಭಿವೃದ್ಧಿಯಿಂದ ರಾಜಾಜಿನಗರ ಭಾಗದ ಸಂಚಾರ ಸುಗಮಗೊಳ್ಳುವುದರ ಜೊತೆಗೆ ಮಳೆನೀರು ನಿರ್ವಹಣೆ ಮತ್ತು ಪರಿಸರ ಸಂರಕ್ಷಣೆಗೆ ಹೆಚ್ಚಿನ ಆದ್ಯತೆ ದೊರೆಯಲಿದೆ.

## ಡಾ॥ ಅಗರವಾಲ್ ಆಸ್ಪತ್ರೆಯಲ್ಲಿ ರಕ್ಷಾ ಬಂಧನ ಕಾರ್ಯಕ್ರಮ

● ವಿಕ್ರಮ ವಾಹಿನಿ । ಬೆಂಗಳೂರು

ಶಾಂತಿನಗರ ವಿಧಾನಸಭಾ ಕ್ಷೇತ್ರ: ಲ್ಯಾಂಗ್ ಫೋರ್ಡ್ ರಸ್ತೆಯಲ್ಲಿರುವ ಡಾ.ಅಗರವಾಲ್ ಆಸ್ಪತ್ರೆಯಲ್ಲಿ ರಕ್ಷಾ ಬಂಧನ ಹಬ್ಬವನ್ನು ನೇತ್ರಾ ವೈದ್ಯರಾದ ಡಾ.ಸುನೀತ್ ಅಗರ್ ವಾಲ್ ರವರು ವೈದ್ಯರು, ಸಿಂಬ್ಬದಿಗಳ ಮತ್ತು ಮಕ್ಕಳ ಜೊತೆಯಲ್ಲಿ ಅಚರಿಸಿದರು.

ಇದೇ ಸಂದರ್ಭದಲ್ಲಿ ಡಾ॥ಸುನೀತಾ ಅಗರವಾಲ್ ರವರು ಮಾತನಾಡಿ ಸಹೋದರ–

ಸಹೋದರಿಯರ ಪ್ರೀತಿ, ರಕ್ಷಣೆಯ ಬಂಧನದ ಹಬ್ಬ ಇದು ರಾಖಿ ಕಟ್ಟುವುದು ಅಂದ್ರೆ ಕೇವಲ ದಾರವಲ್ಲ, ಅದು "ನಾನು ನಿನ್ನ ಜೊತೆ ಇದ್ದೇನೆ" ಅನ್ನೋ ಭರವಸೆ.

ಸಹೋದರಿ ಸಹೋದರನಿಗೆ ದೀರ್ಘಾಯುಷ್ಯ, ಯಶಸ್ಸು ಬಯಸಿ ರಾಖಿ ಕಟ್ಟಿದರೆ, ಸಹೋದರ ಅವಳನ್ನು ಜೀವನಪೂರ್ತಿ ಕಾಪಾಡುವ ಮಾತು ಕೊಡ್ತಾನೆ ಎಂದರ್ಥ.

ನೇತ್ರದಾನ, ಮಹಾದಾನ ಎಲ್ಲರು ನೇತ್ರದಾನ



ಮಾಡಿ, ಮನುಷ್ಯ ಸತ್ತ ಮೇಲೆ ಅವನ ಅಂಗಾಂಗ ಇನ್ನೊಬ್ಬರ ಬಾಳಿಗೆ ಬೆಳಕಾಗುತ್ತದೆ.

ಎಲ್ಲರು ಸಹಬಾಳ್ಮೆಯಲ್ಲಿ ಸಹೋದರ, ಸಹೋದರಿಯರಂತೆ ಬಾಳಬೇಕು. ನಾವೆಲ್ಲರು ಒಂದೇ ಎಂದು ಜೀವನ ಸಾಗಿಸಬೇಕು ಆಗ ದೇಶ ಅಭಿವೃದ್ಧಿಯಾಗುತ್ತದೆ ಎಂದು ಹೇಳಿದರು.

## ಪಿಓಪಿ ಗಣೇಶ ಮೂರ್ತಿಗಳಿಗೆ ಸಂಪೂರ್ಣ ನಿಷೇಧ

● ವಿಕ್ರಮ ವಾಹಿನಿ । ಬೆಂಗಳೂರು

ಗಣೇಶ ಚತುರ್ಥಿ ಹಿನ್ನೆಲೆಯಲ್ಲಿ ಪರಿಸರ ಸಂರಕ್ಷಣೆ, ಜಲಮೂಲಗಳ ರಕ್ಷಣೆ ಹಾಗೂ ಸಾರ್ವಜನಿಕ ಆರೋಗ್ಯದ ಹಿತದೃಷ್ಟಿಯಿಂದ ಬೆಂಗಳೂರು ಪೂರ್ವ ನಗರ ಪಾಲಿಕೆ ವ್ಯಾಪ್ತಿಯಲ್ಲಿ ಪ್ಲಾಸ್ಟರ್ ಆಫ್ ಪ್ಯಾರಿಸ್ (ಪಿಓಪಿ) ಹಾಗೂ ರಾಸಾಯನಿಕ ಬಣ್ಣಗಳಿಂದ ತಯಾರಿಸಿದ ಗಣೇಶ ಮೂರ್ತಿಗಳ ತಯಾರಿಕೆ, ದಾಸ್ತಾನು, ಸಾಗಣೆ, ಮಾರಾಟ ಮತ್ತು ವಿಸರ್ಜನೆಯನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ ಎಂದು ಪಾಲಿಕೆ ಆಯುಕ್ತ ಡಿ.ಎಸ್. ರಮೇಶ್ ತಿಳಿಸಿದ್ದಾರೆ.



ಈ ಕುರಿತು ಅಧಿಕಾರಿಗಳು ಹಾಗೂ ಸಿಬ್ಬಂದಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಲಾಗಿದ್ದು, ಪಾಲಿಕೆ ವ್ಯಾಪ್ತಿಯ ಮಾರುಕಟ್ಟೆ, ಮೂರ್ತಿ ತಯಾರಿಕಾ ಘಟಕಗಳು, ಗೋದಾಮುಗಳು ಹಾಗೂ ವಾಣಿಜ್ಯ ಪ್ರದೇಶಗಳಲ್ಲಿ ನಿರಂತರ ತಪಾಸಣೆ ನಡೆಸುವಂತೆ ಸೂಚಿಸಲಾಗಿದೆ. ನಿಷೇಧಿತ ಪಿಓಪಿ ಮೂರ್ತಿಗಳು ಕಂಡುಬಂದಲ್ಲಿ ಅವುಗಳನ್ನು ವಶಪಡಿಸಿಕೊಂಡು, ಸಂಬಂಧಪಟ್ಟವರ ವಿರುದ್ಧ ದಂಡ ಸೇರಿದಂತೆ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದ್ದಾರೆ.

**ಜಲಮೂಲಗಳ ರಕ್ಷಣೆಗೆ ಕ್ರಮ**

ಪಿಓಪಿ ಹಾಗೂ ಥರ್ಮಕೋಲ್ ಬಳಸಿ ಗಣೇಶ ಮೂರ್ತಿಗಳನ್ನು ತಯಾರಿಸುವುದು, ದಾಸ್ತಾನು ಮಾಡುವುದು ಮತ್ತು ಮಾರಾಟ ಮಾಡುವುದಕ್ಕೆ ಅವಕಾಶವಿಲ್ಲ. ಅಲ್ಲದೆ ಸೀಸ, ಪಾದರಸ, ಕ್ಯಾಡ್ಮಿಯಂ ಸೇರಿದಂತೆ ಭಾರಲೋಹಗಳನ್ನು ಒಳಗೊಂಡಿರುವ ರಾಸಾಯನಿಕ ಬಣ್ಣಗಳ ಬಳಕೆಯನ್ನೂ ನಿಷೇಧಿಸಲಾಗಿದೆ. ಇಂತಹ ಮೂರ್ತಿಗಳನ್ನು ಕೆರೆ, ನದಿ, ಕಾಲುವೆ, ಬಾವಿ ಸೇರಿದಂತೆ ನೈಸರ್ಗಿಕ ಜಲಮೂಲಗಳಲ್ಲಿ ವಿಸರ್ಜಿಸುವುದನ್ನು ಕಟ್ಟುನಿಟ್ಟಾಗಿ ತಡೆಯಲಾಗುವುದು ಎಂದು ಅವರು ಹೇಳಿದರು.

**ಮಣ್ಣಿನ ಮೂರ್ತಿಗಳ ಬಳಕೆಗೆ ಮನವಿ**

ಸಾರ್ವಜನಿಕರು ಪರಿಸರ ಸ್ನೇಹಿ ಮಣ್ಣಿನಿಂದ ತಯಾರಿಸಿದ ಹಾಗೂ ನೈಸರ್ಗಿಕ ಬಣ್ಣಗಳನ್ನು ಬಳಸಿದ ಗಣೇಶ ಮೂರ್ತಿಗಳನ್ನೇ ಖರೀದಿಸಿ ಪೂಜಿಸುವಂತೆ ಆಯುಕ್ತರು ಮನವಿ ಮಾಡಿದರು. ಮೂರ್ತಿಗಳ ವಿಸರ್ಜನೆಗೆ ಪಾಲಿಕೆಯಿಂದ ಗುರುತಿಸಲಾದ ಕಲ್ಯಾಣಿ, ಟ್ಯಾಂಕ್ ಅಥವಾ ಅಧಿಕೃತ ವಿಸರ್ಜನಾ ಸ್ಥಳಗಳನ್ನು ಮಾತ್ರ ಬಳಸಬೇಕು ಎಂದು ತಿಳಿಸಿದರು.

ಗಣೇಶ ಮೂರ್ತಿಗಳ ವಿಸರ್ಜನೆ ವೇಳೆ ಜಲಮೂಲಗಳು ಕಲುಷಿತಗೊಳ್ಳದಂತೆ ಪಾಲಿಕೆ ವತಿಯಿಂದ ಅಗತ್ಯ ವ್ಯವಸ್ಥೆ ಕಲ್ಪಿಸಲಾಗುವುದು. ವಿಸರ್ಜನಾ ಸ್ಥಳಗಳಲ್ಲಿ ಸ್ವಚ್ಛತೆ, ತ್ಯಾಜ್ಯ ಸಂಗ್ರಹಣೆ ಹಾಗೂ ವಿಲೇವಾರಿಗೆ ಕ್ರಮ ಕೈಗೊಳ್ಳಲಾಗುವುದು.

"ಗಣೇಶ ಚತುರ್ಥಿ ನಮ್ಮ ಸಂಸ್ಕೃತಿ ಮತ್ತು ಪರಂಪರೆಯ ಪ್ರಮುಖ ಹಬ್ಬ. ಧಾರ್ಮಿಕ ಆಚರಣೆಯೊಂದಿಗೆ ಪರಿಸರ ಸಂರಕ್ಷಣೆಯ ಜವಾಬ್ದಾರಿಯನ್ನೂ ಪ್ರತಿಯೊಬ್ಬರೂ ಅರಿತುಕೊಳ್ಳಬೇಕು. ಮಣ್ಣಿನ ಹಾಗೂ ನೈಸರ್ಗಿಕ ಬಣ್ಣಗಳ ಮೂರ್ತಿಗಳನ್ನು ಬಳಸಿ, ಗುರುತಿಸಲಾದ ಸ್ಥಳಗಳಲ್ಲೇ ವಿಸರ್ಜನೆ ಮಾಡುವ ಮೂಲಕ ಪರಿಸರ ಸ್ನೇಹಿ ಗಣೇಶ ಚತುರ್ಥಿ ಆಚರಿಸಬೇಕು," ಎಂದು ಡಿ.ಎಸ್. ರಮೇಶ್ ಮನವಿ ಮಾಡಿದರು.

ನಿಷೇಧಿತ ಪಿಓಪಿ ಮೂರ್ತಿಗಳ ತಯಾರಿಕೆ, ದಾಸ್ತಾನು, ಸಾಗಣೆ, ಮಾರಾಟ ಅಥವಾ ವಿಸರ್ಜನೆ ಕಂಡುಬಂದಲ್ಲಿ ಮೂರ್ತಿಗಳನ್ನು ವಶಪಡಿಸಿಕೊಂಡು ನಿಯಮಾನುಸಾರ ದಂಡ ಹಾಗೂ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಪಾಲಿಕೆ ಸ್ಪಷ್ಟಪಡಿಸಿದೆ.

## ನಾಗೇಂದ್ರ ಸಚಿವ ಸ್ಥಾನ ನೀಡಿಕೆಯಲ್ಲಿ ಭಂಡತನ ಇತ್ತು: ಸುನಿಲ್ ಕುಮಾರ್

● ವಿಕ್ರಮ ವಾಹಿನಿ । ಬೆಂಗಳೂರು

ಹಗರಣದ ಹೊಣೆ ಹೊತ್ತು ಈ ಹಿಂದೆ ರಾಜೀನಾಮೆ ನೀಡಿದ್ದ ಬಿ. ನಾಗೇಂದ್ರ ಅವರಿಗೆ ಮತ್ತೆ ಸಚಿವ ಸ್ಥಾನ ನೀಡಿದ್ದು ಕಾಂಗ್ರೆಸ್ ಹೈಕಮಾಂಡ್ ಮಾತ್ರವಲ್ಲ ಸಿಎಂ ಡಿ.ಕೆ.ಶಿವಕುಮಾರ್ ಹಾಗೂ ಮಾಜಿ ಸಿಎಂ ಸಿದ್ದರಾಮಯ್ಯ ಅವರ ಭಂಡತನಕ್ಕೆ ಸಾಕ್ಷಿಯಾಗಿತ್ತು. ಆ ಭಂಡತನವನ್ನು ನಾವು ಸಂಸದೀಯ ವ್ಯವಸ್ಥೆಯಲ್ಲೇ ಭೇದಿಸಿ, ಬಗ್ಗಿಸಿದ್ದೇವೆ ಎಂದು ಕರ್ನಾಟಕ ಸರ್ಕಾರದ ಮಾಜಿ ಸಚಿವರು ಹಾಗೂ ಕಾರ್ಕಳದ ಹಾಲಿ ಶಾಸಕ ಸುನಿಲ್ ಕುಮಾರ್ ಹೇಳಿದ್ದಾರೆ.



ಈ ಕುರಿತು ತಮ್ಮ ಫೇಸ್ ಬುಕ್ ಖಾತೆಯಲ್ಲಿ ನಾಗೇಂದ್ರ ರಾಜೀನಾಮೆ ವಿಷಯವಾಗಿ ಪ್ರತಿಕ್ರಿಯೆ ವ್ಯಕ್ತಪಡಿಸಿರುವ ಅವರು, ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ನಡೆದ ಹಗರಣದ ಆರೋಪಿ ಬಿ.ನಾಗೇಂದ್ರ ಅವರನ್ನು ಸಚಿವ ಸಂಪುಟದಿಂದ ವಜಾಗೊಳಿಸಬೇಕೆಂದು ಭಾರತೀಯ ಜನತಾ ಪಕ್ಷ ಸದನದಲ್ಲಿ ನಿರಂತರ ಹೋರಾಟ ನಡೆಸಿತ್ತು. ಪರಿಶಿಷ್ಟ ಪಂಗಡದ ಹಣ ನುಂಗಿದ ನಾಗೇಂದ್ರ ಈಗ ತಾನು ದಲಿತ ಎಂಬ ಕಾರಣ ನೀಡಿ ತನಿಖೆಯಿಂದ, ನ್ಯಾಯಾಲಯದ ಆದೇಶದಿಂದ ತಪ್ಪಿಸಿಕೊಳ್ಳುವುದನ್ನು ಸಂವಿಧಾನ ಒಪ್ಪದು ಎಂದು ಋಜುವಾತಾಗಿದೆ.

ಭ್ರಷ್ಟಾಚಾರದ ಬಗ್ಗೆ 'ಶೂನ್ಯ ಸಹಿಷ್ಣುತೆ' ಎಂದ ಸಿಎಂ ಡಿ.ಕೆ.ಶಿವಕುಮಾರ್ ಅವರು, ಭ್ರಷ್ಟ ನಾಗೇಂದ್ರನನ್ನು ಸಂಪುಟಕ್ಕೆ ಸೇರಿಸಿಕೊಂಡಿದ್ದೇ ಇನ್ನೊಂದು ದೊಡ್ಡ ಭ್ರಷ್ಟಾಚಾರವಾಗಿತ್ತು. ಜನರ ಹಣಕ್ಕೆ ಲೆಕ್ಕ ಕೇಳುವ ಬದಲು, ಆರೋಪ ಹೊತ್ತವರಿಗೇ ಅಧಿಕಾರದ ರಕ್ಷಾ ಕವಚ ನೀಡುತ್ತಿರುವ ಕಾಂಗ್ರೆಸ್ ಸರ್ಕಾರಕ್ಕೆ ರಾಜ್ಯದ ಜನತೆ ತಕ್ಕ ಉತ್ತರ ನೀಡಲಿದ್ದಾರೆ ಎಂಬುದು ಅರಿವಾಗುತ್ತದ್ದಂತೆ ನಾಗೇಂದ್ರ ರಾಜೀನಾಮೆ ಪಡೆದು ಕಾಂಗ್ರೆಸ್ ಮುಖ ಉಳಿಸಿಕೊಳ್ಳುವ ಪ್ರಯತ್ನ ನಡೆಸಿದೆ.

ನಾವು ಸದನದಲ್ಲಿ ಮೊದಲ ದಿನ ಈ ವಿಚಾರ ಪ್ರಸ್ತಾಪಿಸಿದಾಗಲೇ ನಾಗೇಂದ್ರ ರಾಜೀನಾಮೆ ಕೊಟ್ಟಿದ್ದರೆ, ಬರ, ಕೆಪಿಎಸ್ ಸಿ ಸೇರಿದಂತೆ ರಾಜ್ಯದ ಜ್ವಲಂತ ಸಮಸ್ಯೆಗಳ ಬಗ್ಗೆ ಚರ್ಚೆ ನಡೆಸುವುದಕ್ಕೆ ಅವಕಾಶವಾಗುತ್ತಿತ್ತು. ಆದರೆ ಸರ್ಕಾರ ಹರಿಬಿರಿಯಲ್ಲಿ ಕಲಾಪ ಮೊಟಕುಗಳಿಸಿ ಚರ್ಚೆಯಿಂದ ತಪ್ಪಿಸಿಕೊಂಡಿತು. ಭ್ರಷ್ಟರ ಪೋಷಣೆಗೆ ಕಾಂಗ್ರೆಸ್ ಕಲಾಪ ನುಂಗಿದ್ದನ್ನು ಜನ ಕ್ಷಮಿಸುವುದಿಲ್ಲ ಎಂದು ಸುನಿಲ್ ಕುಮಾರ್ ತಮ್ಮ ಅಸಮಾಧಾನ ಹೊರ ಹಾಕಿದ್ದಾರೆ.

## ನೇರಳೆ ಮಾರ್ಗದಲ್ಲಿ ಮೆಟ್ರೋ ವೇಗಕ್ಕೆ ಕಡಿವಾಣ



● ವಿಕ್ರಮ ವಾಹಿನಿ । ಬೆಂಗಳೂರು

ನಿರ್ವಹಣಾ ಕಾಮಗಾರಿ ಹಿನ್ನೆಲೆಯಲ್ಲಿ ನಮ್ಮ ಮೆಟ್ರೋದ ನೇರಳೆ ಮಾರ್ಗದಲ್ಲಿ ರೈಲುಗಳ ವೇಗದ ಮಿತಿಯನ್ನು ತಾತ್ಕಾಲಿಕವಾಗಿ ಕಡಿತಗೊಳಿಸಲಾಗಿದೆ. ಬೆನ್ನಿಗಾನಹಳ್ಳಿ ಮತ್ತು ಬೈಯಪ್ಪನಹಳ್ಳಿ ನಡುವಿನ ಓಪನ್ ವೆಬ್ ಗರ್ಡರ್ (ಔಡಬ್ಲು)ನಲ್ಲಿ ನಿರ್ವಹಣಾ ಕಾರ್ಯ ನಡೆಯುತ್ತಿರುವ ಹಿನ್ನೆಲೆಯಲ್ಲಿ ರೈಲುಗಳನ್ನು ಗರಿಷ್ಠ ಗಂಟೆಗೆ 40 ಕಿ.ಮೀ. ವೇಗದಲ್ಲಿ ಸಂಚರಿಸಲಾಗುತ್ತಿದೆ ಎಂದು ಬೆಂಗಳೂರು ಮೆಟ್ರೋ ರೈಲು ನಿಗಮ (ಬಿಎಂಆರ್‌ಸಿಎಲ್) ತಿಳಿಸಿದೆ.

ಈ ಮಾರ್ಗದಲ್ಲಿ ಗರ್ಡರ್‌ನ ನಿಯತಕಾಲಿಕ ತಪಾಸಣೆ ಹಾಗೂ ಅಗತ್ಯ ನಿರ್ವಹಣಾ ಕಾರ್ಯಗಳನ್ನು ತಾಂತ್ರಿಕ ಮೇಲ್ವಿಚಾರಣೆಯಲ್ಲಿ ಪರಿಣತ ತಂಡ ಕೈಗೊಳ್ಳುತ್ತಿದೆ. ಸಾಮಾನ್ಯವಾಗಿ ಈ ಭಾಗದಲ್ಲಿ ರೈಲುಗಳ ಗರಿಷ್ಠ ಅನುಮತಿಸಲಾದ ವೇಗ ಗಂಟೆಗೆ 65 ಕಿ.ಮೀ. ಇದ್ದು, ಪ್ರಯಾಣಿಕರ ಸುರಕ್ಷತೆಯ ದೃಷ್ಟಿಯಿಂದ ಕಾಮಗಾರಿ ಪೂರ್ಣಗೊಳ್ಳುವವರೆಗೆ ವೇಗವನ್ನು 40 ಕಿ.ಮೀ.ಗೆ ಸೀಮಿತಗೊಳಿಸಲಾಗಿದೆ.

ವೇಗದ ಮಿತಿ ಕಡಿತಗೊಳಿಸಿದ್ದರೂ ನೇರಳೆ ಮಾರ್ಗದ ಮೆಟ್ರೋ ಸೇವೆ ಎಂದಿನಂತೆ ಮುಂದುವರಿಯಲಿದೆ. ಇದರಿಂದ ಒಟ್ಟಾರೆ ಪ್ರಯಾಣದ ಅವಧಿಯಲ್ಲಿ ಅಲ್ಪ ಪ್ರಮಾಣದ ಹೆಚ್ಚಳವಾಗುವ ಸಾಧ್ಯತೆಯಿದೆ ಎಂದು ಬಿಎಂಆರ್‌ಸಿಎಲ್ ತಿಳಿಸಿದೆ.

ನಿರ್ವಹಣಾ ಕಾಮಗಾರಿಯನ್ನು 2026ರ ಅಕ್ಟೋಬರ್ ಎರಡನೇ ವಾರದೊಳಗೆ ಪೂರ್ಣಗೊಳಿಸುವ ನಿರೀಕ್ಷೆಯಿದೆ. ಕಾಮಗಾರಿ ಮುಗಿದ ಬಳಿಕ ಗರ್ಡರ್‌ನ ತಾಂತ್ರಿಕ ಮೌಲ್ಯಮಾಪನ ನಡೆಸಿ, ಅದರ ಫಲಿತಾಂಶದ ಆಧಾರದ ಮೇಲೆ ತಾತ್ಕಾಲಿಕ ವೇಗ ನಿರ್ಬಂಧವನ್ನು ಮರುಪರಿಶೀಲಿಸಲಾಗುವುದು. ಮೆಟ್ರೋ ರೈಲುಗಳ ಸುರಕ್ಷಿತ ಹಾಗೂ ವಿಶ್ವಾಸಾರ್ಹ ಸಂಚಾರ ಖಚಿತಪಡಿಸಲು ಮುಂಜಾಗ್ರತಾ ಕ್ರಮವಾಗಿ ಈ ನಿರ್ವಹಣಾ ಕಾರ್ಯ ಕೈಗೊಳ್ಳಲಾಗಿದೆ ಎಂದು ಬಿಎಂಆರ್‌ಸಿಎಲ್ ಸ್ಪಷ್ಟಪಡಿಸಿದೆ.

## ನಾಗೇಂದ್ರ ರಾಜೀನಾಮೆ; ಪ್ರತಿಪಕ್ಷಗಳಿಗೆ ಸವಾಲು

1 ನೇ ಪುಟದಿಂದ

ವಾಲ್ಮೀಕಿ ನಿಗಮದ ಹಣ ಅಕ್ರಮ ಪ್ರಕರಣದಲ್ಲಿ ತಮ್ಮ ಪಾತ್ರವಿಲ್ಲ. ತಾವು ಯಾವುದೇ ಅಕ್ರಮ ಹಣ ವರ್ಗಾವಣೆಗೆ ಸಹಿ ಹಾಕಿಲ್ಲ ಹಾಗೂ ಪ್ರಕರಣಕ್ಕೆ ಸಂಬಂಧಿಸಿದ ಹಣವನ್ನು ಸಂಪೂರ್ಣವಾಗಿ ವಾಪಸ್ ಪಡೆಯಲಾಗಿದೆ ಎಂದು ನಾಗೇಂದ್ರ ವಾದಿಸಿದರು. ಬ್ಯಾಂಕ್ ಅಧಿಕಾರಿಗಳ ವಿರುದ್ಧವೂ ಕ್ರಮದ ಅಗತ್ಯವಿದೆ ಎಂದು ಅವರು ಹೇಳಿದರು.

**ಬಿಜೆಪಿ ವಿರುದ್ಧ ವಾಗ್ದಾಳಿ**

ತಮ್ಮ ರಾಜೀನಾಮೆಗಾಗಿ ಬಿಜೆಪಿ ನಡೆಸುತ್ತಿರುವ ಪ್ರತಿಭಟನೆ ಮತ್ತು ಪಾದಯಾತ್ರೆಯನ್ನು ರಾಜಕೀಯ ಕುತಂತ್ರ ಎಂದು ಟೀಕಿಸಿದ ನಾಗೇಂದ್ರ, ಪ್ರತಿಪಕ್ಷಗಳು ಸದನದಲ್ಲಿ ಜನರ ಸಮಸ್ಯೆಗಳ ಕುರಿತು ಚರ್ಚೆ ನಡೆಸಲು ಅವಕಾಶ ನೀಡಲಿಲ್ಲ ಎಂದು ಆರೋಪಿಸಿದರು. ಬಿಜೆಪಿ ಸಂವಿಧಾನ ವಿರೋಧಿ ಹಾಗೂ ಮನುಸ್ಮೃತಿ ಮನಸ್ಥಿತಿಯ ರಾಜಕಾರಣ ಮಾಡುತ್ತಿದೆ ಎಂದು ವಾಗ್ದಾಳಿ ನಡೆಸಿದರು.

ರಾಜ್ಯಪಾಲರು ತಮ್ಮ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವುದನ್ನೂ ಪ್ರಶ್ನಿಸಿದ ನಾಗೇಂದ್ರ, ಮಾಜಿ ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮಿ ವಿರುದ್ಧದ ಪ್ರಕರಣದಲ್ಲಿ ಏಕೆ ಇದೇ ರೀತಿಯ ಕ್ರಮ ಕೈಗೊಂಡಿಲ್ಲ ಎಂದು ಪ್ರಶ್ನಿಸಿದರು. ತಮ್ಮ ವಿರುದ್ಧ ತನಿಖಾ ಸಂಸ್ಥೆಗಳನ್ನು ರಾಜಕೀಯವಾಗಿ ಬಳಸಿಕೊಳ್ಳಲಾಗುತ್ತಿದೆ ಎಂದು ಆರೋಪಿಸಿದರು.

**ಬಿಜೆಪಿ ಪಾದಯಾತ್ರೆ ನಡುವೆ ರಾಜೀನಾಮೆ**

ವಾಲ್ಮೀಕಿ ಅಭಿವೃದ್ಧಿ ನಿಗಮದ ಸುಮಾರು ₹187 ಕೋಟಿ ಅಕ್ರಮ ಹಣ ವರ್ಗಾವಣೆ ಪ್ರಕರಣಕ್ಕೆ ಸಂಬಂಧಿಸಿದಂತೆ ಜಾರಿ ನಿರ್ದೇಶನಾಲಯದ ತನಿಖೆ ಹಾಗೂ ಆರೋಪಗಳ ಹಿನ್ನೆಲೆಯಲ್ಲಿ ನಾಗೇಂದ್ರ ರಾಜೀನಾಮೆಗೆ ಬಿಜೆಪಿ ನಿರಂತರವಾಗಿ ಒತ್ತಾಯಿಸುತ್ತಿತ್ತು. ರಾಯಚೂರಿನಿಂದ ಬಳ್ಳಾರಿವರೆಗೆ ಸೆಪ್ಟೆಂಬರ್ 1ರಿಂದ 10ರವರೆಗೆ ಪಾದಯಾತ್ರೆ ನಡೆಸಲು ಬಿಜೆಪಿ ನಿರ್ಧರಿಸಿತ್ತು.

ನಾಗೇಂದ್ರ ಅವರು ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿದರೂ, ತಮ್ಮ ಮೇಲಿನ ಆರೋಪಗಳನ್ನು ತಳ್ಳಿಹಾಕಿದ್ದು, ತನಿಖೆಯಲ್ಲಿ ತಾವು ನಿರಪರಾಧಿ ಎಂಬುದು ಸಾಬೀತಾಗಲಿದೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು. ಪಕ್ಷಕ್ಕೆ ಮುಜುಗರವಾಗಬಾರದು ಹಾಗೂ ಸರ್ಕಾರದ ಅಭಿವೃದ್ಧಿ ಕಾರ್ಯಗಳಿಗೆ ಯಾವುದೇ ಅಡ್ಡಿಯಾಗಬಾರದು ಎಂಬ ಕಾರಣಕ್ಕೆ ಸ್ವಯಂಪ್ರೇರಿತವಾಗಿ ರಾಜೀನಾಮೆ ನೀಡಿರುವುದಾಗಿ ಅವರು ತಿಳಿಸಿದರು.

ಇದೇ ವೇಳೆ, ಅಗತ್ಯವಿದ್ದರೆ ಶಾಸಕ ಸ್ಥಾನಕ್ಕೂ ರಾಜೀನಾಮೆ ನೀಡಿ ಚುನಾವಣೆಯನ್ನು ಎದುರಿಸಲು ಸಿದ್ಧವಿರುವುದಾಗಿ ನಾಗೇಂದ್ರ ಘೋಷಿಸಿದರು. ಬಳ್ಳಾರಿ ಬಿಜೆಪಿ ನಾಯಕರಿಗೆ ಸವಾಲು ಹಾಕಿದ ಅವರು, ತಮ್ಮ ವಿರುದ್ಧದ ಆರೋಪಗಳನ್ನು ಜನತಾ ನ್ಯಾಯಾಲಯದ ಮುಂದೆ ಚರ್ಚಿಸಲು ಸಿದ್ಧ ಎಂದು ಹೇಳಿದರು.

ಈ ರಾಜಕೀಯ ಬೆಳವಣಿಗೆಗಳ ನಡುವೆಯೇ ನಾಗೇಂದ್ರ ಸಚಿವ ಸ್ಥಾನ ತೊರೆಯುವ ಘೋಷಣೆ ಮಾಡಿದ್ದು, ಪ್ರಕರಣವು ರಾಜ್ಯ ರಾಜಕಾರಣದಲ್ಲಿ ಮತ್ತಷ್ಟು ಚರ್ಚೆಗೆ ಕಾರಣವಾಗಿದೆ.

## ಗ್ರಾಮೀಣ ಕುಡಿವ ನೀರು ಯೋಜನೆಗೆ ಅರಣ್ಯ ಅನುಮತಿಗೆ ಪ್ರಯತ್ನ: ಈಶ್ವರ ಖಂಡ್ರೆ

● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯದ 101 ತಾಲೂಕಿನಲ್ಲಿ ಬರಪರಿಸ್ಥಿತಿ ಇದ್ದು, ಗ್ರಾಮೀಣ ಜನರ ಬೇಡಿಕೆಗೆ ಅನುಗುಣವಾಗಿ ವಿಬಿಜಿ ರಾಮ್ ಜಿ ಅಡಿಯಲ್ಲಿ ಉದ್ಯೋಗ ನೀಡಬೇಕು ಮತ್ತು 15 ದಿನಗಳ ಒಳಗಾಗಿ ಕೂಲಿ ಹಣ ಪಾವತಿ ಮಾಡಬೇಕು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ಸ್ಪಷ್ಟ ಸೂಚನೆ ನೀಡಿದ್ದಾರೆ.

ವಿಡಿಯೋ ಕಾನ್ಫರೆನ್ಸ್ ಮೂಲಕ ಬೆಂಗಳೂರು ದಕ್ಷಿಣ, ಹಾಸನ, ಚಿಕ್ಕಮಗಳೂರು, ಧಾರವಾಡ, ಬಾಗಲಕೋಟೆ ಜಿಲ್ಲೆಗಳಲ್ಲಿ ವಿಬಿಜಿ ರಾಮ್ ಜಿ ಅನುಷ್ಠಾನದ ಪ್ರಗತಿ ಪರಿಶೀಲನೆ ನಡೆಸಿದ ಅವರು, ಬೆಂಗಳೂರು ಸುತ್ತಮುತ್ತ 382 ರೂ.ಗೆ ಕೂಲಿ ಕಾರ್ಮಿಕರು ಸಿಗುತ್ತಿಲ್ಲ ಎಂಬುದು ಸರಿಯಲ್ಲ. ಅವರ ಗ್ರಾಮದಲ್ಲಿ ಮೂಲಸೌಕರ್ಯ ಅಭಿವೃದ್ಧಿ ಕಾರ್ಯ ಆಗುತ್ತದೆ, ಕೆರೆಯ ಹೂಳು ತೆಗೆದರೆ ನೀರಿನ ಸಂಗ್ರಹ ಹೆಚ್ಚುತ್ತದೆ, ಉತ್ತಮ ರಸ್ತೆ ಆಗುತ್ತದೆ, ಕೊಳವೆ ಬಾವಿಗಳ ಮರುಪೂರಣ ಆಗುತ್ತದೆ, ಅಂತರ್ಜಲ ಹೆಚ್ಚುತ್ತದೆ ಎಂದು ಮನವೊಲಿಸಿದರೆ ಜನರು ಕೆಲಸಕ್ಕೆ ಬರುತ್ತಾರೆ ಎಂದು ಸಚಿವರು ಹೇಳಿದರು.

ಬೆಂಗಳೂರು ದಕ್ಷಿಣ ಜಿಲ್ಲೆಯಲ್ಲಿ ಕಳೆದ



ವರ್ಷ ನರೇಗಾದಡಿ ನೀಡಲಾಗಿದ್ದ ಉದ್ಯೋಗಕ್ಕೆ ಹೋಲಿಸಿದರೆ ವಿಬಿಜಿ ರಾಮ್ ಜಿಯಲ್ಲಿ ಶೇ.80ರಷ್ಟು ಕಡಿಮೆಯಾಗಿದೆ. ಜಿಲ್ಲೆಯ 120 ಗ್ರಾಮ ಪಂಚಾಯತಿ ಇದ್ದು, ಪ್ರತಿ ಪಂಚಾಯತಿ ವ್ಯಾಪ್ತಿಯಲ್ಲಿ ನಿತ್ಯ ಕನಿಷ್ಠ 50 ಜನರಿಗೆ ಕೆಲಸ ಕೊಟ್ಟರೂ, 6000 ಜನರಿಗೆ ಉದ್ಯೋಗ ಕಲ್ಪಿಸಬಹುದು ಎಂದರು.

ಹಲವು ಗ್ರಾಮ ಪಂಚಾಯತಿಗಳಲ್ಲಿ ವಿಬಿಜಿ ರಾಮ್ ಜಿ ಕೂಲಿ ಹಣ, ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಲಾಗಿನ್ ನಲ್ಲೇ ಉಳಿದಿದೆ. ಈ ರೀತಿ ವಿಳಂಬ ಮಾಡಿದರೆ ದಂಡ ಹಾಕಲೂ ಅವಕಾಶವಿದೆ ಎಂದು ಎಚ್ಚರಿಕೆ ನೀಡಿದರು.

ಪ್ರತಿ ಪಿಡಿಓಗಳು ವೇತನ ಪಾವತಿಗೆ ತತ್ ಕ್ಷಣ ಕ್ರಮ ವಹಿಸಬೇಕು. ವಾರದಲ್ಲಿ 2 ದಿನ ಖಜಾನೆಗೆ ಹೋಗಿ ಹಣ ಪಾವತಿ ಮಾಡಿಸಲು ಆಸಕ್ತಿ ವಹಿಸಬೇಕು. ಸಕಾಲದಲ್ಲಿ ವೇತನ ಬಂದರೆ ಜನರೂ ಕೆಲಸಕ್ಕೆ ಬರುತ್ತಾರೆ ಎಂದರು.

ಈ ಸಂದರ್ಭದಲ್ಲಿ ಬೆಂಗಳೂರು ದಕ್ಷಿಣ ಜಿಲ್ಲಾ ಪಂಚಾಯತಿ ಕಚೇರಿಯಲ್ಲಿ ಹಾಜರಿದ್ದ ಪೌರಾಡಳಿತ ಸಚಿವ ಎಚ್.ಸಿ. ಬಾಲಕೃಷ್ಣ ಮಾಗಡಿಯಲ್ಲಿ ವಿಬಿಜಿ ರಾಮ್ ಜಿ ಸಮರ್ಪಕ ಅನುಷ್ಠಾನದ ಪರಿಶೀಲನೆಯನ್ನು ತಾವೂ ಮಾಡುವುದಾಗಿ ತಿಳಿಸಿದರು.

ಜಿಲ್ಲೆಗೆ ಈಗಾಗಲೇ 20 ಕೋಟಿ ರೂ. ಹಣ ಬಿಡುಗಡೆ ಮಾಡಲಾಗಿದೆ. 1ಕೋಟಿ 86 ಲಕ್ಷ ರೂ. ವೇತನ ಪಾವತಿ ಆಗಬೇಕಿದ್ದರೂ, ಈವರೆಗೆ 40 ಲಕ್ಷ ರೂ. ಮಾತ್ರ ಪಾವತಿ ಆಗಿದೆ. 1.46 ಕೋಟಿ ರೂ. ಕೂಲಿ ಪಾವತಿ ಆಗಿಲ್ಲ. ಈ ರೀತಿ ವಿಳಂಬ ಆಗದಂತೆ ಜಿಲ್ಲಾ ಪಂಚಾಯತಿ ಸಿಇಓಗಳು ಕ್ರಮ ವಹಿಸಬೇಕು ಎಂದು ಸೂಚಿಸಿದರು.

ಅರಣ್ಯ ಅನುಮತಿಗೆ ಪ್ರಯತ್ನ: ಈಶ್ವರ ಖಂಡ್ರೆ

ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಗ್ರಾಮೀಣ ಕುಡಿಯುವ ನೀರು ಪೂರೈಕೆ ಯೋಜನೆಗೆ ಕೆರೆ, ಸರೋವರ, ನದಿಗಳಿಂದ ನೀರು ತರಲು ಕೊಳವೆ ಅಳವಡಿಕೆಗೆ ಅರಣ್ಯ ಅನುಮತಿ ದೊರಕದೆ ಕಾಮಗಾರಿ ವಿಳಂಬವಾಗಿದೆ.

ಈ ಬಗ್ಗೆ ಅರಣ್ಯ ಇಲಾಖೆ ಸಚಿವರು ಮತ್ತು ಅಧಿಕಾರಿಗಳೊಂದಿಗೆ ಸಭೆ ನಡೆಸಿ, ಪರಿವೇಶ್ ಪೋರ್ಟಲ್ ನಲ್ಲಿ ಅರ್ಜಿ ಸಲ್ಲಿಸಿ, ಕೇಂದ್ರ ಸರ್ಕಾರಕ್ಕೆ ಕಳಿಸಿ ನಿಯಮಾನುಸಾರ ಶೀಘ್ರ ಅನುಮತಿ ಪಡೆಯಲು ಕ್ರಮ ವಹಿಸಲಾಗುವುದು ಎಂದು ಈಶ್ವರ ಖಂಡ್ರೆ ತಿಳಿಸಿದರು.

ಧಾರವಾಡ, ಚಿಕ್ಕಮಗಳೂರು, ಹಾಸನ, ಬಾಗಲಕೋಟೆ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ತಾಲೂಕು ಕಾರ್ಯ ನಿರ್ವಹಣಾಧಿಕಾರಿಗಳು ಹಾಗೂ ಪಿಡಿಓಗಳೊಂದಿಗೆ ಸಚಿವರು ಪ್ರಗತಿ ಪರಿಶೀಲನೆ ನಡೆಸಿ ಸೂಕ್ತ ಸೂಚನೆ ನೀಡಿದರು.

ಇಲಾಖೆಯ ಕಾರ್ಯದರ್ಶಿಗಳಾದ ಸಮೀರ್ ಶುಕ್ಲ, ಡಿ. ರಂದೀಪ್, ಆಯುಕ್ತರಾದ ಡಾ. ಅರುಂಧತಿ ಚಂದ್ರಶೇಖರ್ ಮತ್ತಿತರರು ಪಾಲ್ಗೊಂಡಿದ್ದರು.


## ವಾಲ್ಮೀಕಿ ನಿಗಮದ ರೂ 185 ಕೋಟಿ ಸಂಪೂರ್ಣ ವಾಪಸ್ ಬರಬೇಕು: ವಿಜಯೇಂದ್ರ

● ವಿಕ್ರಮ ವಾಹಿನಿ | ಶಿವಮೊಗ್ಗ

ವಾಲ್ಮೀಕಿ ಅಭಿವೃದ್ಧಿ ನಿಗಮದ 185 ಕೋಟಿ ಅಕ್ರಮ ಹಣ ವರ್ಗಾವಣೆ ಪ್ರಕರಣದಲ್ಲಿ ಸಂಪೂರ್ಣ ಹಣವನ್ನು ನಿಗಮದ ಖಾತೆಗೆ ವಾಪಸ್ ಜಮೆ ಮಾಡಬೇಕು ಹಾಗೂ ಅಕ್ರಮದ ಹಿಂದೆ ಇರುವ ಪ್ರಭಾವಿಗಳ ಸತ್ಯವನ್ನು ತನಿಖೆ ಮೂಲಕ ಬಹಿರಂಗಪಡಿಸಬೇಕು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆಗ್ರಹಿಸಿದರು.

ಈ ಪ್ರಕರಣದಲ್ಲಿ ಬಿಜೆಪಿ ಹೋರಾಟ ಕೇವಲ ಮಾಜಿ ಸಚಿವ ನಾಗೇಂದ್ರ ಅವರ ರಾಜೀನಾಮೆಗೆ ಸೀಮಿತವಾಗಿಲ್ಲ. ಶೋಷಿತ ಸಮುದಾಯಗಳ ಅಭಿವೃದ್ಧಿಗಾಗಿ ಮೀಸಲಿಟ್ಟ ಹಣವನ್ನು ಸಂಪೂರ್ಣವಾಗಿ ವಾಪಸ್ ತಂದು, ತಪ್ಪಿತಸ್ಥರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳುವವರೆಗೆ ಹೋರಾಟ ಮುಂದುವರಿಯಲಿದೆ ಎಂದರು.

ಜಾರಿ ನಿರ್ದೇಶನಾಲಯದ ತನಿಖೆಯಲ್ಲಿ ಹಣದ ದುರ್ಬಳಕೆಗೆ ಸಂಬಂಧಿಸಿದ ಹಲವು ಅಂಶಗಳು ಬೆಳಕಿಗೆ ಬಂದಿವೆ. 185 ಕೋಟಿ ಹಣ ಎಲ್ಲಿಗೆ ಹೋಗಿದೆ, ಯಾರ ಪಾಲಾಗಿದೆ ಮತ್ತು ಇದರ ಹಿಂದೆ ಯಾರಿದ್ದಾರೆ ಎಂಬುದಕ್ಕೆ ಸರ್ಕಾರ ಸ್ಪಷ್ಟ ಉತ್ತರ ನೀಡಬೇಕು. ಪ್ರಕರಣದಲ್ಲಿ 'ದೊಡ್ಡ ತಿಮಿಂಗಿಲ'ಗಳು ಭಾಗಿಯಾಗಿವೆ ಎಂಬ ಆರೋಪಗಳ ಸತ್ಯಾಸತ್ಯತೆ ತನಿಖೆಯಿಂದ ಹೊರಬರಬೇಕು ಎಂದು ಹೇಳಿದರು.



ನಾಗೇಂದ್ರ ಮರುಸೇರ್ಪಡೆಗೆ ಪ್ರಶ್ನೆ

ಮಾಜಿ ಸಚಿವ ನಾಗೇಂದ್ರ ಅವರಿಗೆ ಪ್ರಕರಣದಿಂದ ಸಂಪೂರ್ಣ ಕ್ಲೀನ್‌ಚಿಟ್ ಸಿಕ್ಕಿರುವುದು ಸ್ಪಷ್ಟವಾಗಿಲ್ಲ. ಹಾಗಿದ್ದರೂ ಅವರನ್ನು ಮತ್ತೆ ಸಚಿವ ಸಂಪುಟಕ್ಕೆ ಸೇರಿಸಿಕೊಳ್ಳುವ ಅಗತ್ಯವೇನಿತ್ತು? ಈ ನಿರ್ಧಾರದ ಹಿಂದೆ ಯಾರ ಒತ್ತಡವಿತ್ತು ಎಂಬುದನ್ನು ಸರ್ಕಾರ ಸ್ಪಷ್ಟಪಡಿಸಬೇಕು ಎಂದು ವಿಜಯೇಂದ್ರ ಒತ್ತಾಯಿಸಿದರು.

ಇದೇ ವೇಳೆ, ಶಿವಮೊಗ್ಗದ ಅಧಿಕಾರಿ ಚಂದ್ರಶೇಖರ್ ಅವರ ಕುಟುಂಬಕ್ಕೆ ಸೂಕ್ತ ಪರಿಹಾರ ಹಾಗೂ ಬಾಕಿ ಸೌಲಭ್ಯಗಳನ್ನು ತಕ್ಷಣ ಒದಗಿಸಬೇಕು. ಬರ ನಿರ್ವಹಣೆಯಲ್ಲೂ ರಾಜ್ಯ ಸರ್ಕಾರ ವಿಫಲವಾಗಿದ್ದು, ಅರ್ಹ ತಾಲೂಕುಗಳನ್ನು ಬರಪೀಡಿತವೆಂದು ಘೋಷಿಸಿ ರೈತರಿಗೆ ಅಗತ್ಯ ನೆರವು ನೀಡಬೇಕು ಎಂದು ಆಗ್ರಹಿಸಿದರು.

ವಾಲ್ಮೀಕಿ ನಿಗಮದ ಹಣ ಸಂಪೂರ್ಣ ವಾಪಸ್ ಬರುವವರೆಗೆ, ಅಕ್ರಮದ ಹಿಂದಿರುವವರ ಸತ್ಯ ಬಹಿರಂಗವಾಗುವವರೆಗೆ ಹಾಗೂ ಚಂದ್ರಶೇಖರ್ ಕುಟುಂಬಕ್ಕೆ ನ್ಯಾಯ ದೊರೆಯುವವರೆಗೆ ಬಿಜೆಪಿ ಹೋರಾಟ ಮುಂದುವರಿಯಲಿದೆ ಎಂದು ವಿಜಯೇಂದ್ರ ಹೇಳಿದರು.

## ಸೆಪ್ಟೆಂಬರ್‌ನಲ್ಲಿ ಬ್ಯಾಂಕ್‌ಗಳಿಗೆ 13 ದಿನ ರಜೆ

● ವಿಕ್ರಮ ವಾಹಿನಿ | ನವದೆಹಲಿ

ಹಬ್ಬ-ಹರಿದಿನಗಳು ಹಾಗೂ ವಾರದ ರಜೆಗಳ ಹಿನ್ನೆಲೆಯಲ್ಲಿ 2026ರ ಸೆಪ್ಟೆಂಬರ್‌ನಲ್ಲಿ ದೇಶದ ವಿವಿಧ ಭಾಗಗಳಲ್ಲಿ ಬ್ಯಾಂಕ್‌ಗಳಿಗೆ ಗರಿಷ್ಠ 13 ದಿನಗಳವರೆಗೆ ರಜೆ ಇರಲಿದೆ. ಭಾರತೀಯ ರಿಸರ್ವ್ ಬ್ಯಾಂಕ್ (ಆರ್‌ಬಿಐ) ರಜಾ ಪಟ್ಟಿಯ ಪ್ರಕಾರ, ರಾಜ್ಯ ಹಾಗೂ ಪ್ರದೇಶಗಳಿಗೆ ಅನುಗುಣವಾಗಿ ರಜಾದಿನಗಳಲ್ಲಿ ವ್ಯತ್ಯಾಸ ಇರಲಿದೆ.

ಸೆಪ್ಟೆಂಬರ್‌ನಲ್ಲಿ ಶ್ರೀಕೃಷ್ಣ ಜನ್ಮಾಷ್ಟಮಿ, ಗಣೇಶ ಚತುರ್ಥಿ, ನುವಾಖಾಯ್, ಇಂದ್ರಜಾತ್ರ ಸೇರಿದಂತೆ ಹಲವು ಹಬ್ಬಗಳಿವೆ. ಇದರೊಂದಿಗೆ ನಾಲ್ಕು ಭಾನುವಾರ, ಎರಡನೇ ಹಾಗೂ ನಾಲ್ಕನೇ ಶನಿವಾರವೂ ಬ್ಯಾಂಕ್‌ಗಳಿಗೆ ರಜೆ ಇರಲಿದೆ.

ಕರ್ನಾಟಕದಲ್ಲಿ ಸೆಪ್ಟೆಂಬರ್‌ನಲ್ಲಿ ಒಟ್ಟು ಏಳು ದಿನ ಬ್ಯಾಂಕ್‌ಗಳು ಬಂದ್ ಆಗಲಿವೆ. ಸೆಪ್ಟೆಂಬರ್ 6, 13, 20 ಹಾಗೂ 27ರಂದು ಭಾನುವಾರದ ರಜೆ ಇರಲಿದ್ದು, ಸೆಪ್ಟೆಂಬರ್ 12 ಮತ್ತು 26ರಂದು ಕ್ರಮವಾಗಿ ಎರಡನೇ ಹಾಗೂ ನಾಲ್ಕನೇ ಶನಿವಾರದ ರಜೆ ಇರಲಿದೆ. ಸೆಪ್ಟೆಂಬರ್ 14ರಂದು ಗಣೇಶ ಚತುರ್ಥಿ ಹಿನ್ನೆಲೆಯಲ್ಲಿ ಬ್ಯಾಂಕ್‌ಗಳಿಗೆ ರಜೆ ಇರಲಿದೆ.

ಇದೇ ವೇಳೆ ಬ್ಯಾಂಕ್ ನೌಕರರ ಮುಷ್ಕರದ ಹಿನ್ನೆಲೆಯಲ್ಲಿ ಸೆಪ್ಟೆಂಬರ್‌ನಲ್ಲಿ ಮತ್ತಷ್ಟು ದಿನ ಬ್ಯಾಂಕಿಂಗ್ ಸೇವೆಗಳಿಗೆ ವ್ಯತ್ಯಯ ಉಂಟಾಗುವ ಸಾಧ್ಯತೆ ಇದೆ. ಸೆಪ್ಟೆಂಬರ್ 11ರಂದು ಒಂದು ದಿನದ ಮುಷ್ಕರ ಹಾಗೂ ಸೆಪ್ಟೆಂಬರ್ 28ರಿಂದ 30ರವರೆಗೆ ಮೂರು ದಿನಗಳ ಮುಷ್ಕರಕ್ಕೆ ಕರೆ ನೀಡಲಾಗಿದೆ. ಮುಷ್ಕರ ನಡೆಯುವ ಸಂದರ್ಭದಲ್ಲಿ ಈ ನಾಲ್ಕು ದಿನ ಬ್ಯಾಂಕ್ ಶಾಖೆಗಳ ಕಾರ್ಯನಿರ್ವಹಣೆಯಲ್ಲಿ ವ್ಯತ್ಯಯ ಉಂಟಾಗಬಹುದು.

ಹೀಗಾಗಿ ಗ್ರಾಹಕರು ಹಣಕಾಸು ವ್ಯವಹಾರಗಳು, ಚೆಕ್ ಕ್ಲಿಯರೆನ್ಸ್ ಸೇರಿದಂತೆ ಬ್ಯಾಂಕ್‌ಗೆ ಸಂಬಂಧಿಸಿದ ಪ್ರಮುಖ ಕೆಲಸಗಳನ್ನು ಮುಂಚಿತವಾಗಿಯೇ ಯೋಜಿಸಿಕೊಳ್ಳುವುದು ಸೂಕ್ತ. ಆದರೆ ಎಟಿಎಂ, ಇಂಟರ್‌ನೆಟ್ ಬ್ಯಾಂಕಿಂಗ್ ಮತ್ತು ಮೊಬೈಲ್ ಬ್ಯಾಂಕಿಂಗ್‌ನಂತಹ ಡಿಜಿಟಲ್ ಸೇವೆಗಳು ಸಾಮಾನ್ಯವಾಗಿ ಲಭ್ಯವಿರುವ ಸಾಧ್ಯತೆ ಇದೆ.

## ನೇಪಾಳ-ಟಿಬೆಟ್ ಪ್ರವಾಹ: ಕನ್ನಡಿಗರ ರಕ್ಷಣೆಗೆ ರಾಜ್ಯದ ತುರ್ತು ಕ್ರಮ

● ವಿಕ್ರಮ ವಾಹಿನಿ | ಬೆಂಗಳೂರು

ನೇಪಾಳ ಹಾಗೂ ಚೀನಾದ ಟಿಬೆಟ್ ಸ್ವಾಯತ್ತ ಪ್ರದೇಶದ ಗಡಿ ಭಾಗಗಳಲ್ಲಿ ಸಂಭವಿಸಿರುವ ದಿಢೀರ್ ಪ್ರವಾಹ ಮತ್ತು ಭೂಕುಸಿತದಿಂದ ಸಂಕಷ್ಟಕ್ಕೆ ಸಿಲುಕಿರುವ ಕನ್ನಡಿಗರ ರಕ್ಷಣೆ ಹಾಗೂ ಸುರಕ್ಷಿತ ಸ್ಥಳಾಂತರಕ್ಕೆ ರಾಜ್ಯ ಸರ್ಕಾರ ತುರ್ತು ಕ್ರಮ ಕೈಗೊಂಡಿದೆ.

ಮುಖ್ಯಮಂತ್ರಿ, ಉಪಮುಖ್ಯಮಂತ್ರಿ ಹಾಗೂ ಕಂದಾಯ ಸಚಿವರು ಪರಿಸ್ಥಿತಿಯನ್ನು ನೇರವಾಗಿ ಮೇಲ್ವಿಚಾರಣೆ ನಡೆಸುತ್ತಿದ್ದು, ಬಾಧಿತ ಪ್ರದೇಶಗಳಲ್ಲಿರುವ ಕನ್ನಡಿಗರ ಮಾಹಿತಿ ಹಾಗೂ ಸುರಕ್ಷತೆ ಕುರಿತು ಕೇಂದ್ರ ವಿದೇಶಾಂಗ ವ್ಯವಹಾರಗಳ ಸಚಿವಾಲಯ (ಒಇಂ) ಮತ್ತು ನವದೆಹಲಿಯ ಕರ್ನಾಟಕ ಭವನದ ರೆಸಿಡೆಂಟ್ ಕಮಿಷನರ್ ಅವರೊಂದಿಗೆ ನಿರಂತರ ಸಮನ್ವಯ ಸಾಧಿಸಲಾಗುತ್ತಿದೆ.

ರಾಜ್ಯ ತುರ್ತು ಕಾರ್ಯಾಚರಣೆ ಕೇಂದ್ರ (ಖಇಔಅ) 24 ಗಂಟೆಯೂ ಕಾರ್ಯನಿರ್ವಹಿಸುತ್ತಿದ್ದು, ವಿದೇಶಾಂಗ ಸಚಿವಾಲಯದ ಕ್ಷಿಪ್ರ ಪ್ರತಿಕ್ರಿಯೆ ಘಟಕ ಹಾಗೂ ಕೇಂದ್ರ ಗೃಹ ಸಚಿವಾಲಯದ ನಿಯಂತ್ರಣ ಕೊಠಡಿಯೊಂದಿಗೆ ನಿರಂತರ ಸಂಪರ್ಕದಲ್ಲಿದೆ. ಕಠ್ಮಂಡು ಮತ್ತು ಬೀಜಿಂಗ್‌ನಲ್ಲಿರುವ ಭಾರತೀಯ ರಾಯಭಾರ ಕಚೇರಿಗಳೊಂದಿಗೆ ಕರ್ನಾಟಕ ಭವನದ ಅಧಿಕಾರಿಗಳು ಸಂಪರ್ಕದಲ್ಲಿದ್ದು, ಸಂಕಷ್ಟದಲ್ಲಿರುವ ಕನ್ನಡಿಗರನ್ನು ಸುರಕ್ಷಿತವಾಗಿ ರಕ್ಷಿಸಲು ಪ್ರತ್ಯೇಕ ತಂಡಗಳನ್ನು ರಚಿಸಲಾಗಿದೆ. ಪ್ರವಾಹ ಪೀಡಿತ ಪ್ರದೇಶಗಳಲ್ಲಿ ಸಿಲುಕಿರುವ ಕನ್ನಡಿಗರ ಪ್ರಸ್ತುತ ಸ್ಥಳ, ಅಗತ್ಯವಿರುವ ನೆರವು ಹಾಗೂ ಪ್ರವಾಸ ಆಯೋಜಕರ ವಿವರಗಳನ್ನು ಸಂಗ್ರಹಿಸಲು ಸರ್ಕಾರ ವಿಶೇಷ ಗೂಗಲ್ ಫಾರ್ಮ್ ವ್ಯವಸ್ಥೆ ಮಾಡಿದೆ. ಸಿಲುಕಿರುವವರು ಅಥವಾ ಅವರ ಕುಟುಂಬಸ್ಥರು ತಕ್ಷಣ ಅಗತ್ಯ ಮಾಹಿತಿಯನ್ನು ಸಲ್ಲಿಸುವಂತೆ ಮನವಿ ಮಾಡಲಾಗಿದೆ.

## ತುಮಕೂರು ರೈಲ್ವೆ ಕಾಮಗಾರಿ ಪರಿಶೀಲಿಸಿದ ಸೋಮಣ್ಣ

● ವಿಕ್ರಮ ವಾಹಿನಿ | ತುಮಕೂರು

ಕೇಂದ್ರ ರೈಲ್ವೆ ಹಾಗೂ ಜಲಶಕ್ತಿ ರಾಜ್ಯ ಸಚಿವ ವಿ. ಸೋಮಣ್ಣ ಅವರು ತುಮಕೂರು ಜಿಲ್ಲೆಯಲ್ಲಿ ಪ್ರಗತಿಯಲ್ಲಿರುವ ವಿವಿಧ ರೈಲ್ವೆ ಮೂಲಸೌಕರ್ಯ ಕಾಮಗಾರಿಗಳನ್ನು ಪರಿಶೀಲಿಸಿ, ಗುಣಮಟ್ಟ ಕಾಯ್ದುಕೊಂಡು ನಿಗದಿತ ಅವಧಿಯಲ್ಲಿ ಕಾಮಗಾರಿ ಗಳನ್ನು ಪೂರ್ಣಗೊಳಿಸುವಂತೆ ಅಧಿಕಾರಿ ಗಳಿಗೆ ಸೂಚಿಸಿದರು.



ತುಮಕೂರು ರೈಲ್ವೆ ನಿಲ್ದಾಣಕ್ಕೆ ಭೇಟಿ ನೀಡಿದ ಸಚಿವರು ಪುನರಾಭಿವೃದ್ಧಿ ಕಾಮಗಾರಿಯ ಪ್ರಗತಿಯನ್ನು ಪರಿಶೀಲಿಸಿದರು. ಸುಮಾರು ರೂ 85.8 ಕೋಟಿ ವೆಚ್ಚದಲ್ಲಿ ನಿಲ್ದಾಣವನ್ನು ಆಧುನೀಕರಿಸಲಾಗುತ್ತಿದ್ದು, ಜಿ+4 ಮಾದರಿಯ ನೂತನ ಕಟ್ಟಡ, ಬಹುಮಹಡಿ ವಾಹನ ನಿಲುಗಡೆ ವ್ಯವಸ್ಥೆ, ಪ್ಲಾಟ್‌ಫಾರ್ಮ್‌ಗಳ ಮೇಲ್ದ್ಭಾವಣಿ ಸೇರಿದಂತೆ ಹಲವು ಪ್ರಯಾಣಿಕ ಸ್ನೇಹಿ ಸೌಲಭ್ಯಗಳನ್ನು ಕಲ್ಪಿಸಲಾಗುತ್ತಿದೆ.

ಬಳಿಕ ಬಟವಾಡಿ, ಬಡ್ಡಿಹಳ್ಳಿ ಹಾಗೂ ಮೈದಾಳ ಗೇಟ್‌ಗಳ ಬದಲಿಗೆ ನಿರ್ಮಿಸಲಾಗುತ್ತಿರುವ ರಸ್ತೆ ಮೇಲ್ಸೇತುವೆಗಳ ಕಾಮಗಾರಿಗಳನ್ನು ಸಚಿವರು ಪರಿಶೀಲಿಸಿದರು. ಈ ಕಾಮಗಾರಿಗಳನ್ನು ಡಿಸೆಂಬರ್ 2026ರೊಳಗೆ ಪೂರ್ಣಗೊಳಿಸುವ ಗುರಿ ಹೊಂದಿದ್ದು, ಕಾಮಗಾರಿ ವೇಗ ಹೆಚ್ಚಿಸುವಂತೆ ಸೂಚಿಸಿದರು.

ತುಮಕೂರು-ಚಿತ್ರದುರ್ಗ-ದಾವಣಗೆರೆ ಹೊಸ ರೈಲು ಮಾರ್ಗ ಯೋಜನೆಯಡಿ ಪ್ರಸ್ತಾವಿತ ಜೋಗಿಹಳ್ಳಿ ಮತ್ತು ಚಿಕ್ಕನಹಳ್ಳಿ ರೈಲ್ವೆ ನಿಲ್ದಾಣಗಳ ಸ್ಥಳಗಳನ್ನೂ ಸಚಿವರು ಪರಿಶೀಲಿಸಿದರು. ತಿಮ್ಮರಾಜನಹಳ್ಳಿ-ತಾವರೆಕೆರೆ ನಡುವಿನ 41 ಕಿ.ಮೀ. ಉದ್ದದ ರೈಲು ಮಾರ್ಗದ ಕಾಮಗಾರಿ ಪ್ರಗತಿಯಲ್ಲಿದ್ದು, ಮಾರ್ಚ್ 2028ರೊಳಗೆ ಪೂರ್ಣಗೊಳಿಸುವ ಗುರಿ ಹೊಂದಲಾಗಿದೆ.

ಯೋಜನೆಯಡಿ ಜೋಗಿಹಳ್ಳಿ, ಚಿಕ್ಕನಹಳ್ಳಿ, ಶಿರಾ ಹಾಗೂ ತಾವರೆಕೆರೆಯಲ್ಲಿ ಹೊಸ ರೈಲ್ವೆ ನಿಲ್ದಾಣಗಳನ್ನು ನಿರ್ಮಿಸಲಾಗುವುದು. ಜೋಗಿಹಳ್ಳಿ ಮತ್ತು ಚಿಕ್ಕನಹಳ್ಳಿ ನಿಲ್ದಾಣಗಳಲ್ಲಿ ತಲಾ ಎರಡು ಪ್ಲಾಟ್‌ಫಾರ್ಮ್‌ಗಳು ಹಾಗೂ ಅಗತ್ಯ ಪ್ರಯಾಣಿಕರ ಸೌಲಭ್ಯಗಳನ್ನು ಒದಗಿಸಲಾಗುತ್ತದೆ.

ಸಾರ್ವಜನಿಕರ ಅನುಕೂಲಕ್ಕಾಗಿ ಕಾಮಗಾರಿಗಳನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸುವುದು ಮತ್ತು ಗುಣಮಟ್ಟದಲ್ಲಿ ಯಾವುದೇ ರಾಜಿ ಮಾಡಿಕೊಳ್ಳದಂತೆ ಸಚಿವ ಸೋಮಣ್ಣ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು. ಪರಿಶೀಲನೆ ವೇಳೆ ಶಾಸಕರಾದ ಜಿ.ಬಿ. ಜ್ಯೋತಿ ಗಣೇಶ್, ಬಿ. ಸುರೇಶ್ ಗೌಡ, ಟಿ.ಬಿ. ಜಯಚಂದ್ರ ಸೇರಿದಂತೆ ರೈಲ್ವೆ ಇಲಾಖೆಯ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

## ಪ್ರವಾಹದ ನಡುವೆ ಧಾರವಾಡಿಗನ ಸಂಪರ್ಕ ಕಡಿತ

● ವಿಕ್ರಮ ವಾಹಿನಿ | ಧಾರವಾಡ

ಭೀಕರ ಪ್ರವಾಹಕ್ಕೆ ತುತ್ತಾಗಿರುವ ನೇಪಾಳಕ್ಕೆ ಪ್ರವಾಸ ತೆರಳಿದ್ದ ಧಾರವಾಡ ಮೂಲದ ರಾಕೇಶ್ ನಾಯಕ್ (45) ಕಳೆದ ಎರಡು ದಿನಗಳಿಂದ ಕುಟುಂಬಸ್ಥರ ಸಂಪರ್ಕಕ್ಕೆ ಸಿಗದೆ ಆತಂಕ ಮೂಡಿಸಿದ್ದಾರೆ. ಧಾರವಾಡದ ಸಿಬಿ ನಗರದ ನಿವಾಸಿಯಾಗಿರುವ ರಾಕೇಶ್ ಕಳೆದ 10 ವರ್ಷಗಳಿಂದ ಆಸ್ಟ್ರೇಲಿಯಾದ ಮೆಲ್ಬೋರ್ನ್‌ನಲ್ಲಿ ಸಾಫ್ಟ್‌ವೇರ್ ಎಂಜಿನಿಯರ್ ಆಗಿ ನೆಲೆಸಿದ್ದಾರೆ. ಆಗಸ್ಟ್ 10ರಂದು ಮೆಲ್ಬೋರ್ನ್‌ನಿಂದ ನೇಪಾಳಕ್ಕೆ ಪ್ರವಾಸ ತೆರಳಿದ್ದ ಅವರು, ಈಶಾ ಫೌಂಡೇಶನ್ ಆಯೋಜಿಸಿದ್ದ ಮಾನಸ ಸರೋವರ ಯಾತ್ರೆಯಲ್ಲಿ 71 ಮಂದಿಯ ತಂಡದೊಂದಿಗೆ ತೆರಳಿದ್ದರು.

ರಾಕೇಶ್ ಅವರ ತಂದೆ ಶಿವಪ್ರಸಾದ ಮಾತನಾಡಿ, ಆಗಸ್ಟ್ 12ರಂದು ದೆಹಲಿಯಲ್ಲಿದ್ದಾಗ ಮಗ ತಮ್ಮೊಂದಿಗೆ ಮಾತನಾಡಿದ್ದ. ಬಳಿಕ ನೇಪಾಳಕ್ಕೆ ತೆರಳಿದ ನಂತರ ಮೊಬೈಲ್ ಸಿಮ್ ಬದಲಾಯಿಸಿದ್ದರೂ, ಮೆಲ್ಬೋರ್ನ್‌ನಲ್ಲಿರುವ ಪತ್ನಿ ಮತ್ತು ಮಕ್ಕಳೊಂದಿಗೆ ನಿರಂತರ ಸಂಪರ್ಕದಲ್ಲಿದ್ದ. ಆದರೆ ಕಳೆದ ಎರಡು ದಿನಗಳಿಂದ ಯಾವುದೇ ಸಂಪರ್ಕ ಸಾಧ್ಯವಾಗಿಲ್ಲ ಎಂದು ತಿಳಿಸಿದ್ದಾರೆ.

ರಾಕೇಶ್ ನೇಪಾಳದ ಇಮಿಗ್ರೇಷನ್ ಕಚೇರಿ ವ್ಯಾಪ್ತಿಯಲ್ಲಿ ಇದ್ದಾರೆ ಎಂಬ ಮಾಹಿತಿ ಲಭ್ಯವಾಗಿದ್ದು, ಭಾರತೀಯ ರಾಯಭಾರ ಕಚೇರಿ ಮೂಲಕ ಅವರೊಂದಿಗೆ ಸಂಪರ್ಕ ಸಾಧಿಸುವ ಪ್ರಯತ್ನ ನಡೆಯುತ್ತಿದೆ. "ರಾಕೇಶ್ ಸುರಕ್ಷಿತವಾಗಿದ್ದಾರೆ ಎಂಬ ಮಾಹಿತಿ ಸಿಕ್ಕಿದೆ. ಆದರೆ, ಅವರೊಂದಿಗೆ ಮಾತನಾಡಿ ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳುವವರೆಗೆ ನಮ್ಮ ಆತಂಕ ದೂರವಾಗುವುದಿಲ್ಲ" ಎಂದು ಶಿವಪ್ರಸಾದ ತಿಳಿಸಿದ್ದಾರೆ.

## 'ಆಹಾರ ಸರ್ವೇಂದ್ರಿಯಗಳಿಗೆ ಆನಂದ ನೀಡುವ ಅಮೃತ'

● ವಿಕ್ರಮ ವಾಹಿನಿ | ಗೋಕರ್ಣ

ಅನ್ನವು ಆನಂದದ ಪ್ರತೀಕವಾಗಿದ್ದು, ಆಹಾರದ ಮೂಲಭೂತ ಗುಣವೇ ಆನಂದವಾಗಿದೆ. ಯಾವುದೇ ಆಹಾರವನ್ನು ನೆನಪಿಸಿಕೊಂಡರೂ, ನೋಡಿದರೂ, ಸವಿದರೂ ಅದು ಆನಂದವನ್ನೇ ಉಂಟುಮಾಡುತ್ತದೆ.

ದೇವರೇ ಆಹಾರದ ರೂಪದಲ್ಲಿ ಬಂದು ಜೀವಿಗಳಿಗೆ ಆನಂದವನ್ನು ಹಂಚುತಿದ್ದು, ಅನ್ನ ಪರಬ್ರಹ್ಮನ ಸ್ವರೂಪವೇ ಆಗಿದೆ ಎಂದು ಶ್ರೀರಾಮಚಂದ್ರಾಪುರ ಮಠದ ಜಗದ್ಗುರು ಶಂಕರಾಚಾರ್ಯ ಶ್ರೀಶ್ರೀ ರಾಘವೇಶ್ವರ ಭಾರತೀ ಮಹಾಸ್ವಾಮಿಗಳು ಹೇಳಿದರು.

ಗೋಕರ್ಣದ ಅಶೋಕೆಯ ಮೂಲಮಠದ ಪರಿಸರದಲ್ಲಿ ನಡೆಯುತ್ತಿರುವ 'ಅನ್ನಬ್ರಹ್ಮ ಚಾತುರ್ಮಾಸ್ಯ'ದ ಧರ್ಮಸಭೆಯಲ್ಲಿ 28.08.2026 ರಂದು 'ಅನ್ನಂ ಬ್ರಹ್ಮ' ಮಾಲಿಕೆಯಲ್ಲಿ ಪ್ರವಚನ ಅನುಗ್ರಹಿಸಿದ ಶ್ರೀಗಳು, ತಿನ್ನುವ ಎಲ್ಲಾ ಪದಾರ್ಥಗಳೂ ರೂಪ, ಗುಣ, ರುಚಿಯಲ್ಲಿ ವ್ಯತ್ಯಾಸವಿದ್ದರೂ, ಸಿಹಿ, ಹುಳಿ, ಖಾರ ಸಹಿತ ಷಡ್ರಸಗಳಿಂದ ಕೂಡಿದ ಎಲ್ಲಾ ಆಹಾರಗಳೂ ಆನಂದವನ್ನು ಕೊಡುತ್ತವೆ ಎಂಬುದು ಆಹಾರದ ಸಮಾನ ಸ್ವಭಾವವಾಗಿದೆ.

ಆಹಾರದಿಂದ ಸರ್ವೇಂದ್ರಿಯಗಳ ಸಂತೋಷ ಸಾಧ್ಯವಿದ್ದು, ಅನ್ನದಂತೆ ಸರ್ವೇಂದ್ರಿಯಗಳಿಗೆ ಆನಂದವನ್ನು ನೀಡುವ ವಸ್ತು ವಿಶ್ವದಲ್ಲಿ ಇನ್ನೊಂದಿಲ್ಲ. ಇದು ದೇವರ ಲಕ್ಷಣವಾಗಿದ್ದು, ಈ ಕಾರಣದಿಂದಲೇ ಅನ್ನವನ್ನು ದೇವರೆಂದು ಗೌರವಿಸುವ ಪರಂಪರೆಯಿದೆ ಎಂದು ಅಭಿಪ್ರಾಯಪಟ್ಟರು. ಜೀವಿಯ ಆಯುಷ್ಯ, ಶಕ್ತಿ, ವರ್ಣ, ಸ್ಮೃತಿ, ಸತ್ವ, ಓಜಸ್ಸು, ಹಾಗೂ ಶೋಭೆಗೆ ಆಹಾರ ಕಾರಣವಾಗಿದ್ದು, ಹಸಿವು ಹೆಚ್ಚಿದಂತೆ ಬುದ್ಧಿಯ ಕಾರ್ಯಕ್ಷಮತೆ ಕಡಿಮೆಯಾಗುತ್ತದೆ; ಸರಿಯಾದ ಆಹಾರದಿಂದ ಬುದ್ಧಿ ಮತ್ತೆ ಚುರುಕಾಗುತ್ತದೆ ಇದು ಆಹಾರದ ಶಕ್ತಿಯಾಗಿದೆ ಎಂದರು.



**ಏನಿದು ಓಜಸ್ಸು?: ತಾಯಿಯ ಗರ್ಭದಲ್ಲಿ ಜೀವಿಯ ಬೆಳವಣಿಗೆ ಆರಂಭವಾಗುವಾಗ ಮೊಟ್ಟ ಮೊದಲು ಓಜಸ್ಸಿನಿಂದ ಆ ಬೆಳವಣಿಗೆ ಆರಂಭವಾಗುತ್ತದೆ ಎಂದು ಚರಕ ಮಹರ್ಷಿಗಳು ದಾಖಲಿಸಿದ್ದು, ಓಜಸ್ಸು ಜೀವಿಯ ದೇಹದಲ್ಲಿರುವ ಅಮೃತದ್ರವವಾಗಿದೆ. ನಮ್ಮ ಹೃದಯ ಭಾಗದಲ್ಲಿರುವ ಈ ಓಜಸ್ಸು ಸುಮಾರು ಅರ್ಧ ಬೊಗಸೆ ಪ್ರಮಾಣದಲ್ಲಿ ಇರುತ್ತದೆ. ಜೀವ ಶಕ್ತಿಗೆ ಓಜಸ್ಸೇ ಮೂಲವಾಗಿದ್ದು, ಓಜಸ್ಸಿನ ನಾಶದಿಂದ ದೇಹ ನಾಶವಾಗುತ್ತದೆ. – ಶ್ರೀ ರಾಘವೇಶ್ವರ ಭಾರತೀ ಮಹಾಸ್ವಾಮಿಗಳು.**

ನಮ್ಮ ದೇಹದಲ್ಲಿರುವ ಓಜಸ್ಸು ಎಂಬುದು ಆಧುನಿಕ ವಿಜ್ಞಾನ ಇನ್ನೂ ತಲುಪದ ಕ್ಷೇತ್ರವಾಗಿದೆ. ಆದರೆ ಸಾವಿರಾರು ವರ್ಷಗಳ ಹಿಂದ್ದೆಯೇ ಆಯುರ್ವೇದದ ಎಲ್ಲಾ ಆಚಾರ್ಯರೂ ಓಜಸ್ಸಿನ ಕುರಿತಾಗಿ ಸವಿಸ್ತಾರವಾಗಿ ವಿವರಿಸಿದ್ದು, ಓಜಸ್ಸು ಎಂಬುದು ದೇಹದಲ್ಲೇ ಇರುವ ಅಮೃತದ್ರವವಾಗಿದ್ದು, ದೇಹದಲ್ಲಿರುವ ರಸ ರಕ್ತಾದಿ ಸಪ್ತಧಾತುಗಳ ಸಾರದಿಂದ ಓಜಸ್ಸು ರೂಪಿತವಾಗುತ್ತದೆ.

ಆಹಾರವು ಅಗ್ನಿಯನ್ನು ಕಾಪಾಡುತ್ತದೆ ಹಾಗೂ ಓಜಸ್ಸನ್ನು ವೃದ್ಧಿಗೊಳಿಸುತ್ತದೆ. ಅಗ್ನಿ ಹಾಗೂ ಓಜಸ್ಸು ಎರಡು ಜೀವಕ್ಕೆ ಅತ್ಯಗತ್ಯವಾಗಿದ್ದು, ಸರಿಯಾದ ಆಹಾರ ಮತ್ತು ಜೀವನ ಶೈಲಿಯಿಂದ ಓಜಸ್ಸನ್ನು ರಕ್ಷಿಸಿಕೊಳ್ಳಬಹುದು ಎಂದರು.

ಡಾ. ರಾಜಾರಾಮ ಮಡಿಕೇರಿ ಕುಟುಂಬದವರು ಗುರುಭಿಕ್ಷಾ ಸೇವೆ ಸಮರ್ಪಿಸಿದರು. ಅರವಿಂದ ಬಂಗಲಗಲ್ಲು, ಗುರು ಲಕ್ಮನೆ, ಚಂದನ್ ಶಾಸ್ತ್ರಿ ಮಗೇಗಾರು, ಸೌಮ್ಯಾ ಮಧ್ಯಸ್ಥ, ಅಜಿತ ಗುಡ್ಗೆ, ಶ್ರೀಕೃಷ್ಣ ಶಾಸ್ತ್ರಿ, ದಿನೇಶ ಹೆಗಡೆ ಹೊಸಾಕುಳಿ, ಕಿರಣ ಸುಂಗೊಳ್ಳಿಮನೆ, ದಿನಪ್ರಧಾನರಾಗಿ ಗುಣಾಜೆ ರಾಮಕೃಷ್ಣ ಭಟ್ ದಂಪತಿಗಳು ಉಪಸ್ಥಿತರಿದ್ದರು.

ಮರಾಠ ಸಮಾಜದಿಂದ ಸ್ವರ್ಣಪಾದುಕಾ ಪೂಜೆ: ಶ್ರೀರಾಮಚಂದ್ರಾಪುರಮಠಕ್ಕೆ ಶಿಷ್ಯಭಾವದಲ್ಲಿ ಪಾರಂಪರಿಕವಾಗಿ ನಡೆದುಕೊಳ್ಳುತ್ತಿರುವ ಮರಾಠ ಸಮಾಜದಿಂದ ಸ್ವರ್ಣಪಾದುಕಾ ಪೂಜೆ ನಡೆಯಿತು. ಪಾದುಕಾಪೂಜೆಯನ್ನು ಸ್ವೀಕರಿಸಿ ಮಾತನಾಡಿದ ಶ್ರೀಗಳು, ಗುರುಪೀಠ ಹಾಗೂ ಶಿಷ್ಯರು ಆಗಾಗ ಸೇರುವುದರಿಂದ ಗುರು-ಶಿಷ್ಯ ಭಾವ ವೃದ್ಧಿಯಾಗುತ್ತದೆ.

ಗುರುಪರಂಪರೆಯ ಪಾದುಕಾಪೂಜೆಯ ಫಲವಾಗಿ ಮರಾಠ ಸಮಾಜದ ಕಷ್ಟ ನಷ್ಟಗಳು ದೂರವಾಗುವಂತೆ ಪರಂಪರೆಯ ಅನುಗ್ರಹ ಸದಾ ಸಮಾಜದ ಮೇಲಿರಲಿ ಎಂದು ಆಶೀರ್ವದಿಸಿದರು.

ಮರಾಠ ಸಮಾಜದ ಜಿಲ್ಲಾ ಅಧ್ಯಕ್ಷ ಮಂಜುನಾಥ ತಿಮ್ಮ ಮರಾಠಿ, ಕುಮಟಾ ತಾಲ್ಲೂಕು ಅಧ್ಯಕ್ಷ ಪುರುಷೋತ್ತಮ ಶೇಡಿಗದ್ದೆ, ಉಮ್ಮಾ ವೆಂಕಟೇಶ ಮರಾಠಿ, ವೆಂಕಟರಮಣ ಶೆಡಿಗದ್ದೆ, ನಾರಾಯಣ ಮರಾಠಿ, ಶಿವರಾಮ ಯಲವಳ್ಳಿ ಸೇರಿದಂತೆ ನೂರಾರು ಮರಾಠ ಸಮಾಜದವರು ಉಪಸ್ಥಿತರಿದ್ದರು.

## ಪಾದಚಾರಿ ಮಾರ್ಗ ತೆರವು ಅಭಿಯಾನಕ್ಕೆ ಹೈಕೋರ್ಟ್ ತಡೆ ಇಲ್ಲ

● ವಿಕ್ರಮ ವಾಹಿನಿ | ಬೆಂಗಳೂರು

ನಗರದ ಪಾದಚಾರಿ ಮಾರ್ಗಗಳ ಒತ್ತುವರಿ ತೆರವುಗೊಳಿಸಿ, ಪಾದಚಾರಿಗಳಿಗೆ ಸುರಕ್ಷಿತ ಸಂಚಾರಕ್ಕೆ ಅವಕಾಶ ಕಲ್ಪಿಸುವ ಉದ್ದೇಶದಿಂದ ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಜಿಬಿಎ) ಕೈಗೊಂಡಿರುವ 'ಸುರಕ್ಷಿತ ಪಾದಚಾರಿ ಮಾರ್ಗ' ಅಭಿಯಾನಕ್ಕೆ ಹೈಕೋರ್ಟ್ ತಡೆಯಾಜ್ಞೆ ನೀಡಲು ನಿರಾಕರಿಸಿದೆ.

ನಗರ ತಜ್ಞ ಆರ್. ರಾಜಗೋಪಾಲನ್ ಸಲ್ಲಿಸಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿಯ ವಿಚಾರಣೆ ನಡೆಸಿದ ಮುಖ್ಯ ನ್ಯಾಯಮೂರ್ತಿ ವಿಭು ಭಖ್ರು ಹಾಗೂ ನ್ಯಾಯಮೂರ್ತಿ ಕೆ.ಎಸ್. ಹೇಮಲೇಖಾ ಅವರಿದ್ದ ವಿಭಾಗೀಯ ಪೀಠ, ಪಾದಚಾರಿಗಳಿಗೆ ಅಡೆತಡೆಯಿಲ್ಲದೆ ಸಂಚರಿಸಲು ಅಗತ್ಯ ಸ್ಥಳಾವಕಾಶ ಕಲ್ಪಿಸುವುದು ಮುಖ್ಯವಾಗಿದ್ದು, ಅಭಿಯಾನಕ್ಕೆ ತಡೆ ನೀಡಲು ಸೂಕ್ತ ಕಾರಣಗಳಿಲ್ಲ ಎಂದು ತಿಳಿಸಿತು.

ಅರ್ಜಿದಾರರು, ತೆರವು ಕಾರ್ಯಾಚರಣೆಗೆ ಸ್ಪಷ್ಟ ಮಾರ್ಗಸೂಚಿಗಳಿಲ್ಲದೆ ಅಸ್ತವ್ಯಸ್ತವಾಗಿ ಜಾರಿಗೊಳಿಸಲಾಗುತ್ತಿದೆ ಎಂದು ಆಕ್ಷೇಪಿಸಿದ್ದರು. ಆದರೆ, ಪಾದಚಾರಿ ಮಾರ್ಗಗಳ ಮೇಲಿನ ಒತ್ತುವರಿ ತೆರವುಗೊಳಿಸುವ ಕ್ರಮಕ್ಕೆ ಮಾತ್ರ ನ್ಯಾಯಾಲಯದ ಆದೇಶ ಸೀಮಿತವಾಗಿರಲಿದೆ ಎಂದು ಪೀಠ ಸ್ಪಷ್ಟಪಡಿಸಿ ವಿಚಾರಣೆ ಮುಂದೂಡಿತು. ಜುಲೈ 1ರಿಂದ ಕಾರ್ಯಾಚರಣೆ: ಬೆಂಗಳೂರಿನ ಐದು ನಗರ ಪಾಲಿಕೆಗಳ ವ್ಯಾಪ್ತಿಯಲ್ಲಿ ಜುಲೈ 1ರಿಂದ ಅಭಿಯಾನ ಆರಂಭವಾಗಿದ್ದು, ಪಾದಚಾರಿ ಮಾರ್ಗಗಳ ಮೇಲಿನ ಅಂಗಡಿಗಳು, ಒತ್ತುವರಿ ಹಾಗೂ ಇತರ ಅಡೆತಡೆಗಳನ್ನು ತೆರವುಗೊಳಿಸಲಾಗುತ್ತಿದೆ. ಇದಕ್ಕೆ ಬೀದಿ ಬದಿ ವ್ಯಾಪಾರಿಗಳು ವಿರೋಧ ವ್ಯಕ್ತಪಡಿಸಿದ್ದಾರೆ.

ಬೀದಿ ಬದಿ ವ್ಯಾಪಾರಿಗಳ ಕಾಯ್ದೆ ಹಾಗೂ ನಿಯಮಗಳನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸುವುದು, ಟೌನ್ ವೆಂಡಿಂಗ್ ಸಮಿತಿಗಳನ್ನು ರಚಿಸುವುದು ಮತ್ತು ವ್ಯಾಪಾರಿಗಳಿಗೆ ಸೂಕ್ತ ಪರ್ಯಾಯ ಸ್ಥಳಗಳನ್ನು ಕಲ್ಪಿಸುವಂತೆ ಅರ್ಜಿದಾರರು ಮನವಿ ಮಾಡಿದ್ದಾರೆ.

## ಹೆಚ್.ಡಿ.ಕೆ ಬದ್ಧತೆ ಮೆರೆಯಲಿ: ರಮೇಶ್ ಬಾಬು

● ವಿಕ್ರಮ ವಾಹಿನಿ | ಬೆಂಗಳೂರು

ಒಬ್ಬ ಕೇಂದ್ರದ ಬೃಹತ್ ಕೈಗಾರಿಕಾ ಸಚಿವರಾಗಿ ರಾಜ್ಯದ ಹಿತಾಸಕ್ತಿಯ ಬಗ್ಗೆ ಧ್ವನಿ ಎತ್ತದೆ ಪದೇಪದೇ ರಾಜ್ಯದ ಮುಖ್ಯಮಂತ್ರಿಗಳು, ಗೃಹ ಸಚಿವರು ಮತ್ತು ಕಾಂಗ್ರೆಸ್ ಪಕ್ಷದ ಮೇಲೆ ದ್ವೇಷ ರಾಜಕಾರಣದ ಆರೋಪಗಳನ್ನು ಕೈ ಬಿಟ್ಟು ಎಚ್ ಡಿ ಕುಮಾರಸ್ವಾಮಿ ಅವರು ರಾಜ್ಯದ ಸಮಗ್ರ ಅಭಿವೃದ್ಧಿಯ ಬಗ್ಗೆ ತಮ್ಮ ಬದ್ಧತೆಯನ್ನು ತೋರಿಸಲಿ ಎಂದು ಕೆಪಿಸಿಸಿ ಮಾಧ್ಯಮ ಸಂವಹನ ವಿಭಾಗದ ಅಧ್ಯಕ್ಷರು, ವಿಧಾನ ಪರಿಷತ್ ಮಾಜಿ ಸದಸ್ಯರಾದ ರಮೇಶ್ ಬಾಬು ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಸಂರ್ಭಕ್ಕೆ ತಕ್ಕಂತೆ ತಮ್ಮ ಹೇಳಿಕೆಗಳನ್ನು, ನಿಲುವುಗಳನ್ನು ಬದಲಿಸಿಕೊಳ್ಳುವ ಎಚ್ ಡಿ ಕುಮಾರಸ್ವಾಮಿ ರವರು, ಗೃಹ ಸಚಿವರಾದ ಪ್ರಿಯಾಂಕ ರ್ಗೆ ರವರ ಮೇಲೆ ಮಾಡಿರುವ ರಾಜಕೀಯ ಆರೋಪಗಳನ್ನು ಅವಕಾಶವಾದದ ಮುಂದುವರೆದ ಭಾಗ ಎಂದು ತಿಳಿಯಬೇಕಾಗುತ್ತದೆ. ರಾಜ್ಯದ ಹಲವಾರು ಯೋಜನೆಗಳು ಕೇಂದ್ರದ ಅನುಮತಿಗಾಗಿ ಬಾಕಿ ಇದ್ದು,



ರಾಜ್ಯದ ಪ್ರಗತಿಯತ್ತ ಗಮನ ಹರಿಸಲಿ ಎಂದು ತಿಳಿಸಿದ್ದಾರೆ.

ಕುಮಾರಸ್ವಾಮಿ ರವರು ಬೆಳ್ಳಂಬೆಳ್ಳಿಗೆ ಪತ್ರಿಕಾ ಗೋಷ್ಠಿ ಮಾಡುವುದರ ಮೂಲಕ ಕೇಂದ್ರ ಸಚಿವರಾಗಿ ವೈಯಕ್ತಿಕ ದ್ವೇಷದ ರಾಜಕಾರಣಕ್ಕೆ ಹಪಹಪಿಸುತ್ತಿದ್ದಾರೆ. ಪದೇಪದೇ ಇಂತಹ ಆರೋಪಗಳನ್ನು ಮಾಡುವುದರ ಮೂಲಕ ತಮ್ಮ ನಿಜ ಬಣ್ಣವನ್ನು ಬಯಲು ಮಾಡಿಕೊಳ್ಳುತ್ತಿದ್ದಾರೆ. ಪ್ರಿಯಾಂಕ ರ್ಗೆ ರವರ ಮೇಲೆ ಆರೋಪ ಮಾಡುವ ಕಾರಣಕ್ಕಾಗಿ ಕೆಪಿಎಸ್‌ಸಿ ಹಗರಣವನ್ನು ಎಳೆದು ತಂದಿದ್ದಾರೆ.

ಕುಮಾರಸ್ವಾಮಿರವರು ಫೆಬ್ರವರಿ 2021 ರಲ್ಲಿ ರಾಮ ಮಂದಿರದ ದೇಣಿಗೆ ಸಂಬಂಧ ರ್ಮನಿ ನಾಜಿ ಮನಸ್ಥಿತಿಗೆ ಹೋಲಿಕೆ ಮಾಡಿ ಆರ್ ಎಸ್ ಎಸ್ ಮೇಲೆ ಆರೋಪ ಮಾಡಿದ್ದರು. ಅಕ್ಟೋಬರ್-2021 ರಲ್ಲಿ ಕೇಂದ್ರದಲ್ಲಿ ಬಿಜೆಪಿ ರ್ಕಾರದ ಬದಲು ಆರ್ ಎಸ್ ಎಸ್ ದೇಶವನ್ನು ಆಳುತ್ತಿದೆ ಎಂದು ಇದೇ ಕುಮಾರಸ್ವಾಮಿ ಆರೋಪ ಮಾಡಿದ್ದರು. ಸಂಘ ಪರಿವಾರವನ್ನು ವಿಷಕಾರಿ ಎಂದು ರ್ಗೀಕರಿಸಿ ಲೇಖನವನ್ನು ಸಹ ನೀಡಿದ್ದರು. 2023ರಲ್ಲಿ ರ್ನಾಟಕದಲ್ಲಿ ಬ್ರಾಹ್ಮಣರಾದ ಪ್ರಹ್ಲಾದ್ ಜೋಶಿ ರವರನ್ನು ಮುಖ್ಯಮಂತ್ರಿ ಮಾಡಲು ಆರ್ ಎಸ್ ಎಸ್ ಸಂಚು ನಡೆಸಿದೆ ಎಂದು ಆರೋಪಿಸಿದ್ದರು. ಈಗ ಏಕಾಏಕಿ ಯಾವ ಕಾರಣಕ್ಕೆ ಸಂಘ ಪರಿವಾರದ ಮೇಲೆ ಅತಿಯಾದ ಪ್ರೀತಿ, ವ್ಯಾಮೋಹ ಉಂಟಾಗಿದೆ ಎಂಬುದನ್ನು ಕುಮಾರಸ್ವಾಮಿ ರವರೆ ರಾಜ್ಯದ ಜನತೆಗೆ ತಿಳಿಸಬೇಕು ಎಂದು ರಮೇಶ್ ಬಾಬು ಒತ್ತಾಯಿಸಿದ್ದಾರೆ.

ಭಾರತ ಸಂವಿಧಾನದ ಅಡಿಯಲ್ಲಿ ರ್ನಾಟಕ ಲೋಕಸೇವಾ ಆಯೋಗವು 1951 ರಿಂದ ರ್ನಾಟಕದಲ್ಲಿ ಕರ್ಯ ನರ್ವಹಿಸುತ್ತಿದೆ. ಎಚ್ ಬಿ ಗುಂಡಪ್ಪ ಗೌಡರು ಇದರ ಮೊದಲ ಅಧ್ಯಕ್ಷರಾಗಿದ್ದು, ಅಲ್ಲಿಂದ ಇಲ್ಲಿಯವರೆಗೆ ಅನೇಕರು ಅಧ್ಯಕ್ಷರಾಗಿ ಮತ್ತು ಸದಸ್ಯರಾಗಿ ಕರ್ಯ ನರ್ವಹಿಸಿರುತ್ತಾರೆ. ಆಯೋಗದ ನೇಮಕಾತಿ ಮತ್ತು ಪರೀಕ್ಷಾ ಸಂಬಂಧ ಅನೇಕ ಸಂರ್ಭಗಳಲ್ಲಿ ಅನೇಕ ಆರೋಪಗಳು ಬಂದಿದ್ದು, ತನಿಖೆಗಳೂ ನಡೆದಿರುತ್ತವೆ.

ಹಿಂದೆ ಲೋಕ ಸೇವಾ ಆಯೋಗದಲ್ಲಿ ಅಧ್ಯಕ್ಷರಾಗಿದ್ದ ಗೋಮಾಳ್ ಭೀಮಪ್ಪನವರ ಮತ್ತು ಎಚ್ ಎನ್ ಕೃಷ್ಣರವರ ಹಗರಣಗಳನ್ನು ರ್ನಾಟಕದ ಜನಸಾಮಾನ್ಯರು ಮರೆತಿಲ್ಲವೆಂಬುದನ್ನು ಕುಮಾರಸ್ವಾಮಿ ಅವರು ತಿಳಿಯಬೇಕು. ಇವರ ಅವಧಿಯ ನೇಮಕಾತಿ ಮತ್ತು ಅಕ್ರಮಗಳ ಆರೋಪಗಳ ಹಿಂದೆ ಯಾವ ಕೃಪಾಪೋಷಿತ ನಾಟಕ ಮಂಡಳಿ ಕೆಲಸ ಮಾಡಿತು? ಎಂಬುದಕ್ಕೆ ಮಾನ್ಯ ಕೇಂದ್ರ ಸಚಿವರೇ ಉತ್ತರ ನೀಡಬೇಕು. ರ್ನಾಟಕ ಲೋಕಸೇವಾ ಆಯೋಗದಲ್ಲಿ ಭ್ರಷ್ಟಾಚಾರದ ಜೊತೆಗೆ ಕಂಕಣ ಭಾಗ್ಯದ ಆಧಾರದ ಮೇಲೆ ನೇಮಕಾತಿಗಳು ನಡೆದಿರುವುದನ್ನು ಜನ ಮರೆತಿಲ್ಲ ಎಂದು ರಮೇಶ್ ಬಾಬು ತಿಳಿಸಿದ್ದಾರೆ.

## ಹಾಡಹಗಲೇ ಯುವಕನ ಹತ್ಯೆ; ವಿಡಿಯೋ ವೈರಲ್

● ವಿಕ್ರಮ ವಾಹಿನಿ | ಹುಬ್ಬಳ್ಳಿ

ನಗರದಲ್ಲಿ ಹಾಡಹಗಲೇ ನಡುರಸ್ತೆಯಲ್ಲೇ ಯುವಕನೊಬ್ಬನನ್ನು ಮೂವರು ದುಷ್ಕರ್ಮಿಗಳು ಮಾರಕಾಸ್ತ್ರಗಳಿಂದ ಕೊಚ್ಚಿ ಬರ್ಬರವಾಗಿ ಹತ್ಯೆ ಮಾಡಿರುವ ಘಟನೆ ಶುಕ್ರವಾರ ನಡೆದಿದೆ. ಘಟನೆಯ ಭಯಾನಕ ದೃಶ್ಯಗಳು ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದ್ದು, ಸಾರ್ವಜನಿಕರಲ್ಲಿ ಆತಂಕ ಮೂಡಿಸಿದೆ.

ವಿದ್ಯಾನಗರದ ಬನಶಂಕರಿ ಬಡಾವಣೆಯ ಸಿದ್ದೇಶ್ವರ ಪಾರ್ಕ್ ಬಳಿ ದಾದಾಪೀರ್ ಎಂಬಾತ ಸ್ಕೂಟಿಯಲ್ಲಿ ತೆರಳುತ್ತಿದ್ದ ವೇಳೆ ಮೂವರು ದುಷ್ಕರ್ಮಿಗಳು ಏಕಾಏಕಿ ದಾಳಿ ನಡೆಸಿದ್ದಾರೆ. ಜನರು ಓಡಾಡುತ್ತಿದ್ದರೂ ಲೆಕ್ಕಿಸದೆ ಮಾರಕಾಸ್ತ್ರಗಳಿಂದ ಹಲ್ಲೆ ನಡೆಸಿ ಸ್ಥಳದಿಂದ ಪರಾರಿಯಾಗಿದ್ದಾರೆ ಎನ್ನಲಾಗಿದೆ. ಗಂಭೀರವಾಗಿ ಗಾಯಗೊಂಡಿದ್ದ ದಾದಾಪೀರ್ ಸ್ಥಳದಲ್ಲೇ ಮೃತಪಟ್ಟಿದ್ದಾರೆ ಎಂದು ತಿಳಿದುಬಂದಿದೆ.

ಘಟನೆ ಕುರಿತು ಮಾಹಿತಿ ತಿಳಿಯುತ್ತಿದ್ದಂತೆ ಪೊಲೀಸ್ ಆಯುಕ್ತ ಎನ್. ಶಶಿಕುಮಾರ್ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಘಟನೆಯ ದೃಶ್ಯಾವಳಿಗಳು ಹಾಗೂ ಸಿಸಿಟಿವಿ ದಾಖಲೆಗಳನ್ನು ಪರಿಶೀಲಿಸಲಾಗುತ್ತಿದ್ದು, ಆರೋಪಿಗಳ ಪತ್ತೆಗೆ ಪೊಲೀಸರು ಕ್ರಮ ಕೈಗೊಂಡಿದ್ದಾರೆ. ಪ್ರಾಥಮಿಕ ತನಿಖೆಯಲ್ಲಿ ಹಳೆಯ ದ್ವೇಷದ ಹಿನ್ನೆಲೆಯಲ್ಲಿ ಹತ್ಯೆ ನಡೆದಿರುವ ಸಾಧ್ಯತೆ ಇದೆ ಎಂದು ಪೊಲೀಸರು ಶಂಕೆ ವ್ಯಕ್ತಪಡಿಸಿದ್ದಾರೆ. ಆದರೆ, ಕೊಲೆಗೆ ನಿಖರ ಕಾರಣ ಇನ್ನೂ ತಿಳಿದುಬಂದಿಲ್ಲ. ಹತ್ಯೆಯ ಹಿಂದಿನ ಕಾರಣ ಹಾಗೂ ಆರೋಪಿಗಳ ಕುರಿತು ಪೊಲೀಸರು ಮಾಹಿತಿ ಕಲೆಹಾಕುತ್ತಿದ್ದಾರೆ.


## ಬೆಂಗಳೂರು-ಮೈಸೂರು ಭಾಗದಲ್ಲಿ ಕಾನೂನು ವಿ.ವಿ. ಪ್ರಾದೇಶಿಕ ಕಚೇರಿ ಸ್ಥಾಪನೆ ಆಗಲಿ

● ವಿಕ್ರಮ ವಾಹಿನಿ | ಬೆಂಗಳೂರು

ಕಾನೂನು ಕ್ಷೇತ್ರಕ್ಕೆ ಸಂಬಂಧಿಸಿದಂತೆ ವಿದ್ಯಾರ್ಥಿಗಳು ಮತ್ತು ಕಾನೂನು ತಜ್ಞರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದ ಪ್ರಾದೇಶಿಕ ಕಚೇರಿಯನ್ನು ಬೆಂಗಳೂರು, ಮೈಸೂರು ಭಾಗದಲ್ಲಿ ಸ್ಥಾಪಿಸುವಂತೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ಮನವಿ ಮಾಡಲಾಗಿದೆ.

ವಿಧಾನ ಪರಿಷತ್ ಶಾಸಕರು ಹಾಗೂ ಕಾನೂನು ವಿಶ್ವವಿದ್ಯಾಲಯದ ಸಲಹಾ ಮಂಡಳಿ ಸದಸ್ಯರಾದ ದಿನೇಶ್ ಗೂಳಿಗೌಡ ಸೇರಿದಂತೆ ಇತರೆ ಜನಪ್ರತಿನಿಧಿಗಳ ನಿಯೋಗವು ಈ ಕುರಿತು ಸಿಎಂ ಅವರಿಗೆ ಪತ್ರ ಬರೆದಿದ್ದು, ಹುಬ್ಬಳ್ಳಿಯಲ್ಲಿ ಕೇಂದ್ರ ಕಚೇರಿಯನ್ನು ಹೊಂದಿರುವ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದ ವ್ಯಾಪ್ತಿಯಲ್ಲಿ ರಾಜ್ಯಾದ್ಯಂತ 176 ಕಾನೂನು ಕಾಲೇಜುಗಳು ಕಾರ್ಯನಿರ್ವಹಿಸುತ್ತಿವೆ. ಈ ಕಾಲೇಜುಗಳಲ್ಲಿ ಒಟ್ಟಾರೆಯಾಗಿ ಮೂವತ್ತು ಸಾವಿರಕ್ಕೂ ಹೆಚ್ಚು ವಿದ್ಯಾರ್ಥಿಗಳು ಮೂರು ವರ್ಷಗಳ ಹಾಗೂ ಐದು ವರ್ಷಗಳ ಅವಧಿಯ ಪಠ್ಯಕ್ರಮದಲ್ಲಿ ವಿದ್ಯಾಭ್ಯಾಸ ಮಾಡುತ್ತಿದ್ದಾರೆ. ಈ ಪೈಕಿ ಸುಮಾರು ಅರ್ಧದಷ್ಟು ಕಾಲೇಜುಗಳು ಮೈಸೂರು, ಬೆಂಗಳೂರು, ಮಂಡ್ಯ, ಹಾಸನ, ತುಮಕೂರು, ಕೋಲಾರ, ಚಾಮರಾಜನಗರ ಹಾಗೂ ಬೆಂಗಳೂರು ದಕ್ಷಿಣ ಜಿಲ್ಲೆ ಸೇರಿದಂತೆ ಹಳೆ ಮೈಸೂರು ಪ್ರಾಂತ್ಯದ ಭಾಗದಲ್ಲಿಯೇ ಇವೆ.

ಬೆಂಗಳೂರು, ಮೈಸೂರು ಭಾಗದ ಶೇಕಡ 50ಕ್ಕೂ ಹೆಚ್ಚು ವಿದ್ಯಾರ್ಥಿಗಳು ಈ ಭಾಗದವರೇ ಆಗಿದ್ದಾರೆ. ಇವರೆಲ್ಲರೂ ತಮ್ಮ ಶೈಕ್ಷಣಿಕ ದಾಖಲಾತಿ, ಅಂಕಪಟ್ಟಿ ಅಥವಾ ಇತರೆ ಆಡಳಿತಾತ್ಮಕ ಕೆಲಸಗಳಿಗಾಗಿ ಪ್ರತಿ ಬಾರಿಯೂ ದೂರದ ಹುಬ್ಬಳ್ಳಿಗೆ ಪ್ರಯಾಣಿಸಬೇಕಾದ ಅನಿವಾರ್ಯತೆ ಇದೆ. ಇದು ವಿದ್ಯಾರ್ಥಿಗಳಿಗೆ ಆರ್ಥಿಕವಾಗಿ ಹೊರೆಯಾಗುವುದಲ್ಲದೆ, ಸಮಯದ ವ್ಯಯಕ್ಕೂ ಕಾರಣವಾಗುತ್ತಿದೆ.



ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಹಾಗೂ ಸರಳ ಆಡಳಿತಾತ್ಮಕ ಕ್ರಮಕ್ಕಾಗಿ ಮೈಸೂರು ಹಾಗೂ ಬೆಂಗಳೂರು ನಗರದಲ್ಲಿ ಕಾನೂನು ವಿಶ್ವವಿದ್ಯಾಲಯದ ಪ್ರಾದೇಶಿಕ ಕಚೇರಿಯನ್ನು ಶೀಘ್ರವಾಗಿ ಆರಂಭಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಕಾನೂನು ವಿದ್ಯಾರ್ಥಿಗಳ ಪರವಾಗಿ ಶಾಸಕರಾದ ರವಿ ಗಣಿಗ, ವಿಧಾನ ಪರಿಷತ್ ಸದಸ್ಯರಾದ ಪುಟ್ಟಣ್ಣ, ಎಸ್. ರವಿ, ಅನಿಲ್ ಕುಮಾರ್, ರಾಮೋಜಿಗೌಡ ಮತ್ತು ಜಿ.ಟಿ.ಶ್ರೀನಿವಾಸ್ ಅವರು ಕೂಡ ಸಿಎಂ ಅವರಿಗೆ ಪತ್ರದ ಮೂಲಕ ಮನವಿ ಮಾಡಿಕೊಂಡಿದ್ದಾರೆ.

Vikrama Vahini Kannada Daily, #204, Forest Layout, Jnanabharathi, Bangalore-560095
PRGI NO: KARKAN/2018/78481
vikramavahini@gmail.com
93535 91145
Printed by B.N. Murali Prasad, Published by Swarna Latha B.N., and Printed at Swarna Graphics, Forest Layout, Jnanabharathi, Bangalore -560059 and Published at Bangalore, Editor: B.N. Murali Prasad., Volume:9, Issue : 150,